ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME-13 ಸಂಪುಟ:13 | ISSUE- ಸಂಚಿಕೆ: 04 | PAGE- ಪುಟ 8 | ಬುಧುವಾರ 05.02.2025 | RS.ಬೆಲೆ 2/-

## ಬೆಳೆಗಳಿಗೆ ಹೆಚ್ಚಿನ ರಾಸಾಯನಿಕ ಬಳಸದಿರಿ:ಸಚಿವ ದರ್ಶನಾಪುರ



ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:ಫೆ:4:ದೇಶದ ನಾಗರಿಕರ, ಮಕ್ಕಳ ಆರೋಗ್ಯ ಮತ್ತುಭವಿಷ್ಯದಹಿತದೃಷ್ಟಿಯಿಂದ ರೈತರು ತಮ್ಮ ಬೆಳೆಗಳಲ್ಲಿ ಹೆಚ್ಚಿನ ರಾಸಾಯನಿಕಗಳು ಬಳಸದಂತೆ ಎಚ್ಚರಿಕೆವಹಿಸಲು ಜಿಲ್ಲಾ ಉಸ್ತುವಾರಿ ಸಚಿವರು ಹಾಗೂ ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಖಾತೆ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ್ ಅವರು ಸಲಹೆ ನೀಡಿದರು.

ನಗರದಜಿಲ್ಲಾಕ್ರೀಡಾಂಗಣದಲ್ಲಿಂದು ಜಿಲ್ಲಾ ಮಟ್ಟದ ಸಿರಿಧಾನ್ಯ ಮತ್ತು ಸಾವಯವ ಹಬ್ಬ ಉದ್ಘಾಟಿಸಿ ಅವರು ಮಾತನಾಡಿದರು.

ರೈತರು ಹೆಚ್ಚಿನ ಔಷಧಿ ಮತ್ತು ರಾಸಾಯನಿಕಗಳನ್ನು ತಮ್ಮ ಬೆಳೆಗಳಗಾಗಿ ಉಪಯೋಗಿಸಿ ಹೆಚ್ಚಿನ ಇಳುವರಿ ಪಡೆಯುವ ಮನೋಭಾವ ತೊಲಗಬೇಕು. ದವಸಧಾನ್ಯ, ತರಕಾರಿ ಬೆಳೆ ಹಾಗೂ ಹಣ್ಣುಗಳಿಗೆ ಹೆಚ್ಚಿನ ರಾಸಾಯನಿಕ ಬಳಕೆಯು ವಿಷಯುಕ್ತ ಆಹಾರವಾಗಿ ಪರಿಣಮಿಸುವುದರಿಂದ,ರೈತರು ಸಾವಯವ ರಸಗೊಬ್ಬರ ಮತ್ತು ಸಿರಿಧಾನ್ಯಗಳಂತಹ ಬೆಳೆಗಳಿಗೆ ಒತ್ತು ನೀಡಬೇಕು ಎಂದು ಅವರು ಹೇಳಿದರು.

ರಾಜ್ಯ ಸರ್ಕಾರವು ಕೂಡ ಕೃಷಿ ಇಲಾಖೆ ಮೂಲಕ ರೈತರ ಮನೆ ಬಾಗಿಲಿಗೆ ತಲುಪಿ ಸಾವಯವ, ಸಮಗ್ರ ಮತ್ತು ಸಿರಿಧಾನ್ಯಗಳ ಮೂಲಕ ತಮ್ಮ ಕೃಷಿ ಪದ್ಧತಿ ಬೆಳೆಸಿಕೊಳ್ಳಲು ಅರಿವು ಮೂಡಿಸುತ್ತಿದ್ದು,ಅವುಗಳ ಸದುಪಯೋಗಪಡೆದುಕೊಳ್ಳಬೇಕು.

ಯೋಜನಾ ಬದ್ಧವಾಗಿ ರಾಸಾಯನಿಕ ಇಲ್ಲದ ಕೃಷಿ ಪದ್ಧತಿ, ಅಳವಡಿಸಲು ವಿಶೇಷ ಗಮನ ನೀಡಬೇಕು. ಸರ್ಕಾರವು ಕೂಡ ಕೃಷಿ,ರಾಶಿ ಯಂತ್ರೋಪಕರಣಗಳು,ತುಂತುರು,ಹನಿ ನೀರಾವರಿ ಸೇರಿದಂತೆ ಹಲವು ರೀತಿಯಲ್ಲಿ ಸಬ್ಸಿಡಿ ಸೌಲಭ್ಯಗಳನ್ನು ನೀಡುತ್ತಿದ್ದು, ಹೈನುಗಾರಿಕೆಗೂ ಉತ್ತೇಜನ

(2ನೇ ಪುಟ ನೋಡಿ)

### ಬಡವರ ಗುಡಿಸಲನೆದುರು ಫೋಟೋ ತೆಗೆಸಿಕೊಳ್ಳುವವರಿಗೆ

# ಬಡತನ ಮೇಲಿನ ಚರ್ಚೆ ಬೋರಿಂಗಾಗಿರುತ್ತದೆ:ಪ್ರಧಾನಿ ಮೋದಿ



ನವದೆಹಲಿ:ಫೆ.4:"ಬಡವರಗುಡಿಸಲುಗಳಲ್ಲಿ ಫೋಟೋ ಸೆಷನ್‌ಗಳನ್ನು ಮಾಡುವ" ನಾಯಕರಿಗೆ ಸಂಸತ್ತಿನಲ್ಲಿ ಬಡತನದ ಬಗ್ಗೆ ಚರ್ಚೆ ಮಾಡುವುದು ಅತ್ಯಂತ "ನೀರಸ"ವಾಗಿರುತ್ತದೆ ಎಂದು ಪ್ರಧಾನಿ ನರೇಂದ್ರಮೋದಿ ಅವರು ಮಂಗಳವಾರ ಪ್ರತಿಪಕ್ಷ ನಾಯಕ ರಾಹುಲ್ ಗಾಂಧಿ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದರು.

ಇಂದು ಲೋಕಸಭೆಯಲ್ಲಿ ರಾಷ್ಟ್ರಪತಿಗಳ ಭಾಷಣದ ಮೇಲಿನ ವಂದನಾ ನಿರ್ಣಯಕ್ಕೆ ಉತ್ತರಿಸಿದ ಪ್ರಧಾನಿ ಮೋದಿ, ವಿಶೇಷವಾಗಿ ದೇಶದ ಹಿಂದುಳಿದ ವರ್ಗಗಳ ಅಭಿವೃದ್ಧಿಗೆ ತಮ್ಮ ಸರ್ಕಾರದ ಬದ್ಧತೆಯನ್ನು ಪುನರುಚ್ಚರಿಸಿದರು.

ತಮ್ಮ ಮನೋರಂಜನೆಗಾಗಿ ಬಡವರ ಗುಡಿಸಲಿನೆದುರು ಹೋಗಿ ಫೋಟೋಶೂಟ್ ಮಾಡಿಸಿಕೊಳ್ಳುವವರಿಗೆ ಸಂಸತ್ ನಲ್ಲಿ ಬಡವರ ಕುರಿತಾದ ಚರ್ಚೆ, ಆ ಕುರಿತಾದ ಭಾಷಣ ನೀರಸ ಅಥವಾ ಬೋರಿಂಗ್ ಆಗಿಯೇ ಇರುತ್ತದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರ ಭಾಷಣ ನೀರಸವಾಗಿತ್ತು ಎಂಬ ರಾಹುಲ್ ಗಾಂಧಿ ಹೇಳಿಕೆಗೆ ಮೋದಿ ತಿರುಗೇಟು ನೀಡಿದರು.

ಬಡತನ ರೇಖೆಗಿಂತ ಕೆಳಗಿರುವ ಜನರಿಗೆ ನಮ್ಮ ಸರ್ಕಾರ 4 ಕೋಟಿಗೂ ಹೆಚ್ಚು ಮನೆಗಳನ್ನು ನಿರ್ಮಿಸಿದೆ ಮತ್ತು 12

(2ನೇ ಪುಟ ನೋಡಿ)

## ತಕ್ಷಣ ಬೇಕಾಗಿದ್ದಾರೆ

ಸರ್ಕಾರದಿಂದ ಮಾನ್ಯತೆ ಪಡೆದ ಹಾಗೂ ಎಂಟು ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಕಟಗೊಳ್ಳುತ್ತಿರುವ ಮಲ್ಲಮ್ಮ ನುಡಿ ಪ್ರಾದೇಶಿಕ ಕನ್ನಡ ದಿನ ಪತ್ರಿಕೆಯಲ್ಲಿ. ಬೀದರ್, ಕಲಬುರ್ಗಿ, ಯಾದಗಿರಿ, ರಾಯಚೂರು, ಬಳ್ಳಾರಿ, ಬಾಗಲಕೋಟೆ, ಜಿಲ್ಲಾವಾರು. ಜಾಹಿರಾತು ವ್ಯವಸ್ಥಾಪಕರಾಗಿ ಕೆಲಸ ಮಾಡಲು ತಕ್ಷಣ ಬೇಕಾಗಿದ್ದಾ-ರೆ. ಅನುಭವ ಇದ್ದವರಿಗೆ ಆದ್ಯತೆ ನೀಡಲಾಗುವುದು. ಅಸಕ್ತರು ತಮ್ಮ ಸ್ವವಿವರ ಹಾಗೂ ಅನುಭವದ ಪ್ರಮಾಣ ಪತ್ರದೊಂದಿಗೆ ಹುಮನಾಬಾದ್ ಪಟ್ಟಣದ ಗಾದಾ ಕಾಂಪ್ಲೆಕ್ಸ್ ನಲ್ಲಿ ಇರುವ ಮಲ್ಲಮ್ಮ ನುಡಿ ಪ್ರಾದೇಶಿಕ ಪತ್ರಿಕೆಯ ಕಾರ್ಯಲಯಕ್ಕೆ ಸಂಪರ್ಕಿಸಲು ಕೊರಿದೆ.

ಸಂಪಾದಕರು.

ದೂ.9449732000,9448604450

## ಗುಜರಾತ್ ನಲ್ಲಿ ಏಕರೂಪ ನಾಗರಿಕ ಸಂಹಿತೆ ಜಾರಿಗೆಕ್ರಮ

ಅಹ್ಮದಾಬಾದ್:ಫೆ.4: ಉತ್ತರಾಖಂಡದ ನಂತರ, ಗುಜರಾತ್ ರಾಜ್ಯ ಏಕರೂಪ ನಾಗರಿಕ ಸಂಹಿತೆಯನ್ನು ಜಾರಿಗೆ ತರಲು ಸಜ್ಜಾಗಿದ್ದು, ಕರಡು ಮಾರ್ಗಸೂಚಿಗಳನ್ನು ತಯಾರಿಸಲು ಐದು ಸದಸ್ಯರ ಸಮಿತಿಯನ್ನು ರಚಿಸಿದೆ. ನಿವೃತ್ತ ಸುಪ್ರೀಂ ಕೋರ್ಟ್ ನ್ಯಾಯಾಧೀಶೆ ರಂಜನಾ ದೇಸಾಯಿ ಅಧ್ಯಕ್ಷತೆಯ ಈ ಸಮಿತಿಯು 45 ದಿನಗಳಲ್ಲಿ ತನ್ನವರದಿಯನ್ನುಸಲ್ಲಿಸುವಂತೆ ಕೇಳಲಾಗಿದೆ.

ಈಮಾಹಿತಿಯನ್ನುಗುಜರಾತ್ ಮುಖ್ಯಮಂತ್ರಿ ಭೂಪೇಂದ್ರ ಪಟೇಲ್ ಅಧಿಕೃತವಾಗಿ ಘೋಷಿಸಿದ್ದು,ಪ್ರಧಾನಿನರೇಂದ್ರ ಮೋದಿ "ಎಲ್ಲರಿಗೂ ಸಮಾನ ಹಕ್ಕುಗಳನ್ನುಪ್ರತಿಪಾದಿಸುತ್ತಾರೆ" ಮತ್ತು ಯುಸಿಸಿ ಆ ದಿಕ್ಕಿನಲ್ಲಿ ಒಂದು ಹೆಜ್ಜೆಯಾಗಿದೆ ಎಂದು ಹೇಳಿದರು.

ರಂಜನಾ ದೇಸಾಯಿ ಅವರಲ್ಲದೆ, ಸಮಿತಿಯಲ್ಲಿ

(2ನೇ ಪುಟ ನೋಡಿ)

## ಬಸ್ ಕಂಡಕ್ಟರ್ ಮೇಲೆ ಹಲ್ಲೆ : ಸಂಚಾರ ಸ್ಥಗಿತ!



ಮಲ್ಲಮ್ಮ ನುಡಿ ವಾರ್ತೆ ಬೀದರ. ಫೆ. 04 : ಜಿಲ್ಲೆಯ ಭಾಲ್ಕಿ ತಾಲೂಕಿನ ಜೋಳದಾಪಕಾ ಗ್ರಾಮದ ಬಳಿ ಫೆಬ್ರವರಿ 4, 2025ರಂದು ನಡೆದ ಘೋರ ಘಟನೆಯು ಸಾರಿಗೆ ಸಂಸ್ಥೆಗಳ ಸುರಕ್ಷತೆ ಮತ್ತು ನೌಕರರ ಹಕ್ಕುಗಳ ಬಗ್ಗೆ ಪ್ರಶ್ನೆಗಳನ್ನು ಎತ್ತಿದೆ. ಭಾಲ್ಕಿಯಿಂದ ನಿಲಮನಳ್ಳಿ ಗ್ರಾಮಕ್ಕೆ ತೆರಳುತ್ತಿದ್ದ ಬಸ್ ಒಂದರಲ್ಲಿ ಪ್ರಯಾಣಿಕನೊಬ್ಬ ಕ್ಷುಲ್ಲಕ ವಿವಾದದ ನೆಪದಲ್ಲಿ ಕಂಡಕ್ಟರ್ ಶಶಿಕಾಂತ್ ಅವರ

(2ನೇ ಪುಟ ನೋಡಿ)

## ಬಾಬು ಕೆ ವೀರೇಗೌಡ ಅವರಿಗೆ ಗೌರವ ಡಾಕ್ಟರೇಟ್ ಪ್ರದಾನ ಮಾಡಿದ ರಾಜ್ಯಪಾಲರು




ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು,ಫೆ.04:ಮೈಸೂರು ವಿಶ್ವವಿದ್ಯಾಲಯದ ವತಿಯಿಂದ ಬಾಬು.ಕೆ.ವೀರೇಗೌಡ ಅವರಿಗೆ ನೀಡಲಾಗಿರುವ ಗೌರವ ಡಾ-ಕ್ಟರೇಟ್ ಅನ್ನು ರಾಜಭವನದ ಬಾಂಕ್ವೆಟ್ ಸಭಾಂಗಣದಲ್ಲಿ ನಡೆದ ಸಮಾರಂಭದಲ್ಲಿ ಕರ್ನಾಟಕದ ಗೌರವಾನ್ವಿತ ರಾಜ್ಯಪಾಲರಾದ ಥಾವರ್ ಚಂದ್ ಗೆಹ್ಲೋಟ್ ಅವರು ಪ್ರದಾನ ಮಾಡಿದರು.

ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದ ರಾಜ್ಯಪಾಲರು, "ಮೈಸೂರು ವಿಶ್ವವಿದ್ಯಾಲಯವು ದೇಶದ ಆರನೇ ಅತ್ಯಂತ ಹಳೆಯ ವಿಶ್ವವಿದ್ಯಾಲಯ ಮತ್ತು ಕರ್ನಾಟಕ ರಾಜ್ಯದ ಮೊದಲ ವಿಶ್ವವಿದ್ಯಾಲಯವಾಗಿದೆ. ಈ ವಿಶ್ವವಿದ್ಯಾಲಯವು ದೇಶಕ್ಕೆ ಅನೇಕ ವಿಜ್ಞಾನಿಗಳು, ತತ್ವಜ್ಞಾನಿಗಳು ಮತ್ತು ರಾಜಕಾರಣಿಗಳನ್ನು ನೀಡಿದ್ದು, ಇವರೆಲ್ಲರೂ ಕರ್ನಾಟಕ ಮತ್ತು ಭಾರತದ ನಿರ್ಮಾಣದಲ್ಲಿ ಜ್ಞಾನ ಮತ್ತು ವಿಜ್ಞಾನ ಕ್ಷೇತ್ರದಲ್ಲಿ ಕೊಡುಗೆ ನೀಡಿದ್ದಾರೆ" ಎಂದು ಶ್ಲಾಘಿಸಿದರು.

(2ನೇ ಪುಟ ನೋಡಿ)

## ಖಾಸಗಿ ಶಾಲೆಗೆ ಹುಸಿ ಬಾಂಬ್ ಬೆದರಿಕೆ: ಆತಂಕ ಬೇಡ: ಸಚಿವ ಪ್ರಿಯಾಂಕ್ ಖರ್ಗೆ





ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ:ಫೆ.4:ಕರುಣೇಶ್ವರ ನಗರದಲ್ಲಿರುವ ವಿಧಾನಪರಿಷತ್ ಸದಸ್ಯ ಬಿ.ಜಿ.ಪಾಟೀಲ್ ಒಡೆತನದ ಚಂದ್ರಕಾಂತ ಪಾಟೀಲ್ ಸೆಂಟ್ರಲ್ ಸ್ಕೂಲ್‌ಗೆ ಬಾಂಬ್ ಬೆದರಿಕೆ ಇ-ಮೇಲ್ ಬಂದಿದೆ.

ಮಧ್ಯಾಹ್ನ 1 ಗಂಟೆಗೆ ಬಾಂಬ್ ಸ್ಫೋಟಿಸುವುದಾಗಿ ಬೆದರಿಕೆ ಹಾಕಲಾಗಿತ್ತು. ಇದ-ರಿಂದ ಶಾಲೆಯಲ್ಲಿ ಕೆಲಕಾಲ ಆತಂಕದ ವಾತಾವರಣ ನಿರ್ಮಾಣವಾಗಿತ್ತು. ಸಂದೇಶ ಕಂಡ ಕೂಡಲೆ ಶಾಲೆಯ ಸಿಬ್ಬಂದಿ ಮಕ್ಕಳನ್ನು ಮನೆಗೆ ಕಳುಹಿಸಿದ್ದಾರೆ. ಅಶೋಕ ನಗರ ಪೊಲೀಸ್ ಠಾಣೆ ಪಿ.ಐ.ಅರುಣ್ ಹಾಗೂ ಸಿಬ್ಬಂದಿ ಮತ್ತು ಬಾಂಬ್ ನಿಷ್ಕ್ರಿಯ ದಳ , ಬೆರಳಚ್ಚು ತಜ್ಞರು ಮತ್ತು ಶ್ವಾನದಳ ಶಾಲೆಗೆ ಭೇಟಿ ನೀಡಿದ್ದು, ಪರಿಶೀಲನೆ ನಡೆಸಿದ್ದಾರೆ. ಬಾಂಬ್ ಬೆದರಿಕೆ ಸಂದೇಶ ತಮಿಳುನಾಡಿನಿಂದ ಬಂದಿದೆ ಎನ್ನಲಾಗಿದೆ. ಸುದ್ದಿತಿಳಿದು ನಗರ ಪೊಲೀಸ ಆಯುಕ್ತ ಡಾ.ಶರಣಪ್ಪ ಹಾಗೂ ಇತರ ಅಧಿಕಾರಿ ಸಿಬ್ಬಂದಿ ಭೇಟಿ ನೀಡಿ ಪರಿಶೀಲಿಸಿದ್ದಾರೆ.

### ಹುಸಿ ಬಾಂಬ್ ಮೇಲ್, ಪಾಲಕರು ಹಾಗೂ ವಿದ್ಯಾರ್ಥಿಗಳು ಆತಂಕಕ್ಕೊಳಗಾಗಬಾರದು: ಸಚಿವ ಪ್ರಿಯಾಂಕ್ ಖರ್ಗೆ



ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ ನಗರದ ಖಾಸಗಿ ಶಾಲೆಗೆ ಬಾಂಬ್ ಬೆದರಿಕೆ ಇ-ಮೇಲ್ ಬಂದಿರುವ ಹಿನ್ನೆಲೆಯಲ್ಲಿ ನಗರದ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಶಾಲೆಯ ಸಂಪೂರ್ಣ ತಪಾಸಣೆ ನಡೆಸಲಾಗಿದ್ದು ಯಾವುದೇ ಬಾಂಬ್ ಅಥವಾ ಸ್ಫೋಟಕ ವಸ್ತು ಕಂಡು ಬಂದಿಲ್ಲ. ಹಾಗಾಗಿ, ಪೋಷಕರು, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ಆತಂಕ ಪಡುವ ಅಗತ್ಯವಿಲ್ಲ ಎಂದು ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತ ರಾಜ್ ಮತ್ತು ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆಹೇಳಿದ್ದಾರೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ಹೊಸ ಜೇವರ್ಗಿ ರಸ್ತೆಯ ಮಾರ್ಗದಲ್ಲಿರುವ ಖಾಸಗಿ ಶಾಲೆಯ ಮೇಲ್ ಐಡಿಗೆ ಇಂದು ಮೇಲ್ ಬಂದಿದ್ದು, ಶಾಲೆಗೆ ಬಾಂಬ್ ಬೆದರಿಕೆ ಹಾಕಲಾಗಿತ್ತು. ಕೂಡಲೇ ಕಾರ್ಯಪ್ರವೃತ್ತರಾದ ನಗರದ ಪೊಲೀಸರು, ಶಾಲೆಗೆ ಶ್ವಾನದಳ ಹಾಗೂ ಬಾಂಬ್ ನಿಷ್ಕ್ರಿಯ ದಳ ದೊಂದಿಗೆ ದೌಡಾಯಿಸಿ ತಕ್ಷಣ ಶಾಲೆಯಿಂದ ಮಕ್ಕಳನ್ನು ಹೊರಗಡೆ ಕಳಿಸಿದರು. ಶಾಲೆಯ ಪ್ರತಿಯೊಂದು ಸ್ಥಳವನ್ನು ಕೂಲಂಕುಷವಾಗಿ ಪರಿಶೀಲಿಸಿದಾಗ ಯಾವುದೇ ಬಾಂಬ್ ಅಥವಾ ಸ್ಫೋಟದ ವಸ್ತು ಕಂಡುಬಂದಿರುವುದಿಲ್ಲ.

ಶಾಲೆಯ ಅಧಿಕೃತ ಮೇಲ್ ಐಡಿಗೆ ಬಂದಿರುವ ಮೇಲ್ ನಲ್ಲಿರುವ ಭಾಷೆ ತಮಿಳು ಭಾಷೆಯಾಗಿದ್ದು, ಪೊಲೀಸರು ತಮಿಳು ಭಾಷೆಯಿಂದ ಕನ್ನಡಕ್ಕೆ ತರ್ಜುಮೆ ಮಾಡಿ ನೋಡಿದಾಗ ಕಲಬುರಗಿಯ ಬಗ್ಗೆಯಾಗಲೀ ಅಥವಾ ಶಾಲೆಯ ಬಗ್ಗೆಯಾಗಲೀ ಬರೆಯಲಾಗಿಲ್ಲ. ಹಾಗಾಗಿ, ಮೇಲ್ ನಲ್ಲಿರುವ ವಿಷಯ ಕಲಬುರಗಿಗೆ ಸಂಬಂಧಿಸಿರದ ಕಾರಣ ಇದೊಂದು ಹುಸಿ ಬಾಂಬ್ ಮೇಲ್ ಎಂದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ. ಹುಸಿ ಬಾಂಬ್ ಮೇಲ್ ಎಂದು ಪರಿಗಣಿಸಿದರೂ ಕೂಡಾ ನಗರದ ಪೊಲೀಸರು ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡು ಸಮಗ್ರ ತನಿಖೆ ನಡೆಸುತ್ತಿದ್ದಾರೆ. ಹಾಗಾಗಿ, ನಗರದ ಸಾರ್ವಜನಿಕರು,

ಪಾಲಕ-ಪೋಷಕರು ಹಾಗೂ ವಿದ್ಯಾರ್ಥಿಗಳು ಯಾವುದೇ ಆತಂಕ ಹಾಗೂ ಉದ್ವೇಗಕ್ಕೊಳಗಾಗಬಾರದು ಎಂದು ಕೋರುತ್ತೇನೆ ಹಾಗೂ ನಗರದಲ್ಲಿ ಸೂಕ್ತ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳುವಂತೆ ಪೊಲೀಸರಿಗೆ ಸೂಚಿಸಲಾಗಿದೆ ಎಂದು ಸಚಿವರು ಹೇಳಿದ್ದಾರೆ.

## ಒಂದನೇ ಪುಟದಿಂದ

# ಬಳಸದಿರಿ:ಸಚಿವ ದರ್ಶನಾಪುರ

ನೀಡುತ್ತಿದೆ. ರೈತರು ಈಗ ಪುನಃ ಹೈನುಗಾರಿಕೆಗಳತ್ತ ವಾಲುತ್ತಿದ್ದಾರೆ. ಅದರಂತೆ ಕೃಷಿಯಲ್ಲಿ ರೈತರು ಇತಿಮಿತಿಯಲ್ಲಿ ಔಷಧಿ ಬಳಸಬೇಕು. ವಿಜ್ಞಾನ ಕೇಂದ್ರ ಹಾಗೂ ಕೃಷಿ ಮಹಾವಿದ್ಯಾಲಯಗಳ ಮೂಲಕವೂ ರೈತರಿಗೆ ಅರಿವು ಮೂಡಿಸುತ್ತಿದ್ದು, ಇದರ ಸದುಪಯೋಗ ಪಡೆಯುವಂತೆ ಕರೆ ನೀಡಿದರು.ಸಾವಯವ ರಸಗೊಬ್ಬರಗಳ ಮೂಲಕದ ಆಂಧ್ರ ಮಾದರಿಯ ಕೃಷಿ ಪದ್ಧತಿ ಅಳವಡಿಸಿಕೊಳ್ಳಬೇಕು.ಔಷಧಿ ಇಲ್ಲದ ಆಹಾರ ಸೇವಿಸುವ ಪರಿಪಾಠ ತಮ್ಮ ಕುಟುಂಬದಿಂದಲೇ ಆರಂಭಿಸಿ, ಎಲ್ಲರ ಆರೋಗ್ಯ ದ ಬಗ್ಗೆ ಕಾಳಜಿವಹಿಸಬೇಕು. ಔಷಧಿ ಇಲ್ಲದ ತರಕಾರಿ ಬೆಳೆಗಾಗಿ ತಮ್ಮ ಒಂದೆರಡು ಎಕರೆ ಜಮೀನು ಮೀಸಲಿಡಬೇಕು. ಸ್ವಂತ ಜಮೀನು ಇದ್ದಲ್ಲಿ ಕೃಷಿ ಬೆಳೆಗೆ ಗಮನ ನೀಡಲು ಸಲಹೆ ನೀಡಿದರು.ದೇಶದಲ್ಲಿ ದಿನನಿತ್ಯ ಜನಸಂಖ್ಯಾ ಬೆಳವಣಿಗೆಯಾಗುತ್ತಿದೆ . ಕೃಷಿ ಭೂಮಿ ಕಡಿಮೆಯಾಗಿ ಕೈಗಾರಿಕೆ ಕ್ಷೇತ್ರ ಬೆಳೆಯುತ್ತಿದೆ. ಕೃಷಿ ಕ್ಷೇತ್ರ ಕಡಿಮೆಯಾಗುತ್ತಿದ್ದರೂ, ದೇಶದ ಜನಸಂಖ್ಯೆ ಗೆ ಅನುಗುಣವಾಗಿ ಕೃಷಿ ಬೆಳೆ ಬೆಳೆದು ಬೆನ್ನೆಲುಬಾಗಿ ರೈತರು ನಿಂತಿರುವದು ಅಭಿನಂದನಾರ್ಹವಾಗಿದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ನಗರ ಶಾಸಕರಾದ ಶ್ರೀ ಚೆನ್ನಾರೆಡ್ಡಿ ಪಾಟೀಲ್ ತುನ್ನೂರ ಅವರು, ರೈತರು ತಮ್ಮ ಕೃಷಿ ಪದ್ಧತಿಯಲ್ಲಿ ಸಾವಯವ ರಸಗೊಬ್ಬರ ಬಳಸಬೇಕು. ಆರೋಗ್ಯಕ್ಕೆ ಅತ್ಯಂತ ಉಪಯುಕ್ತವಾಗಿರುವ ಸಿರಿಧಾನ್ಯಗಳ ಬೆಳೆಗೆ ವಿಶೇಷ ಒತ್ತು ನೀಡಬೇಕು. ರಾಜ್ಯ ಸರ್ಕಾರವು ಕೂಡ ಕೃಷಿ ಇಲಾಖೆ ಮೂಲಕ ವಿವಿಧ ಯೋಜನೆ ಗಳಡಿ ಯಂತ್ರೋಪಕರಣಗಳು, ಸಬ್ಸಿಡಿ ಸೌಲಭ್ಯ ನೀಡುತ್ತಿದ್ದು, ರೈತರು ಇದರ ಸದುಪಯೋಗ ಪಡೆದುಕೊಂಡು ಆರ್ಥಿಕವಾಗಿ ಸಬಲರಾಗುವಂತೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ

ಹತ್ತು ಜನ ರೈತರಿಗೆ ಶ್ರೇಷ್ಠ ಕೃಷಿಕ ಪ್ರಶಸ್ತಿ ನೀಡಿ ಸನ್ಮಾನಿಸಲಾಯಿತು. ಸಿರಿಧಾನ್ಯ ಮಹತ್ವದ ಕುರಿತ ಭಾಷಣ ಸ್ಪರ್ಧೆಯಲ್ಲಿ ವಿಜೇತರಾದ ವಿದ್ಯಾರ್ಥಿಗಳಿಗೆ ಪ್ರಮಾಣ ಪತ್ರ ವಿತರಿಸಲಾಯಿತು. ಅದರಂತೆ ಪಾಕ ಸ್ಪರ್ಧೆಯಲ್ಲಿ ವಿಜೇತರಾದವರಿಗೆ ಸನ್ಮಾನಿಸಲಾಯಿತು. ಜಿಲ್ಲಾ ಉಸ್ತುವಾರಿ ಸಚಿವರು ಇದೇ ಸಂದರ್ಭದಲ್ಲಿ ವಿವಿಧ ಯಂತ್ರೋಪಕರಣಗಳು ಹಾಗೂ ವಿವಿಧ ಮಳಿಗೆಗಳನ್ನು ಉದ್ಘಾಟಿಸಿದರು.ರಾಶಿ ಪೂಜೆ ನೆರವೇರಿಸಿದರು.

ನಗರಸಭೆ ಅಧ್ಯಕ್ಷ ಲಲಿತಾ ಅನಪುರ,

ಜಿಲ್ಲಾಧಿಕಾರಿ ಡಾ. ಸುಶೀಲಾ ಬಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪೃಥ್ವಿಕ್ ಶಂಕರ್, ಭೀಮರಾಯನಗುಡಿ ಕೃಷಿ ಮಹಾವಿದ್ಯಾಲಯದ ಡೀನ್ ಪ್ರಕಾಶ್ ಕುಚನೂರ್, ಕವಡಿಮಟ್ಟಿ ,ಕೃಷಿ ವಿಜ್ಞಾನ ಕೇಂದ್ರದ ಮುಖ್ಯಸ್ಥರು ಹಾಗೂ ಹಿರಿಯ ವಿಜ್ಞಾನಿಗಳಾದ ಡಾ. ಜಯಪ್ರಕಾಶ್ ನಾರಾಯಣ್, ಜಾನಪದ ಕವಿ ಸಿದ್ದಪ್ಪ ಬಿಳಗಿ, ಜಿಲ್ಲಾ ಕೃಷಿಕ ಸಮಾಜದ ಅಧ್ಯಕ್ಷ ಬಸನಗೌಡ ಮಾಲಿ ಪಾಟೀಲ್, ಸೋಮನಾಥ ರೆಡ್ಡಿ, ಉಪಸ್ಥಿತರಿದ್ದರು. ಜಂಟಿ ಕೃಷಿ ನಿರ್ದೇಶಕರಾದ ರತೇಂದ್ರನಾಥ್ ಸುಗೂರ, ಪ್ರಾಸ್ತಾವಿಕವಾಗಿ ಮಾತನಾಡಿದರು.ಕೃಷಿ ಸಹಾಯಕ ನಿರ್ದೇಶಕರಾದ ರಾಜಕುಮಾರ್ ಕಾರ್ಯಕ್ರಮ ನಿರ್ವಹಿಸಿದರು. ಬೂದಯ್ಯ ಹಿರೇಮಠ ಪ್ರಾರ್ಥಿಸಿದರು.

# ಸಂಚಾರ ಸ್ಥಗಿತ!

ಮೇಲೆ ಹಲ್ಲೆ ಮಾಡಿ ಪಲಾಯನ ಮಾಡಿದ್ದಾನೆ.

ಈ ಘಟನೆಯ ನಂತರ, ಭಾಲ್ಕಿ ಬಸ್ ನಿಲ್ದಾಣದಲ್ಲಿ ಸಾರಿಗೆ ನೌಕರರು ಪ್ರತಿಭಟನೆ ನಡೆಸಿ, ದೋಷಿಯನ್ನು ಬಂಧಿಸುವಂತೆ ಪೊಲೀಸರಿಗೆ ಒತ್ತಾಯಿಸಿದ್ದಾರೆ.

ವಿವರಗಳ ಪ್ರಕಾರ, ಪ್ರಯಾಣಿಕ ಮತ್ತು ಕಂಡಕ್ಟರ್ ನಡುವೆ ಟಿಕೆಟ್ ಅಥವಾ ಕಿರುಗಾಣಿ ಸಂಬಂಧಿತ ವಿವಾದವೊಂದು ಪ್ರಾರಂಭವಾಗಿ, ಅದು ಹಿಂಸಾತ್ಮಕವಾಗಿ ಬದಲಾಯಿತು. ಪ್ರಯಾಣಿಕನು ಶಶಿಕಾಂತ್ ಅವರ ತಲೆಗೆ ಗಂಭೀರ ಗಾಯಗಳನ್ನು ಮಾಡಿದ ನಂತರ, ಸ್ಥಳದಿಂದ ಓಡಿಹೋದನು. ಗಾಯಗೊಂಡ ಕಂಡಕ್ಟರ್ ಅವರನ್ನು ಭಾಲ್ಕಿ ಸರ್ಕಾರಿ ಆಸ್ಪತ್ರೆಗೆ ತರಲಾಯಿತು, ಅಲ್ಲಿ ಅವರು ಪ್ರಾಥಮಿಕ ಚಿಕಿತ್ಸೆ ಪಡೆದು ಸ್ಥಿರವಾಗಿದ್ದಾರೆ.

ಈ ಘಟನೆಯಿಂದ ಕೋಪಗೊಂಡ ಸಾರಿಗೆ ನೌಕರರು ಕೆಲ ಗಂಟೆಗಳ ಕಾಲ ಬಸ್ ಸಂಚಾರವನ್ನು ಸ್ಥಗಿತಗೊಳಿಸಿ, 'ಕಂಡಕ್ಟರ್ ಮೇಲೆ ಹಲ್ಲೆ ಅಸಹನೀಯ' ಎಂದು ಘೋಷಿಸಿದರು. ಪ್ರತಿಭಟನೆಯಿಂದಾಗಿ, ಭಾಲ್ಕಿ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ನೂರಾರು ಪ್ರಯಾಣಿಕರು ಸಂಚಾರ ಸೌಲಭ್ಯದಿಂದ ವಂಚಿತರಾದರು. ಸಾರಿಗೆ ಸಂಸ್ಥೆಯ ಒಕ್ಕೂಟದ ನೇತೃತ್ವದಲ್ಲಿ ನೌಕರರು, 'ಹಲ್ಲೆಗಾರನನ್ನು ತಕ್ಷಣ ಬಂಧಿಸಿ, ನಮಗೆ ಸುರಕ್ಷಿತ ಕೆಲಸದ ವಾತಾವರಣ ನೀಡಿ' ಎಂದು ಘೋಷಣೆ ಮಾಡಿದರು.

ಪೊಲೀಸರು ಪ್ರಕರಣವನ್ನು ಗಂಭೀರವಾಗಿ ತೆಗೆದುಕೊಂಡು, ದೋಷಿಯನ್ನು ಹುಡುಕುತ್ತಿದ್ದಾರೆ. ಭಾಲ್ಕಿಯ ಪೊಲೀಸ್ ಅಧಿಕಾರಿ ಶಿವನಗೌಡ ಪಾಟೀಲ್ ಹೇಳಿದ್ದು, 'ಆರೋಪಿಯನ್ನು ಶೀಘ್ರವಾಗಿ ಗುರುತಿಸಲು ಸಿಬ್ಬಂದಿಯನ್ನು ನಿಯೋಜಿಸಲಾಗಿದೆ. ಕಾನೂನು ಕ್ರಮವು ಕಟ್ಟುನಿಟ್ಟಾಗಿ ತೆಗೆದುಕೊಳ್ಳಲಾಗುವುದು.'

ಈ ಘಟನೆಯು ಸಾರ್ವಜನಿಕ ಸಾರಿಗೆ ನೌಕರರ ಸುರಕ್ಷತೆ ಮತ್ತು ಪ್ರಯಾಣಿಕರ ಜವಾಬ್ದಾರಿಯ ಬಗ್ಗೆ ಸಮಾಜದಲ್ಲಿ ಚರ್ಚೆಯನ್ನು ಪ್ರಾರಂಭಿಸಿದೆ. ಸರ್ಕಾರ ಮತ್ತು ಪೊಲೀಸ್ ಇಲಾಖೆಯು ನೌಕರರ ಹಕ್ಕುಗಳನ್ನು ರಕ್ಷಿಸುವ ಕ್ರಮಗಳನ್ನು ತೆಗೆದುಕೊಳ್ಳಬೇಕು ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ.

# ಬೋರಿಂಗಾಗಿರುತ್ತದೆ:ಪ್ರಧಾನಿ ಮೋದಿ

ಕೋಟಿ ಶೌಚಾಲಯಗಳನ್ನು ಒದಗಿಸಿದೆ ಎಂದು ಮೋದಿ ಹೇಳಿದರು.

"ಮಳೆಗಾಲದಲ್ಲಿ, ಜನರು ತಾತ್ಕಾಲಿಕ ಛಾವಣಿಗಳ ಅಡಿಯಲ್ಲಿ ವಾಸಿಸುವುದು ಕಷ್ಟಕರವಾಗಿತ್ತು. ಈಗ 4 ಕೋಟಿ ಕುಟುಂಬಗಳು ತಮ್ಮದೇ ಆದ ಮನೆಗಳನ್ನು ಹೊಂದುವಂತೆ ನಾವು ಖಚಿತಪಡಿಸಿಕೊಂಡಿದ್ದೇವೆ" ಎಂದು ಪ್ರಧಾನಿ ತಿಳಿಸಿದರು.ಕಾಂಗ್ರೆಸ್ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ ಮೋದಿ, ಅವರ ದೀರ್ಘಕಾಲದ ಘೋಷಣೆಯಾದ "ಗರೀಬಿ ಹಟಾವೋ"(ಮಾಜಿ ಪ್ರಧಾನಿ ಇಂದಿರಾ ಗಾಂಧಿಯವರ ಬಡತನ ನಿರ್ಮೂಲನೆ ಘೋಷಣೆ) ಅನ್ನು ರಾಜಕೀಯ ಲಾಭಕ್ಕಾಗಿ ಮಾತ್ರ ಬಳಸಲಾಗಿದೆ. ಆದರೆ "ನಾವು ಸುಳ್ಳು ಘೋಷಣೆಗಳನ್ನು ನೀಡಿಲ್ಲ. ಜನರಿಗೆ ನಿಜವಾದ ಅಭಿವೃದ್ಧಿ" ಮಾಡಿದ್ದೇವೆ ಎಂದರು."ದೇಶದ ಬಡ ಜನರಿಗೆ ಮನೆ ಕಟ್ಟಿಕೊಡುವ ನಮ್ಮ ಉದ್ದೇಶವನ್ನು ಹಲವರು ಅಣಕಿಸುತ್ತಿದ್ದಾರೆ. ಆದರೆ ಪಕ್ಕಾ ಮನೆ, ಶೌಚಾಲಯ, ವಿದ್ಯುತ್ ಹೊಂದುವ ಬಡಜನರ ಕನಸಿನ ಮಹತ್ವ ಅರಮನೆಯಂತಹ ಮನೆಗಳಲ್ಲಿ ವಾಸಿಸುವ ಜನರಿಗೆ ತಿಳಿಯುವುದಿಲ್ಲ.." ಎಂದು ಮೋದಿ ವಿಪಕ್ಷ ನಾಯಕರನ್ನು ತಿವಿದರು.ಹಿಂದಿನ ಸರ್ಕಾರಗಳ ಅವಧಿಯಲ್ಲಿ ನಡೆದ ಭ್ರಷ್ಟಾಚಾರವನ್ನು ಉಲ್ಲೇಖಿಸಿದ ಪ್ರಧಾನಿ, "ಒಬ್ಬ ಪ್ರಧಾನಿಯನ್ನು ಮಿಸ್ಟರ್ ಕ್ಲೀನ್ ಎಂದು ಕರೆಯುವ ಫ್ಯಾಷನ್ ಇತ್ತು. ಆದರೆ ದೆಹಲಿಯಿಂದ 1 ರೂಪಾಯಿ ಕಳುಹಿಸಿದರೆ ಜನರಿಗೆ ಕೇವಲ 15 ಪೈಸೆ ಮಾತ್ರ ಸಿಗುತ್ತದೆ ಎಂದು ಅವರೇ ಒಪ್ಪಿಕೊಂಡಿದ್ದರು ಎಂದು ಹೇಳುವ ಮೂಲಕ ಪ್ರಧಾನಿ ಮೋದಿ ಸರ್ಕಾರಿ ಯೋಜನೆಗಳಲ್ಲಿನ ಭ್ರಷ್ಟಾಚಾರದ ಬಗ್ಗೆ ರಾಜೀವ್ ಗಾಂಧಿಯವರ ಹಳೆಯ ಹೇಳಿಕೆಯನ್ನು ಉಲ್ಲೇಖಿಸಿದ್ದಾರೆ. ಆ ಸಮಯದಲ್ಲಿ ಪಂಚಾಯತ್ ಮಟ್ಟದಿಂದ ಕೇಂದ್ರ ಮಟ್ಟದವರೆಗೆ ಅದೇ ಕಾಂಗ್ರೆಸ್ ಪಕ್ಷವಿತ್ತು ಎಂದು

# ಸಹಾಯಧನ ಪಡೆಯಲು ಅರ್ಜಿ ಆಹ್ವಾನ

ಕಲಬುರಗಿ,ಫೆ.04:ಕಲಬುರಗಿ ಮಹಾನಗರಪಾಲಿಕೆಯ ಶೇ. 7.25ರ 2023-24 ಸಾಲಿನ (ಎಸ್.ಎಫ್.ಸಿ.) ಇತರೆ ಬಡಜನರ,ಹಿಂದುಳಿದ ಹಾಗೂ ಅಲ್ಪಸಂಖ್ಯಾತರ ವೈಯಕ್ತಿಕ ಕಲ್ಯಾಣ ಕಾರ್ಯಕ್ರಮಗಳಡಿ ಕೊಳಚೆ ನಿರ್ಮೂಲನಾ ಮಂಡಳಿಯ ಫಲಾನುಭವಿಗಳಿಗೆ ವಂತಿಕೆ ಅನುದಾನ ಭರಿಸಲು ಸಹಾಯಧನ ಪಡೆಯಲು ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಉಪ ಆಯುಕ್ತರು (ಆಡಳಿತ) ಅವರು ತಿಳಿಸಿದ್ದಾರೆ.

ಅರ್ಹ ಅಭ್ಯರ್ಥಿಗಳು ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತರ ವರ್ಗದವರಾಗಿರಬೇಕು.ಕಲಬುರಗಿ ನಗರದ ನಿವಾಸಿಯಾಗಿರಬೇಕು. ಅರ್ಹ ಫಲಾನುಭವಿಗಳು ನಿಗದಿತ ಅರ್ಜಿ ನಮೂನೆಯನ್ನು ಕಲಬುರಗಿ ಮಹಾನಗರ ಪಾಲಿಕೆಯ ಆವಕ ಶಾಖೆಯಿಂದ ಕಚೇರಿ ವೇಳೆಯಲ್ಲಿ ಪಡೆದು ಭರ್ತಿ ಮಾಡಿ ಅವಶ್ಯಕ ದಾಖಲೆಗಳೊಂದಿಗೆ 2025ರ ಮಾರ್ಚ್ 6ರ ಸಂಜೆ 4.30 ಗಂಟೆಯೊಳಗಾಗಿ ಕಲಬುರಗಿ ಮಹಾನಗರಪಾಲಿಕೆ ಕಚೇರಿಯಲ್ಲಿ ಅರ್ಜಿ ಸಲ್ಲಿಸಬೇಕು.

ಮತ್ತಿತರ ಹೆಚ್ಚಿನ ಮಾಹಿತಿಗಾಗಿ ಕಲಬುರಗಿ ಮಹಾನಗರ ಪಾಲಿಕೆಯ ಶೇ 7.25ರ ಶಾಖೆಯನ್ನು ಹಾಗೂ http://www.kalaburagicity.mrc.gov ವೆಬ್‌ಸೈಟ್‌ನ್ನು ಸಂಪರ್ಕಿಸಲು ಕೋರಲಾಗಿದೆ.

# ಡಾಕ್ಟರೇಟ್ ಪ್ರದಾನ ಮಾಡಿದ ರಾಜ್ಯಪಾಲರು

"ಘಟಿಕೋತ್ಸವದ ಸಂದರ್ಭದಲ್ಲಿ ಶಿಕ್ಷಣ, ವಿಜ್ಞಾನ, ಸಾಹಿತ್ಯ ಮತ್ತು ಸಾಮಾಜಿಕ ಕ್ಷೇತ್ರಗಳಲ್ಲಿ ಅತ್ಯುತ್ತಮ ಸೇವೆ ಸಲ್ಲಿಸಿದ ಮತ್ತು ದೇಶದ ಪ್ರಗತಿಗೆ ಗಣನೀಯ ಕೊಡುಗೆ ನೀಡಿದ ಮಹನೀಯರಿಗೆ ವಿಶ್ವವಿದ್ಯಾಲಯವು ಗೌರವ ಡಾಕ್ಟರೇಟ್ ಪದವಿಗಳನ್ನು ನೀಡುತ್ತಿರುವುದು ಸಂತೋಷದ ಸಂಗತಿಯಾಗಿದೆ" ಎಂದು ಹೇಳಿದರು.

"ಮೈಸೂರು ವಿಶ್ವವಿದ್ಯಾಲಯ ವತಿಯಿಂದ ಈ ದಿನ ಡಾ.ಬಾಬು ಕೆ ವಿರೇಗೌಡ ಅವರಿಗೆ ಗೌರವ ಡಾಕ್ಟರೇಟ್ ನೀಡಿ ಗೌರವಿಸಲಾಗಿದೆ. ಎಚ್.ಎನ್.ಟಿ.ಬಿ ಯ ಈಶಾನ್ಯ ವಿಭಾಗದ ಉಪಾಧ್ಯಕ್ಷರಾಗಿ ಮತ್ತು ಮುಖ್ಯ ಸಾರಿಗೆ ಮತ್ತು ಸಂಚಾರ ಇಂಜಿನಿಯರ್ ಆಗಿ, ಅನೇಕ ಸಂಕೀರ್ಣ ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. 8. ಉನ್ನತ ಮಟ್ಟದ ಮೂಲಸೌಕರ್ಯ ಯೋಜನೆಗಳ ನಿಮ್ಮ ಸಮರ್ಥ ನಿರ್ವಹಣೆಗಾಗಿ ನೀವು ಪ್ರಸಿದ್ಧರಾಗಿದ್ದೀರಿ. ಯುನೈಟೆಡ್ ಸ್ಟೇಟ್ಸ್‌ನ ಅನೇಕ ದೇವಾಲಯಗಳಿಗೆ ಪ್ರೊ. ಬೊನೊ ಎಂಜಿನಿಯರಿಂಗ್ ಮತ್ತು ಸೈಟ್ ವಿನ್ಯಾಸ ಸೇವೆಗಳ ಮೂಲಕ ಗಮನಾರ್ಹ ಕೊಡುಗೆಗಳನ್ನು ನೀಡಿದ್ದಾರೆ. ಅವರಿಗೆ ಅಭಿನಂದಿಸುತ್ತಾ, ಅವರ ಸಮಾಜ ಸೇವೆ ಹೀಗೆ ನಿರಂತರವಾಗಿರಲಿ ಇತರರಿಗೆ ಸ್ಫೂರ್ತಿಯಾಗಲಿ" ಎಂದು ಆಶಿಸುತ್ತೇನೆಂದರು.

ಈ ಸಂದರ್ಭದಲ್ಲಿ ಮುಖ್ಯಮಂತ್ರಿ ರಾಜಕೀಯ ಕಾರ್ಯದರ್ಶಿ ಗೋವಿಂದರಾಜು, ಕುಲಪತಿ ಪ್ರೊ.ಎನ್.ಕೆ.ಲೋಕನಾಥ್ ಸೇರಿದಂತೆ ಮುಂತಾದ ಗಣ್ಯರು ಉಪಸ್ಥಿತರಿದ್ದರು.

# ನಾಗರಿಕ ಸಂಹಿತೆ ಜಾರಿಗೆಕ್ರಮ

ಹಿರಿಯ ಐಎಎಸ್ ಅಧಿಕಾರಿ ಸಿಎಲ್ ಮೀನಾ, ಹಿರಿಯ ವಕೀಲೆ ಆರ್‌ಸಿ ಕೊಡೇಕರ್, ಮಾಜಿ ಉಪಕುಲಪತಿ ದಕ್ಷೇಶ್ ಠಾಕರ್ ಮತ್ತು ಸಾಮಾಜಿಕ ಕಾರ್ಯಕರ್ತೆ ಗೀತಾಬೆನ್ ಶ್ರಾಫ್ ಇದ್ದಾರೆ.

ಬಿಜೆಪಿಯ ಪ್ರಮುಖ ಭರವಸೆಗಳಲ್ಲಿ ಒಂದಾದ ಏಕರೂಪ ನಾಗರಿಕ ಸಂಹಿತೆಯು ಮದುವೆ, ವಿಚ್ಛೇದನ, ಉತ್ತರಾಧಿಕಾರ, ದತ್ತು ಇತ್ಯಾದಿ ವಿಷಯಗಳಲ್ಲಿ ಎಲ್ಲಾ ಧಾರ್ಮಿಕ ಸಮುದಾಯಗಳಿಗೆ ಒಂದೇ ಕಾನೂನನ್ನು ಒದಗಿಸುವ ಉದ್ದೇಶ ಹೊಂದಿದೆ.

ಗುಜರಾತ್‌ನ ಬಿಜೆಪಿ ಸರ್ಕಾರ ಈ ಕಲ್ಪನೆಯೊಂದಿಗೆ ಬಹಳ ಸಮಯದಿಂದ ಕೆಲಸ ಮಾಡುತ್ತಿದೆ. 2022 ರಲ್ಲಿ, ರಾಜ್ಯದಲ್ಲಿ ನಾಗರಿಕ ಸಂಹಿತೆಯ ಕಾರ್ಯಸಾಧ್ಯತೆ ಮತ್ತು ಅಗತ್ಯವನ್ನು ಅನ್ವೇಷಿಸಲು ಸರ್ಕಾರ ಒಂದು ಸಮಿತಿಯನ್ನು ಸ್ಥಾಪಿಸಿತ್ತು. ಸಮಿತಿಯ ಪಾತ್ರವು ಅಂತಹ ಸಂಹಿತೆಯ ಅಗತ್ಯವನ್ನು ಪರಿಶೀಲಿಸುವುದಕ್ಕೆ ಸೀಮಿತವಾಗಿತ್ತು.


ಬಹುಸಂಖ್ಯಾತರ ಅಪೇಕ್ಷೆಯಂತೆ ಈ ದೇಶ ನಡೆಯುತ್ತೆ; ಗಅಅ ಶೀಘ್ರದಲ್ಲೇ ಜಾರಿ: ಗಿಊಕ ಕಾರ್ಯಕ್ರಮದಲ್ಲಿ ಜಡ್ಜ್ ಶೇಖರ್ ಯಾದವ್

ಕಳೆದ ತಿಂಗಳು, ಉತ್ತರಾಖಂಡ್ ಭಾರತ ಸ್ವಾತಂತ್ರ್ಯ ಪಡೆದ ನಂತರ ಏಕರೂಪ ನಾಗರಿಕ ಸಂಹಿತೆಯನ್ನು ಜಾರಿಗೆ ತಂದ ಮೊದಲ ರಾಜ್ಯವಾಯಿತು. ಇದು ಜನವರಿ 27 ರಿಂದ ಜಾರಿಗೆ ಬಂದಿದೆ.

ಉತ್ತರಾಖಂಡ ನಾಗರಿಕ ಸಂಹಿತೆಯು ಎಲ್ಲಾ ವಿವಾಹಗಳಿಗೆ ಮತ್ತು ಲಿವ್-ಇನ್ ಸಂಬಂಧಗಳಿಗೆ ನೋಂದಣಿಯನ್ನು ಕಡ್ಡಾಯಗೊಳಿಸುತ್ತದೆ. ಅದರ ಪ್ರಮುಖ ನಿಬಂಧನೆಗಳಲ್ಲಿ ಗಂಡು ಮತ್ತು ಹೆಣ್ಣು ಮಕ್ಕಳಿಗೆ ಸಮಾನ ಆಸ್ತಿ ಹಕ್ಕುಗಳು, ವಿಚ್ಛೇದನಕ್ಕೆ ಸಮಾನ ಆಧಾರಗಳು ಮತ್ತು ಲಿವ್-ಇನ್ ಸಂಬಂಧಗಳಿಂದ ಜನಿಸಿದ ಮಕ್ಕಳಿಗೆ ಕಾನೂನುಬದ್ಧತೆ ಸೇರಿವೆ.

ಪುಷ್ಕರ್ ಧಾಮಿ ನೇತೃತ್ವದ ಬಿಜೆಪಿ ಸರ್ಕಾರ ಮದುವೆ, ವಿಚ್ಛೇದನ ಮತ್ತು ಉತ್ತರಾಧಿಕಾರದ ನೋಂದಣಿಯನ್ನು ಸುಗಮಗೊಳಿಸಲು ಆನ್‌ಲೈನ್ ಪೋರ್ಟಲ್ ನ್ನು ಪರಿಚಯಿಸಿದೆ.

## ಅರ್ಥಪೂರ್ಣವಾಗಿ ಕಾಯಕ ಶರಣರ ಜಯಂತಿ ಆಚರಣೆಗೆ ನಿರ್ಧಾರ



ಯಾದಗಿರಿ : ಫೆ:4 : ಕಾಯಕ ಶರಣರ ಜಯಂತಿಯನ್ನು ಇದೇ ಫೆಬ್ರವರಿ 10 ರಂದು ಜಿಲ್ಲಾಡಳಿತದ ವತಿಯಿಂದ ಅರ್ಥಪೂರ್ಣವಾಗಿ ಆಚರಿಸಲು ನಿರ್ಧರಿಸಲಾಗಿದೆ.ಅಪರಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೊಳ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಇಂದು ನಡೆದ ಕಾಯಕ ಶರಣರ ಜಯಂತಿ ಆಚರಣೆ ಕುರಿತ ಪೂರ್ವಭಾವಿ ಸಿದ್ಧತಾ ಸಭೆಯಲ್ಲಿ ಈ ನಿರ್ಣಯ ಕೈಗೊಳ್ಳಲಾಗಿದೆ.

ಸಭೆಯ ಅಧ್ಯಕ್ಷತೆ ವಹಿಸಿದ್ದ ಅಪರ ಜಿಲ್ಲಾಧಿಕಾರಿ ಶ್ರೀ ಶರಣಬಸಪ್ಪ ಕೋಟೆಪ್ಪಗೊಳ ಅವರು, ಅಂದು ಬೆಳಿಗ್ಗೆ 11-30

ಗಂಟೆಗೆ ನಗರದ ಕನ್ನಡ ಸಾಹಿತ್ಯ ಪರಿಷತ್ ಸಭಾಂಗಣದಲ್ಲಿ ಈ ಕಾರ್ಯಕ್ರಮ ನಡೆಯಲಿದ್ದು, ಶಿಷ್ಟಾಚಾರದಂತೆ ಅತಿಥಿ ಗಣ್ಯರನ್ನು ಆಹ್ವಾನಿಸಲು, ವೇದಿಕೆ, ಆಹ್ವಾನ ಪತ್ರಿಕೆ ಸೇರಿದಂತೆ ಇನ್ನಿತರ ಸಿದ್ಧತೆಗಳನ್ನು ಮಾಡಿಕೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಅದರಂತೆ ಜಿಲ್ಲೆಯ ಎಲ್ಲ ಶಾಲಾ, ಕಾಲೇಜುಗಳಲ್ಲಿ, ಕಚೇರಿಗಳಲ್ಲಿ ಈ ಜಯಂತಿ ಆಚರಿಸಲು ಹಾಗೂ ತಾಲೂಕು ಮಟ್ಟದಲ್ಲಿ, ಈ ಜಯಂತಿಯನ್ನು ಆಚರಣೆಗೆ ಸಕಲ ಕ್ರಮಗಳನ್ನು ಕೈಗೊಳ್ಳಬೇಕು, ಯಾವುದೇ ರೀತಿಯ ಅಹಿತಕರ ಘಟನೆ ನಡೆಯದಂತೆ ಸೂಕ್ತ ಪೊಲೀಸ್ ಬಂದೋಬಸ್ತ ಮಾಡಲು ಹಾಗೂ ನುರಿತ ಉಪನ್ಯಾಸಕರನ್ನು ಜಿಲ್ಲಾಮಟ್ಟದಲ್ಲಿ ಕಾರ್ಯಕ್ರಮಕ್ಕೆ ಆಹ್ವಾನಿಸುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದೊಂದಿಗೆ ಕಾರ್ಯಕ್ರಮ ಅಚ್ಚುಕಟ್ಟಾಗಿ ಆಯೋಜಿಸಬೇಕು, ಜಿಲ್ಲೆಯ ಅಧಿಕಾರಿಗಳು, ಸಿಬ್ಬಂದಿಗಳು, ಆಯಾ ಸಮಾಜದ ಮುಖಂಡರು, ಸಂಘ ಸಂಸ್ಥೆಗಳವರು ತಪ್ಪದೇ ಜಯಂತಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಯಶಸ್ವಿಗೊಳಿಸುವಂತೆ ಅವರು ಸಲಹೆ ನೀಡಿದರು. ಮೆರವಣಿಗೆ ಕುರಿತು ಮುಂಚಿತವಾಗಿ ಜಿಲ್ಲಾಡಳಿತದ ಗಮನಕ್ಕೆ ತಂದಿರಬೇಕು.

# ಮೈಕ್ರೋ ಫೈನಾನ್ಸ್ ಸಂಸ್ಥೆಗಳ ದಬ್ಬಾಳಿಕೆ ತಡೆಗೆ ಸರ್ಕಾರದ ಕ್ರಮ

## ಕಿರುಕುಳ ನೀಡಿದರೆ ಸಹಾಯವಾಣಿಗೆ ಮಾಹಿತಿ ನೀಡಿ



ಬೆಂಗಳೂರು.ಫೆ.04:

ಮಧ್ಯಮ ಹಾಗೂ ಕೆಳ ಮಧ್ಯಮ ವರ್ಗದವರು ತಮ್ಮ ಅವಶ್ಯಕತೆಗಳಿಗಾಗಿ ಸಣ್ಣ ಫೈನಾನ್ಸ್ ಕಂಪನಿಗಳಲ್ಲಿ ಸಾಲ ಪಡೆದು,ಮರುಪಾವತಿಸುವಲ್ಲಿ ವಿಳಂಬ ಮಾಡಿದ ಸಾಲಗಾರರ ಮೇಲೆ ಅನಧಿಕೃತ ಲೇವಾದೇವಿದಾರರು,ಹಣಕಾಸು ಸಂಸ್ಥೆಗಳಿಂದ ಆಗುತ್ತಿರುವ ದಬ್ಬಾಳಿಕೆ,ದೌರ್ಜನ್ಯಗಳನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದ್ದು, ದೌರ್ಜನ್ಯ ತಡೆಗೆ ಹಲವು ಕ್ರಮಗಳನ್ನು ತೆಗೆದುಕೊಂಡಿದೆ.

ತುರ್ತು ವೈದ್ಯಕೀಯ ಚಿಕಿತ್ಸೆ, ಮಕ್ಕಳ ವಿದ್ಯಾಭ್ಯಾಸ, ಮದುವೆ ಇನ್ನಿತರ ಖರ್ಚಿಗಾಗಿ ತುರ್ತಾಗಿ ಕೈ ಸಾಲ ಪಡೆಯುವ ಪದ್ಧತಿ ರೂಢಿಯಲ್ಲಿದೆ.ಬಹುತೇಕರು ಪಡೆದ ಸಾಲವನ್ನು ವಾಪಸ್ಸು ನೀಡುತ್ತಾರೆ. ಆದರೆ ಕೆಲವು ವ್ಯಕ್ತಿಗಳು ಸಾಮಾಜಿಕ,ವೈಯಕ್ತಿಕ ಅಥವಾ ಉತ್ಪಾದಕವಲ್ಲದ ಕಾರ್ಯಗಳಿಗಾಗಿ ಹಣ ಖರ್ಚು ಮಾಡುವುದರಿಂದ,ಮರುಪಾವತಿ ಕ್ಷಮತೆ ಕಡಿಮೆ ಇರುತ್ತದೆ. ಇಂತಹ ಸಂದರ್ಭಗಳಲ್ಲಿ ಸಾಲ ನೀಡಿದವರು ಮರು ವಸೂಲಿಗಾಗಿ ಒತ್ತಾಯಿಸುತ್ತಾರೆ. ಕೆಲವೆಡೆ ಇದು ಕಿರುಕುಳವಾಗಿ ಬೆಳೆಯುತ್ತಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆ.

ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಸಭೆ

ಕಳೆದ ಜನವರಿ 25 ರಂದು ಮುಖ್ಯಮಂತ್ರಿ ಸಿದ್ದರಾಮಯ್ಯನವರ ಅಧ್ಯಕ್ಷತೆಯಲ್ಲಿ, ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಕರ್ನಾಟಕ ವಲಯದ ಅಧ್ಯಕ್ಷರು, ಭಾರತೀಯ ರಿಸರ್ವ ಬ್ಯಾಂಕ್ (RBI) ನ ಪ್ರಾಂತೀಯ ನಿರ್ದೇಶಕರು, ಹಾಗೂ ಸಾ-ಧನ್(SA-DHAN),ಎಕೆಎಂಐ,ಎಂಎಎನ್ ಮತ್ತು ಪ್ರಮುಖ ಮೈಕ್ರೋ ಫೈನಾನ್ಸ್ ಸಂಸ್ಥೆಗಳ ಪ್ರತಿನಿಧಿಗಳು, ರಾಜ್ಯಮಟ್ಟದ ಬ್ಯಾಂಕರುಗಳ ಸಮಿತಿ ಸಂಚಾಲಕರು, ಅಧಿಕಾರಿಗಳು, ಪೊಲೀಸ್, ಕಂದಾಯ, ಸಹಕಾರ ಹಾಗೂ ಆರ್ಥಿಕ ಇಲಾಖೆಯ ಅಧಿಕಾರಿಗಳನ್ನೊಳಗೊಂಡ ಸಭೆ ನಡೆಸಿ. ಕಿರುಕುಳವನ್ನು ತಡೆಗಟ್ಟಲು ಕೈಗೊಳ್ಳಬೇಕಾದ ಕ್ರಮಗಳ ಬಗ್ಗೆ ನಿರ್ದೇಶನ ನೀಡಿದ್ದಾರೆ.

ಕರ್ನಾಟಕದ ಅಧಿನಿಯಮಗಳು:

ಕರ್ನಾಟಕ ಲೇವಾದೇವಿದಾರರ ಅಧಿನಿಯಮ-1961

ಅಡಿಯಲ್ಲಿನ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಲಾಗಿದೆ.

ಈ ಅಧಿನಿಯಮದಡಿಯಲ್ಲಿ 2024ರ ಡಿಸೆಂಬರ್ 31 ರವರೆಗೆ 20,425 ಸಂಸ್ಥೆಗಳು ನೋಂದಣಿಯಾಗಿವೆ. ಅದರಲ್ಲಿ 6590 ಲೇವಾದೇವಿದಾರರು, 6772 ಪಾನ್ ಬ್ರೋಕರ್‌ಗಳು, 7063 ಹಣಕಾಸಿನ ಸಂಸ್ಥೆಗಳು (Finance Corporation) ಇವೆ. ಕರ್ನಾಟಕ ಮಿತಿಮೀರಿದ ಬಡ್ಡಿ ವಿಧಿಸುವಿಕೆ ನಿಷೇಧ ಕಾಯಿದೆ- 2004 ಪ್ರಕಾರ ಭದ್ರತಾ ಸಾಲಗಳಿಗೆ ವರ್ಷಕ್ಕೆ ಶೇ.14 ಹಾಗೂ ಭದ್ರತೆ ಇಲ್ಲದ ಸಾಲಗಳಿಗೆ ವರ್ಷಕ್ಕೆ ಗರಿಷ್ಠ ಶೇ.16 ಗರಿಷ್ಠ ಬಡ್ಡಿ ದರವನ್ನು ಲೇವಾದೇವಿದಾರರಿಗೆ ನಿಗದಿಪಡಿಸಲಾಗಿದೆ. ಇಂತಹ ಮಾಹಿತಿಗಳನ್ನು ಸಾರ್ವಜನಿಕವಾಗಿ ಫಲಕಗಳ ಮೂಲಕ ಪ್ರದರ್ಶಿದಲು ಸಂಸ್ಥೆಗಳು ಹಾಗೂ ಸಂಬಂಧಿಸಿದ ಕಚೇರಿಗಳಿಗೆ ತಿಳಿಸಲಾಗಿದೆ. ಸಾಲಗಾರರು ಇವುಗಳನ್ನು ಸೂಕ್ಷ್ಮವಾಗಿ ಗಮನಿಸಿ ಸಾಲ ಪಡೆಯುವ ಮುನ್ನ ಲೇವಾದೇವಿ ಸಂಸ್ಥೆಗಳ ಅಧಿಕೃತ ನೋಂದಣಿ ಪತ್ರ, ಬಡ್ಡಿದರ, ವಸೂಲಿ ಪ್ರಕ್ರಿಯೆ ಇತ್ಯಾದಿಗಳ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ಈ ಪ್ರಕ್ರಿಯೆಗಳಿಂದ ಸಾಲ ಮರುಪಾವತಿ ಸಂದರ್ಭದಲ್ಲಿನ ಕಿರುಕುಳ ತಪ್ಪಿಸಲು ಸಾಧ್ಯವಾಗುತ್ತದೆ.

ಸೂಕ್ಷ್ಮ ಹಣಕಾಸು (Microfinance) ಸಂಸ್ಥೆಗಳು ಎಂದರೇನು?:

3 ಲಕ್ಷ ರೂ.ವರೆಗೂ ಆದಾಯವಿರುವ ಸಾರ್ವಜನಿಕರಿಗೆ ಸಾಲವನ್ನು ಒದಗಿಸುವ ವ್ಯವಸ್ಥೆಯನ್ನು ಮೈಕ್ರೋ ಫೈನಾನ್ಸ್ ಎಂದು ಘೋಷಿಸಲಾಗಿದೆ. ಬ್ಯಾಂಕುಗಳಲ್ಲದ ಸಹಕಾರ ಸಂಘಗಳು, ಎನ್‌ಬಿಎಫ್‌ಸಿಗಳು, ಸರ್ಕಾರೇತರ ಸಂಸ್ಥೆಗಳು, ಟ್ರಸ್ಟ್‌ಗಳು, ಸಣ್ಣ ಅಂಗಡಿ ಮಾಲೀಕರು, ಇನ್ನಿತರರು ಸಾಲ ನೀಡುತ್ತಾರೆ.

ಸಹಕಾರಿ ಸಂಸ್ಥೆಗಳ ಮೇಲ್ವಿಚಾರಣೆಯನ್ನು ಸಹಕಾರ ಇಲಾಖೆ. ಬ್ಯಾಂಕ್ ಅಲ್ಲದ ಆರ್ಥಿಕ ಸಂಸ್ಥೆಗಳ (ಎನ್‌ಬಿಎಫ್‌ಸಿ) ಮೇಲ್ವಿಚಾರಣೆಯನ್ನು ಭಾರತೀಯ ರಿಸರ್ವ್ ಬ್ಯಾಂಕ್ (ಆರ್‌ಬಿಐ) ಮೂಲಕ ನೋಂದಣಿ ಮತ್ತು ಮೇಲ್ವಿಚಾರಣೆ ಮಾಡಲಾಗುತ್ತಿದೆ. ಸಾ-ಧನ್ (SA-Dhan) ಮತ್ತು ಮೈಕ್ರೋ ಫೈನಾನ್ಸ್ ಇಂಡಸ್ಟ್ರಿ ನೆಟ್‌ವರ್ಕ್ (MFIN) ಸಂಸ್ಥೆಗಳನ್ನು ಭಾರತೀಯ ರಿಸರ್ವ್ ಬ್ಯಾಂಕ್ (RBI) ಸ್ವಯಂ ನಿಯಂತ್ರಣಾ ಸಂಸ್ಥೆಗಳನ್ನಾಗಿ (self-regulatoryorganisation) ನೇಮಿಸಿದೆ.ನಿಗದಿತ ಉತ್ತಮ ಲೇವಾದೇವಿ ಪದ್ಧತಿಗಳನ್ನು ಅನುಷ್ಠಾನಗೊಳಿಸಲು ಈ ಸಂಸ್ಥೆಗಳನ್ನು ರಚಿಸಲಾಗಿದೆ.

ಕರ್ನಾಟಕ ರಾಜ್ಯದಲ್ಲಿ ಕೇವಲ 31 ಮೈಕ್ರೋ ಫೈನಾನ್ಸ್ ಇಂಡಸ್ಟ್ರಿಗಳು ಅಸ್ತಿತ್ವದಲ್ಲಿ ಇವೆ. ಈ 31 ಸಂಸ್ಥೆಗಳು ಅಸೋಸಿಯೇಷನ್ ಆಫ್ ಕರ್ನಾಟಕ ಮೈಕ್ರೋ ಫೈನಾನ್ಸ್ ಇನಸ್ಟಿಟ್ಯೂಷನ್ (AKMI) ಸದಸ್ಯತ್ವ ಪಡೆದಿವೆ. ರಾಜ್ಯದಲ್ಲಿ ಈ ಸಂಸ್ಥೆಗಳ 3090 ಶಾಖೆಗಳಿದ್ದು 37,967 ಸಿಬ್ಬಂದಿಗಳು ಕೆಲಸ ನಿರ್ವಹಿಸುತ್ತಿದ್ದಾರೆ.1,09,88,332 ಖಾತೆಗಳಲ್ಲಿ 59,367.76 ಕೋಟಿ ರೂ. ಬಾಕಿ ಉಳಿದಿದೆ. ನಿಯಮಗಳನ್ನು ಪಾಲಿಸದ ಹಣಕಾಸು ಸಂಸ್ಥೆಗಳ ಬಗ್ಗೆ ಮೇಲ್ವಿಚಾರಣಾ ಸಂಸ್ಥೆಗಳ ಮೂಲಕ ಭಾರತೀಯ ರಿಸರ್ವ್ ಬ್ಯಾಂಕಿಗೆ ವರದಿ ನೀಡಲಾಗುತ್ತದೆ , ಆರ್‌ಬಿಐ ಒಪ್ಪಿಗೆಯೊಂದಿಗೆ ಸೂಕ್ತ ಶಿಸ್ತಿನ ಕ್ರಮವನ್ನು ಜರುಗಿಸಲಾಗುತ್ತದೆ. ದಬ್ಬಾಳಿಕೆಯ ಸಾಲ ಮರುಪಾವತಿ ಕ್ರಮದಿಂದ ಸಂರಕ್ಷಿಸಲು ಅಧಿಕೃತವಾಗಿ ಭಾರತೀಯ ರಿಸರ್ವ್ ಬ್ಯಾಂಕ್ ಮಾರ್ಗಸೂಚಿಗಳು ಎಲ್ಲಾ ಎನ್‌ಬಿಎಫ್‌ಸಿ-ಎಂಎಫ್‌ಐಗಳು ಬಡ್ಡಿಯ ದರ, ಮರುಪಾವತಿಯ ಕಂತು ಮತ್ತು ಅಸಲು ಸಾಲ ಮುಂತಾದವುಗಳ ಬಗ್ಗೆ ಫ್ಯಾಕ್ಟ್ ಶೀಟ್‌ನಲ್ಲಿ ಸಾಲ ವಿತರಣೆಯ ಸಮಯದಲ್ಲಿ ಪ್ರತಿಯೊಬ್ಬ ಸಾಲಗಾರನಿಗೆ ಮಾಹಿತಿ ಒದಗಿಸಬೇಕು. ಮೈಕ್ರೋ ಫೈನಾನ್ಸ್ ಸಂಸ್ಥೆಗಳು ಅನುಸರಿಸಬೇಕಾದ ಕ್ರಮಗಳು

ಮೈಕ್ರೋಫೈನಾನ್ಸ್ ಇನ್‌ಸ್ಟಿಟ್ಯೂಷನ್ (ಎಂಎ) , ಮನಿ ಲೆಂಡಿಂಗ್ ಏಜೆನ್ಸಿ ಅಥವಾ ಸಂಸ್ಥೆಯಿಂದ ನೀಡುವ ಎಲ್ಲಾ ಸಾಲಗಳ ಮಂಜೂರಾತಿ, ವಿತರಣೆಯ ಪ್ರಕ್ರಿಯೆಯಲ್ಲಿ ಈ ಅಂಶಗಳನ್ನು ಅನುಸರಿಸಬೇಕು:

* ಸಾಲಗಾರನಿಗೆ ಸಾಲದ ನಿಯಮಗಳ ಬಗ್ಗೆ ಸ್ಥಳೀಯ ಭಾಷೆಯಲ್ಲಿ ಅಥವಾ ಆತನಿಗೆ ಅರ್ಥವಾಗುವ ಭಾಷೆಯಲ್ಲಿ ತಿಳಿಸಬೇಕು

* ಸಾಲದ ಅರ್ಜಿಯಲ್ಲಿ ಷರತ್ತುಗಳ ಬಗ್ಗೆ ಮಾಹಿತಿ ನೀಡಿ ಸೂಕ್ತ ನಿರ್ಧಾರ ತೆಗೆದುಕೊಳ್ಳಲು ಸಹಾಯ ಮಾಡಬೇಕು.

* ಯಾವ ದಾಖಲೆಗಳನ್ನು ನೀಡುವ ಅವಶ್ಯಕತೆ ಇದೆ ಎನ್ನುವ ಸೂಕ್ತ ಮಾಹಿತಿ ನೀಡಬೇಕು.

* ನಗದು ಪುಸ್ತಕ, ಲೆಡ್ಜರ್ ಮತ್ತು ಇತರ ದಾಖಲೆಗಳನ್ನು ಸಮರ್ಪಕವಾಗಿ ನಿರ್ವಹಿಸಬೇಕು.

*ಸಾಲ ನೀಡಿದ ದಿನಾಂಕದಿಂದ ಏಳು ದಿನಗಳ ಒಳಗೆ ಸಾಲಗಾರನಿಗೆ ನಿಗದಿತ ನಮೂನೆಯಲ್ಲಿ ಸಾಲದ ಮೊತ್ತ ,ನೀಡಿದ ದಿನಾಂಕ ಮತ್ತು ಅವಧಿಯ ಮುಕ್ತಾಯ, ಸಂಸ್ಥೆಯ ಕಾರ್ಯನಿರ್ವಾಹಕರ ಹೆಸರು ಮತ್ತು ವಿಳಾಸ, ನಿಯಮಾನುಸಾರ ವಿಧಿಸಲಾಗುವ ಬಡ್ಡಿದರ ಸ್ಪಷ್ಟವಾಗಿರುವ ಲಿಖಿತ ದಾಖಲೆಯನ್ನು ತಲುಪಿಸಬೇಕು.

* ಸಾಲಗಾರನು ಮಾಡುವ ಪಾವತಿಗೆ ಪ್ರತಿಯಾಗಿ ಸಹಿ ಮಾಡಿದ ರಶೀದಿ ನೀಡಬೇಕು.

* ಸಾಲಗಾರನ ಲಿಖಿತ ಬೇಡಿಕೆಯ ಮೇರೆಗೆ ಸಾಲಕ್ಕೆ ಸಂಬಂಧಿಸಿದ ಯಾವುದೇ ದಾಖಲೆಯ ನಕಲನ್ನು ನೀಡಬೇಕು.

* ಸಾಲಗಾರರಿಂದ ಪಡೆದ ಭದ್ರತೆಯನ್ನು ಸ್ಪಷ್ಟವಾಗಿ ತಿಳಿಸಬೇಕು

*ಜನಸಾಮಾನ್ಯರು ಈ ವಿಧಾನಗಳ ಬಗ್ಗೆ ತಿಳುವಳಿಕೆ ಹೊಂದಿರಬೇಕು. ತಮ್ಮ ಅಧಿಕೃತ ಹಕ್ಕುಗಳು, ಬಾಧ್ಯತೆಗಳ ಬಗ್ಗೆ ಖಚಿತ ಪಡಿಸಿಕೊಂಡ ನಂತರ ಸಾಲ ತೆಗೆದುಕೊಳ್ಳಬೇಕು.

ಸ್ವಸಹಾಯ ಗುಂಪುಗಳಲ್ಲಿ ಸಾಲಮಹಿಳಾ ಸ್ವ-ಸಹಾಯ ಗುಂಪುಗಳಿಂದ ಹಲವು ಕಡೆ ಬಳಕೆ ಸಾಲವನ್ನು (Consumption Loan) ಪಡೆಯುವ ವ್ಯವಸ್ಥೆ ಇದೆ. ಇವುಗಳಲ್ಲಿ ಶೇ. 99 ರಷ್ಟು ಯಶಸ್ವಿಯಾಗಿ ಮರುಪಾವತಿ ಕೂಡ ಆಗುತ್ತವೆ. ಬ್ಯಾಂಕುಗಳಲ್ಲಿ ಇರುವಂತೆ ದಾಖಲಾತಿ ಒದಗಿಸುವ, ಜಾಮೀನು ನೀಡುವ ಹಾಗೂ ತಮ್ಮ ಆಸ್ತಿಗಳ ಅಡಮಾನ ಮಾಡುವ ಕ್ಲಿಷ್ಟ ವಿಧಾನ ಇಲ್ಲಿರುವುದಿಲ್ಲ. ಸರಳ ವಿಧಾನ ಅನುಸರಿಸಿ ಸಾಲ ಸಿಗುವುದರಿಂದ ಜನರು ಇಂತಹ ವ್ಯವಸ್ಥೆಗಳಿಗೆ ಹೆಚ್ಚಾಗಿ ಮೊರೆ ಹೋಗುತ್ತಾರೆ.

### ಸಹಾಯವಾಣಿ

ಬಡಜನರ ಅವಶ್ಯಕತೆಯನ್ನು ಬಂಡವಾಳ ಮಾಡಿಕೊಳ್ಳುವ ಕೆಲವು ವ್ಯಕ್ತಿಗಳು, ಅನಧಿಕೃತ ಲೇವಾದೇವಿದಾರರು ಜನರ ತುರ್ತು ಅವಶ್ಯಕತೆಗೆ ಹಣ ನೀಡಿ, ಹೆಚ್ಚು ಬಡ್ಡಿ ವಿಧಿಸಿ ಶೋಷಣೆ ಮಾಡುತ್ತಾರೆ. ಅಂತಹ ವ್ಯಕ್ತಿಗಳು ಅಥವಾ ಸಂಸ್ಥೆಗಳ ವಿರುದ್ಧ ಸಾರ್ವಜನಿಕರು ಸಹಾಯವಾಣಿ ಸಂಖ್ಯೆಗಳಿಗೆ

ದೂರು ನೀಡಬಹುದು. ಸೂಕ್ಷ್ಮ ಹಣಕಾಸು ಸಂಸ್ಥೆ (MFI) ,ಮನಿ ಲೆಂಡಿಂಗ್ ಸಂಸ್ಥೆಗಳ ನಿಯಮ ಉಲ್ಲಂಘನೆಗಳ ಕುರಿತು ಭಾರತೀಯ ರಿಸರ್ವ್ ಬ್ಯಾಂಕ್ (ಖಃಖ) ಸಹಾಯವಾಣಿ ಸಂಖ್ಯೆ 14448 ಗೆ ಮಾಹಿತಿ ನೀಡಬಹುದು.

# ನಾವೇಲ್ಲರೂ ಶ್ರೀ ಸವಿತಾ ಮಹರ್ಷಿ ತತ್ವಗಳನ್ನು ಪಾಲಿಸೋಣ:ಅಪರ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ



ಮಲ್ಲಮ ನುಡಿ ವಾರ್ತೆ

ಬೀದರ : ಫೆ.4: ಕಾಯಕ ಶ್ರೇಷ್ಠತೆಯನ್ನು,ಹೊಂದಿರುವ ಸವಿತಾ ಮಹರ್ಷಿ ಸಮಾಜ ಪ್ರಾಚೀನ ಕಾಲದಿಂದಲೂ ತಮ್ಮ ಕಾಯಕ ನಿಷ್ಠೆಯನ್ನು ಹೊಂದಿದ್ದು,ನಾವೇಲ್ಲರು ಶ್ರೀ ಸವಿತಾ ಮಹರ್ಷಿ ತತ್ವಗಳನ್ನು ಪಾಲಿಸೋಣ ಎಂದು ಅಪರ ಜಿಲ್ಲಾಧಿಕಾರಿ ಶಿವಕುಮಾರ ಶೀಲವಂತ ಅವರು ಹೇಳಿದರು.

ಅವರುಮಂಗಳವಾರಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಬೀದರ ಸಹಯೋಗದಲ್ಲಿ ನಗರದ ಪೂಜ್ಯ ಚನ್ನಬಸವ ಪಟ್ಟದೇವರುರಂಗಮಂದಿರದಲ್ಲಿ ಹಮ್ಮಿಕೊಂಡಿದ್ದ ಶ್ರೀ ಸವಿತಾ ಮಹರ್ಷಿ ಜಯಂತ್ಯುತ್ಸವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಸವಿತಾ ಸಮಾಜದ ಸೇವೆ ಸಮಾಜಕ್ಕೆಬಹು ದೊಡ್ಡದಾಗಿದೆ. ಕಾಯಕ ನಿಷ್ಠರು ಮತ್ತು ಪ್ರಾಮಾಣಿಕರು ಆಗಿದ್ದಾರೆ. ಈ ಸಮಾಜದ ಯಾವುದೇ ರೀತಿಯ ಸಮಸ್ಯೆ ಇದ್ದರೂ ನಾವು ಪರಿಹರಿಸುತ್ತೇವೆ. ಸವಿತಾ ಮಹರ್ಷಿ ಸಮುದಾಯ ಭವನ ನಿರ್ಮಾಣಕ್ಕೆಸಂಬಂಧಿಸಿದಂತೆ ಭೂಮಿಯನ್ನು ಪರಿಶೀಲಿಸಿ ಆದಷ್ಟು ಬೇಗ ಮಂಜೂರಾತಿ ಕ್ರಮ ಕೈಗೊಳ್ಳಲಾಗುವುದು ಎಂದು ತಿಳಿಸಿದರು.

ಬೀದರನ ಜ್ಞಾನ ಸುಧಾ ಪದವಿ ಪೂರ್ವ ಮಹಾವಿದ್ಯಾಲಯದ ಉಪನ್ಯಾಸಕರಾದ ಗಿರಿಧರ ಬಿ. ಎಚ್ ಅವರು ತಮ್ಮ ಅತಿಥಿ ಉಪನ್ಯಾಸದಲ್ಲಿಮಾತನಾಡಿ,ಸವಿತಾ ಸಮಾಜವು ಪೌರಾಣಿಕವಾಗಿ, ಐತಿಹಾಸಿಕವಾಗಿ, ತನ್ನದೇ ಇತಿಹಾಸವನ್ನು ಹೊಂದಿದೆ. ನಾಲ್ಕುವೇದಗಳಲ್ಲಿ ಒಂದಾದ ಸಾಮವೇದವನ್ನು ರಚಿಸಿದ್ದು ಸವಿತಾಮಹರ್ಷಿ. ಸಾಮವೇದವು ಸಂಗೀತಕ್ಕೆಸಂಬಂಧಿಸಿದೆ.12ನೇ ಶತಮಾನದಲ್ಲಿ ಕಲ್ಯಾಣದ ವಚನ ಸಾಹಿತ್ಯದಲ್ಲಿ ಹಡಪದ ಅಪ್ಪಣ್ಣ, ಹಡಪದ ಲಿಂಗಮ್ಮ ಶಿವಶರಣರು ಇದ್ದರು. ಸವಿತಾ ಸಮಾಜದವರು ವೈದ್ಯ, ಕ್ಷೌರಿಕ, ಡೊಲು, ನಾದಸ್ವರ, ವಾದನ ವಿವಿಧ ಕಾಯಕದಲ್ಲಿ ತೆ-ೂಡಗಿದ್ದಾರೆ. ಸಮಾಜದವರು ಉತ್ತಮವಾದ ಶಿಕ್ಷಣವನ್ನು ಪಡೆಯಬೇಕು ಸರ್ಕಾರದಿಂದ ಇರುವ ವಿವಿಧ ಯೋಜನೆಗಳ ಸೌಲಭ್ಯವನ್ನು ಪಡೆಯಬೇಕು ಎಂದು ತಿಳಿಸಿದರು.

ಕಾರ್ಯಕ್ರಮಕ್ಕೂಮುಂಚಿತವಾಗಿ ಬೆಳಿಗ್ಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಶ್ರೀ ಸವಿತಾ ಮಹರ್ಷಿ ಭಾವಚಿತ್ರಕ್ಕೆ ಪುಷ್ಪ ನಮನ ಸಲ್ಲಿಸಿದರು. ನಂತರ ಜಿಲ್ಲಾಧಿಕಾರಿಗಳ ಕಚೇರಿಯಿಂದ ಶ್ರೀ ಸವಿತಾ ಮಹರ್ಷಿ ಭಾವಚಿತ್ರದ ಮೆರವಣಿಗೆ ನಡೆಯಿತು. ಕಾರ್ಯಕ್ರಮದಲ್ಲಿ ಮಂಜುನಾಥ ಸ್ವಾಮಿ ಮತ್ತು ತಂಡದಿಂದ ಸವಿತಾ ಮಹರ್ಷಿ ಗಾಯನ ನಡೆಸಿಕೊಟ್ಟರು.

ಈ ಸಂದರ್ಭದಲ್ಲಿ ಸವಿತಾ ಸಮಾಜದ ಮುಖಂಡರಾದ ಜಗನ್ನಾಥರಾವ ಚೆಲುವ, ಶಾಮರಾವ್ ಮೊರ್ಗಿ,ದತ್ತಾತೆ-ೕಯ ಚೌಧರಿ ಸೇರಿದಂತೆ ಸಮಾಜದ ಮುಖಂಡರು ಉಪಸ್ಥಿತರಿದ್ದರು.




ಶಹಾಪೂರ :ಭಾರತೀಯ ಜನತಾ ಪಾರ್ಟಿಯ ಶಹಾಪುರ ನಗರ ಮಂಡಲ ಕಾರ್ಯಾಲಯದಲ್ಲಿ ಶ್ರೀ ಶ್ರೀ ಶ್ರೀ ಭಗವಾನ ಸವಿತಾ ಮಹರ್ಷಿ ಜಯಂತಿ ಆಚರಿಸಲಾಯಿತು .ಈ ಸಂದರ್ಭದಲ್ಲಿ ನಗರ ಮಂಡಲ ಅಧ್ಯಕ್ಷರಾದ ಶ್ರೀ ಚಂದ್ರಶೇಖರ ಯಾಳಗಿ, ಜಿಲ್ಲಾ ಉಪಾಧ್ಯಕ್ಷರಾದ ಶ್ರೀ ದೇವಿಂದ್ರಪ್ಪ ಕೊನೇರ, ಶರಣು ಟೊಕಾಪೂರ, ಬಾಲಕೃಷ್ಣ ಹುಲಕಲ್,ಮಹೇಶ ರಸ್ತಾಪುರ,ಹುಸನಪ್ಪ ಅಜಕೋಲಿ,ವೆಂಕಟೇಶ ಗೌನಳಿ,ನಿಕೀಲ್ ಕುಮಾರ, ಪ್ರಭು ದೊಡ್ಡಮನಿ, ಮಲ್ಕಪ್ಪ ಬಗಲಿ,ರಾಮರಡ್ಡಿ,ಲಕ್ಷೀಕಾಂತ ಬಿರಾಳ ,ಓಂಪ್ರಕಾಶ್ ಬೀಗುಡಿ ಹಾಗೂ ಇತರರು ಉಪಸ್ಥಿತರಿದ್ದರು

# ಹಠಯೋಗಿ ವೀರಪ್ಪಜ್ಜನವರ ಪುರಾಣ ಮಹಾ ಮಂಗಲ ಕಾರ್ಯಕ್ರಮ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಫೆ.4:ಜಿಲ್ಲೆ ಕುಕನೂರು ತಾಲೂಕಿನ ಸಿದ್ನೆಕೊಪ್ಪದಲ್ಲಿ ಶ್ರೀ ಹಠಯೋಗಿ ವೀರಪ್ಪಜ್ಜನವರ 16ನೇ ವರ್ಷದ ಪುರಾಣ ಮಹಾಮಂಗಲೋತ್ಸವ ಕಾರ್ಯಕ್ರಮ ರಥಸಪ್ತಮಿಯ ದಿನದಂದು ಅದ್ದೂರಿಯಾಗಿ ನೆರವೇರಿತು.



ಬೆಳಗಿನ ಜಾವ ಬ್ರಾಹ್ಮಿ ಮುಹೂರ್ತದಲ್ಲಿ ಹಠಯೋಗಿ ವೀರಪ್ಪಜ್ಜನವರಿಗೆಮಹಾರುದ್ರಾಭಿಷೇಕ ತೀರ್ಥ ಪ್ರಸಾದ ವಿನಿಯೋಗ ಹಾಗೂ ಮಹಾಮಂಗಳಾರತಿ ಮಹಾಪ್ರಸಾದ ಹಾಗೂ ಹಠಯೋಗಿ ವೀರಪ್ಪಜ್ಜನವರ ಉತ್ಸವ ಮೂರ್ತಿ ಮೆರವಣಿಗೆ ಹಾಗೂ 108 ಸುಮಂಗಲಿಯರಿಂದ ಕುಂಬೋತ್ಸವ ಕಾರ್ಯಕ್ರಮವು ಸಿದ್ದೇಶ್ವರ ಭಜನಾ ಸಂಘದೊಂದಿಗೆ ವಿಜೃಂಭಣೆಯಿಂದ ನೆರವೇರಿತು.

ಕಾರ್ಯಕ್ರಮದ ದಿವ್ಯ ಸಾನಿಧ್ಯವನ್ನು ಶ್ರೀ ಕರಿಬಸವ ಶಿವಾಚಾರ್ಯ ಮಹಾಸ್ವಾಮಿಗಳು ಮದ್ದಾನೇಶ್ವರ ಮಠ ಕುಷ್ಟಗಿ. ಕುಕನೂರಿನ ಡಾ. ಮಹಾದೇವ ಮಹಾ ಸ್ವಾಮಿಗಳು ಅನ್ನದಾನೇಶ್ವರ ಶಾಖಾಮಠ ಪೂಜ್ಯರ ಸಮ್ಮುಖದಲ್ಲಿ ಪುರಾಣ ಮಹಾಮಂಗಲ ಗೊಂಡಿತು.

ಪುರಾಣ ಪ್ರವಚನಕಾರರದ ಶ್ರೀ ವಿಶ್ವ-ರಾಧ್ಯ ಕಂಬಾಳಿಮಠ,

ಗಾನಯೋಗಿ ಪಂಡಿತ ಪುಟ್ಟರಾಜ ಕವಿ ಗವಾಯಿಗಳ ಶಿಷ್ಯರಾದ ಗಾನ ಕೋಗಿಲೆ ಕೊಟ್ರಯ್ಯ ಶಾಂತಿಗಿರಿಮಠ, ತಬಲ ವಾದಕರಾದ ಖಾದರ್ ಸಾಬ್ ಬಳಿಗೆರ, ದೇವಸ್ಥಾನದ ಅರ್ಚಕರಾದ ಕಳಕಯ್ಯ,

ಈ ಸಂದರ್ಭದಲ್ಲಿ ಗ್ರಾಮದ ಹಿರಿಯರಾದ ವೀರಭದ್ರಯ್ಯ ಹಿರೇಮಠ, ಮುದುಕಪ್ಪ ಮನಗೂಳಿ, ಈರಪ್ಪ ಲಕ್ಷಟ್ಟಿ, ಶರಣಯ್ಯ ಲಕ್ಕಲಕಟ್ಟಿ, ಮಲ್ಲಪ್ಪ ಮನಗೂಳಿ, ಮಲ್ಲಪ್ಪ ಬೀಡನಾಳ, ಶಿವಾನಂದ ಕೋಡಿಕೊಪ್ಪ, ಕೊಟ್ರಯ್ಯ ಹಿರೇಮಠ, ಪರಪ್ಪ ಕಾಡ್ರ,ಈರಪ್ಪ ಮನಗೂಳಿ, ವಿನಾಯಕ್ ಮನಗೂಳಿ, ಮಲ್ಲಪ್ಪ ಮೇಟಿ, ಸಿದ್ದು ಹಣವಾಳ,ವಿಶ್ವನಾಥ್ ಹಿರೇಮಠ, ಪ್ರಶಾಂತ್ ಬಾರಕೆರ, ನಾಗರಾಜ್ ತಂಡಿಹಾಳ, ಹಾಗೂ ಇತರರು ಇದ್ದರು.

# ಪಿಎಲ್‌ಡಿ ಬ್ಯಾಂಕ್ ಜೆಡಿಎಸ್ ವಶ



ದಿ. ಸದಾಶಿವರಡ್ಡಿ ಕಂದಕೂರ, ಮಾಜಿ ಶಾಸಕ ದಿ. ನಾಗನಗೌಡ ಕಂದಕೂರ ಅವರ ಸಂಪರ್ಕದ ಮೂಲಕ ರಾಜಕೀಯ ಪ್ರವೇಶ ಮಾಡಿ, ಕಳೆದ 40 ವರ್ಷಗಳಿಂದ ಆ ಮನೆತನಕ್ಕೆ ಹಾಗೂ ಜೆಡಿಎಸ್ ಪಕ್ಷಕ್ಕೆ ನಿಷ್ಠಾವಂತ ಕಾರ್ಯಕರ್ತನಾಗಿ, ಪ್ರಾಮಾಣಿಕವಾಗಿ ಕೆಲಸ ಮಾಡಿದ್ದೇನೆ, ನನ್ನ ಸೇವೆ ಗುರುತಿಸಿ ಶಾಸಕ ಶರಣಗೌಡ ಕಂದಕೂರ ಅವರು ಹೊಸ ಜವಾಬ್ದಾರಿ, ರಾಜಕೀಯ ಅಧಿಕಾರ ನೀಡಿದ್ದಾರೆ, ಬರುವ ದಿನಗಳಲ್ಲಿ ಗುರುಮಿಠಕಲ್ ಮತಕ್ಷೇತ್ರದಲ್ಲಿ ಪಕ್ಷ ಸಂಘಟನೆಗೆ ಶ್ರಮಿಸುವ ಜೊತೆಗೆ ಪಿಎಲ್‌ಡಿ ಬ್ಯಾಂಕ್ ಮೂಲಕ ಸರ್ಕಾರದಿಂದ ರೈತರಿಗೆ ಎಲ್ಲಾ ಸೌಲಭ್ಯಗಳನ್ನು ಪರಿಣಾಮಕಾರಿಯಾಗಿ ತಲುಪಿಸಿ ಎಲ್ಲರ ಪ್ರೀತಿ-ವಿಶ್ವಾಸ ಉಳಿಸಿಕೊಳ್ಳುತ್ತೇನೆ.

– ರಾಮಣ್ಣ ಕೋಟಗೇರಾ ಪಿಎಲ್‌ಡಿ ಬ್ಯಾಂಕ್ ನೂತನ ಅಧ್ಯಕ್ಷರು, ಯಾದಗಿರಿ

ಪ್ರತಿಯೊಂದು ಸಮುದಾಯಕ್ಕೂ ಆದ್ಯತೆ

ಗುರುಮಠಕಲ್ ಕ್ಷೇತ್ರದಲ್ಲಿ ಕಂದಕೂರ ಕುಟುಂಬ ಯಾವತ್ತೂ ಹಿಂದುಳಿದ ವರ್ಗದ ಆಶಾಕಿರಣವಾಗಿದೆ. ಸಮಯ ಸಿಕ್ಕಾಗಲೆಲ್ಲ ಹಿಂದುಳಿದ ವರ್ಗಕ್ಕೆ ರಾಜಕೀಯ ಪ್ರಾತಿನಿಧ್ಯ ನೀಡಿರುವ ಮಾಜಿ ಶಾಸಕರು ಲಿಂ.ನಾಗನಗೌಡ ಕಂದಕೂರ ಅವರು ಹಾಗೂ ಈಗಿನ ಶಾಸಕರಾಗಿರುವ ಶರಣಗೌಡ ಕಂದಕೂರ ಅವರು ಸದಾ ಹಿಂದುಳಿದ ವರ್ಗಕ್ಕೆ ಬೆನ್ನೆಲುಬಾಗಿ ನಿಂತಿದ್ದಾರೆ, ಕಳೆದ ಸಲ ಜಿಪಂ ಚುನಾವಣೆ ಮುನ್ನ ಹಿಂದುಳಿದ ವರ್ಗಕ್ಕೆ ಸೇರಿದ ಕೋಲಿ ಸಮಾಜದ ಸರಸ್ವತಿ ಕಟಕಟಿಯವರಿಗೆ ಟಿಕೆಟ್ ನೀಡಿ ಗೆಲ್ಲಿಸಿಕೊಂಡು ಬಂದಿರುವುದಲ್ಲದೇ ಸತತ 5 ವರ್ಷ ಜಿಪಂ ಸ್ಥಾಯಿ ಸಮಿತಿ ಅಧ್ಯಕ್ಷರಾಗಿ ಆಯ್ಕೆ ಮಾಡುವಲ್ಲಿ ಕಾರಣಿಭೂತರಾಗಿದ್ದರು, ತದನಂತರ ಗುರುಮಠಕಲ್ ಪುರಸಭೆ ಅಧ್ಯಕ್ಷ ಮತ್ತು ಉಪಾಧ್ಯಕ್ಷ ಚುನಾವಣೆಯಲ್ಲಿ ಪಾಪಣ್ಣ ಮನ್ನೆಯವರ ಆಯ್ಕೆಗೆ ಕಾರಣರಾದರು, ಗುರುಮಠಕಲ್ ತಾಪಂ ಅಧ್ಯಕ್ಷರಾಗಿ ಬಂಜಾರ ಸಮುದಾಯದ ಈಶ್ವರ ರಾಠೋಡ ಮತ್ತು ಉಪಾಧ್ಯಕ್ಷರ ಆಯ್ಕೆಗೆ ಸಹಕರಿಸಿದ್ದಾರೆ.

ಟಿಎಪಿಎಂಸಿ ಅಧ್ಯಕ್ಷರಾಗಿ ದಲಿತ ಸಮುದಾಯದ ಜಿ. ತಮ್ಮಣ್ಣ, ಈ ಹಿಂದೆ ಹಾಲುಮತ ಸಮುದಾಯದ ಸುದರ್ಶನ್ ಜೈಗ್ರಾಂ ಅವರನ್ನು ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷರಾಗಿ ಆಯ್ಕೆ ಮಾಡಲಾಗಿತ್ತು. ಗುರುಮಠಕಲ್ ತಾಲೂಕು ಕೃಷಿಕ ಸಮಾಜದ ಅಧ್ಯಕ್ಷರಾಗಿ ಅಲ್ಪಸಂಖ್ಯಾತರ ಸಮುದಾಯದ ಅಯ್ಯೂಬ್‌ಖಾನ್ ರವರನ್ನು ಆಯ್ಕೆ ಮಾಡಲು ಸಹಕರಿಸಿದ್ದಾರೆ ಹೀಗೆ ಸಂದರ್ಭ ಬಂದಾಗಲೆಲ್ಲ ಹಿಂದುಳಿದ, ದಲಿತ, ಅಲ್ಪಸಂಖ್ಯಾತರ ಸಮುದಾಯಗಳಿಗೆ ಬೆಂಬಲ ನೀಡುತ್ತಾ ಕಂದಕೂರ ಕುಟುಂಬ ಪ್ರತಿಯೊಂದು ಸಮುದಾಯಕ್ಕೆ ರಾಜಕೀಯ ಪ್ರಾತಿನಿಧ್ಯ ಸಿಗುವಲ್ಲಿ ಶ್ರಮಿಸುತ್ತಿದೆ.

– ಸುಭಾಶ್ಚಂದ್ರ ಕಟಕಟಿ ಜೆಡಿಎಸ್ ಜಿಲ್ಲಾಧ್ಯಕ್ಷರು, ಯಾದಗಿರಿ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ :ಫೆ.4: ಇಲ್ಲಿನ ಪಿಎಲ್‌ಡಿ ಬ್ಯಾಂಕ್ ನೂತನ ಅಧ್ಯಕ್ಷರಾಗಿ ಜೆಡಿಎಸ್‌ನ ರಾಮಣ್ಣ ಕೋಟಗೇರಾ ಆಯ್ಕೆಯಾಗುವುದರೊಂದಿಗೆ ಜೆಡಿಎಸ್ ತೆಕ್ಕೆಗೆ ಅಧಿಕಾರ ಸಿಕ್ಕಂತಾಗಿದೆ.

ಜೆಡಿಎಸ್‌ಜಿಲ್ಲಾಧ್ಯಕ್ಷಸುಭಾಶ್ಚಂದ್ರ ಕಟಕಟಿ ನೇತೃತ್ವದ ತಂಡ ನಡೆಸಿದ ರಾಜಕೀಯ ಚಾಣಾಕ್ಷ ನಡೆಗೆ ಪಿಎಲ್‌ಡಿ ಬ್ಯಾಂಕ್ ಅಧಿಕಾರ ಈಗ ಜೆಡಿಎಸ್ ತೆಕ್ಕೆಗೆ ಬಂದಿದೆ.

ಜೆಡಿಎಸ್‌ನ ಚಾಣಕ್ಷ ನಡೆ ರೈತ ಸಮುದಾಯದ ಅಧಿಕಾರ ತೆಕ್ಕೆಗೆ ಬಂದಿರುವುದರಿಂದ ಮುಂಬರುವ ಹಲವು ಚುನಾವಣೆಗಳಿಗೆಪಿಎಲ್‌ಡಿಬ್ಯಾಂಕ್ ಚುನಾವಣೆ ದಿಕ್ಸೂಚಿಯಾಗಲಿದೆ ಎಂಬುದು ರಾಜಕೀಯ ತಜ್ಞರ ಅಭಿಪ್ರಾಯವಾಗಿದೆ.

ಪಿಎಲ್‌ಡಿ ಬ್ಯಾಂಕ್ ಅಧ್ಯಕ್ಷರಾಗಿ ಆಯ್ಕೆಯಾದ ರಾಮಣ್ಣ ಕೋಟಗೇರಾ ರವರು ಶಾಸಕ ಶರಣಗೌಡ ಕಂದಕೂರ ರವರನ್ನು ಸನ್ಮಾನಿಸಿದರು.

ಕಂದಕೂರ ಕುಟುಂಬ ನಿಷ್ಠೆಗೊಲಿದ ಪಟ್ಟ

ಯಾದಗಿರಿ ಪಿಎಲ್‌ಡಿ ಬ್ಯಾಂಕ್ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ರಾಮಣ್ಣ ಕೋಟಗೇರಾರವರು ಕಂದಕೂರ ಕುಟುಂಬಕ್ಕೆ ನಿಷ್ಠಾವಂತರಾಗಿ ಜೆಡಿಎಸ್ ಸಂಘಟನೆಯಲ್ಲಿ ತೊಡಗಿಸಿಕೊಂಡಿರುವುದರಿಂದ ಇಂದು ಅವರಿಗೆ ಈ ಹುದ್ದೆ ದೊರಕಿದೆ ಎನ್ನುವದರಲ್ಲಿ ಎರಡು ಮಾತಿಲ್ಲ, ಪಕ್ಷ ನಿಷ್ಠೆಯ ಜೊತೆಗೆ ನಾಯಕತ್ವ ನಿಷ್ಠೆಯೂ ಕೂಡ ಇಲ್ಲಿ ಕೆಲಸ ಮಾಡಿದೆ.

ಇದೇ ವೇಳೆ ಮಾತನಾಡಿದ, ಶಾಸಕಶರಣಗೌಡಕಂದಕೂರವರು ರೈತರ ಪರವಾಗಿ ಅತ್ಯುತ್ತಮ ಕೆಲಸ ಮಾಡಬೇಕು, ಸಿಕ್ಕಿರುವ ಅವಕಾಶವನ್ನು ಬಳಸಿಕೊಂಡು ಜನಸೇವೆಯಲ್ಲಿತೊಡಗಿಸಿಕೊಳ್ಳಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಪಿಎಲ್‌ಡಿ ಬ್ಯಾಂಕ್‌ನೂತನನಿರ್ದೇಶಕರಾದ ಬಸವರಾಜ ಕಣೇಕಲ್, ಶರಣಗೌಡ ಸೌರಾಷ್ಟ್ರಹಳ್ಳಿ, ಬಸರಡ್ಡಿ ಹೆಗ್ಗಣಗೇರಾ, ರಾಘವೇಂದ್ರರಡ್ಡಿ ಕೊಂಕಲ್, ಜೆಡಿಎಸ್ ಜಿಲ್ಲಾಧ್ಯಕ್ಷರಾದ ಸುಭಾಶ್ಚಂದ್ರ ಕಟಕಟಿ, ಸೋಮನಗೌಡ ಬೆಳಗೇರಾ, ಸಣ್ಣೆಪ್ಪ ಕೊಟಗೇರಾ, ಸಿದ್ದಪ್ಪ ಹೋರುಂಚಾ, ಬಸವರಾಜ ಪಸ್ಪೂಲ್, ನರಸಿಂಗರಡ್ಡಿ ಚಿಂತಗುಂಟಾ, ಬ್ರಹ್ಮಾನಂದ ಕೆ. ಹೊಸಳ್ಳಿ, ಮಲ್ಲಣಗೌಡ ಹೊಸಳ್ಳಿ ಇದ್ದರು.

# ಸವಿತಾ ಮಹರ್ಷಿಗಳ ಆದರ್ಶ-ವಿಚಾರಗಳನ್ನು ಮೈಗೂಡಿಸಿಕೊಳ್ಳಿ: ಚನ್ನಾರೆಡ್ಡಿ ಪಾಟೀಲ್ ತುನ್ನೂರ್



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ :ಫೆ:4: ಸವಿತಾ ಮಹರ್ಷಿಗಳ ಆದರ್ಶಗಳು ಸಮಾಜಮುಖಿಯಾಗಿ ಎಲ್ಲರಿಗೆ ದಾರಿದೀಪವಾಗಿದ್ದು, ಯುವ ಸಮುದಾಯ ಅವರ ತತ್ವಆದರ್ಶ, ಆಚಾರ-ವಿಚಾರಗಳನ್ನು ತಮ್ಮ ಜೀವನದಲ್ಲಿಮೈಗೂಡಿಸಿಕೊಳ್ಳಬೇಕು ಎಂದು ನಗರ ಶಾಸಕರಾದ ಶ್ರೀ ಚನ್ನಾರಡ್ಡಿಪಾಟೀಲ್ ತುನ್ನೂರ್ ಅವರು ಅಭಿಪ್ರಾಯಪಟ್ಟರು.

ನಗರದ ವಿದ್ಯಾಮಂಗಲ ಕಾರ್ಯಾಲಯದಲ್ಲಿ ಇಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ,ನಗರಸಭೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಆಯೋಜಿಸಿದ್ದ ಶ್ರೀಸವಿತಾ ಮಹರ್ಷಿ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ವಿವಿಧ ಜಯಂತಿಗಳನ್ನು ಆಚರಿಸಲು ಅವಕಾಶ ನೀಡುವ ಮೂಲಕ ಸರ್ಕಾರವು ಮಹಾತ್ಮರ ಆದರ್ಶಗಳ ದಾರಿಯಲ್ಲಿ ನಡೆಯಲು ಪ್ರೋತ್ಸಾಹ ನೀಡಿದೆ. ಸಮಾಜದಲ್ಲಿನ ಯುವಜನಾಂಗ ಸವಿತಾ ಮಹರ್ಷಿಗಳ ಆದರ್ಶ ಗುಣಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆಯಬೇಕು. ಆರ್ಥಿಕವಾಗಿ, ಸಾಮಾಜಿಕ, ಶೈಕ್ಷಣಿಕವಾಗಿ ಮುಂಚೂಣಿಗೆ ಬರುವಂತೆ ಕರೆ ನೀಡಿದರು.

ಸಹಾಯಕ ಉಪನ್ಯಾಸಕರಾದ ಪಿ.ವಿ.ವೆಂಕಟಾಚಲಪತಿ ಅವರು ಉಪನ್ಯಾಸ ನೀಡಿ, ಸವಿತಾ ಸಮಾಜವು ಸಮಾಜದಲ್ಲಿ ವಿಶಿಷ್ಟ ಇತಿಹಾಸ ಹೊಂದಿದೆ. ಶಿವನ ದಿವ್ಯದೃಷ್ಟಿಯಲ್ಲಿ ಜನ್ಮ ತಾಳಿದ ಸವಿತಾ ಮಹರ್ಷಿಯವರು ಪುರಾಣಗ್ರಂಥದಲ್ಲಿ ತಮ್ಮದೇ ಆದ ಸ್ಥಾನ ಹೊಂದಿದ್ದಾರೆ. ಸಮಾಜದ ಶ್ರೇಷ್ಠತೆಗೆ ಶ್ರಮಿಸಿದ ಮಹಾನ್ ಯುಗಪುರುಷರಾಗಿದ್ದಾರೆ. ಇಂತಹ ಮಹಾತ್ಮರ ಜಯಂತಿಯನ್ನು ಆಚರಿಸಲು ಅವಕಾಶ ಮಾಡಿಕೊಡುವ ಮೂಲಕ ಸರ್ಕಾರ ಇವರ ಆದರ್ಶಗಳ ಹಾದಿಯಲ್ಲಿ ನಡೆಯಲು ಬೆಳಕು ತೋರಿಸಿದೆ ಎಂದು ಹೇಳಿ ಸವಿತಾ ಸಮಾಜದವರು ಮಹರ್ಷಿಗಳ ಬದುಕಿನ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆಯಬೇಕೆಂದರು.

ಇದೇ ಸಂದರ್ಭದಲ್ಲಿ ಯಾದಗಿರಿ ನಗರಸಭೆ ಅಧ್ಯಕ್ಷರಾದ ಕು. ಲಲಿತ ಅನಪುರ್, ನಗರಾಭಿವೃದ್ಧಿ ಪ್ರಾಧಿಕಾರ ಅಧ್ಯಕ್ಷರು ಶ್ರೀ ವಿನಾಯಕ್ ಮಾಲಿಪಾಟೀಲ್, ಅಪರಜಿಲ್ಲಾಧಿಕಾರಿ ಶರಣಬಸಪ್ಪ ಕೋಟೆಪ್ಪಗೋಳ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕಿ ಶ್ರೀಮತಿ ಉತ್ತರಾದೇವಿ. ಮಠಪತಿ, ಸವಿತಾ ಸಮಾಜದ ಮುಖಂಡರಾದ ಮಲ್ಲಣ್ಣ ವಡಗೇರಾ ಹಾಗೂ ಸಮಾಜದ ಮುಖಂಡರು ಮತ್ತು ವಿವಿಧ ಇಲಾಖೆಯ ಅಧಿಕಾರಿ ಸಿಬ್ಬಂದಿಗಳು ಇದ್ದರು.

# ಮಾ. ೨೦ರಿಂದ ಮೂರು ದಿನ ಗ್ರಂಥಾಲಯ ಸಂಘದ ಅಂತಾರಾಷ್ಟ್ರೀಯ ಸಮ್ಮೇಳನ: ಕುಲಪತಿ ಎಂ.ಹನುಮಂತಪ್ಪ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರುಫೆ.04:ಇಲ್ಲಿನಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಆವರಣದಲ್ಲಿ ಮಾರ್ಚ್ 20 ರಿಂದ 22ರವರೆಗೆ ಭಾರತೀಯ ಗ್ರಂಥಾಲಯ ಸಂಘದಿಂದ ನಡೆಯಲಿರುವ 70ನೇ ಅಂತಾರಾಷ್ಟ್ರೀಯ ಸಮ್ಮೇಳನದಲ್ಲಿ ರಾಷ್ಟ್ರದಾದ್ಯಂತ ಸುಮಾರು 400 ಪ್ರತಿನಿಧಿಗಳು ಭಾಗವಹಿಸುವ ನಿರೀಕ್ಷೆಯಿದೆ ಎಂದು ವಿವಿಯ ಕುಲಪತಿ ಎಂ.ಹನುಮಂತಪ್ಪ ಅವರು ಹೇಳಿದರು.

ಫೆ.04ರ ಮಂಗಳವಾರ, ನಗರದ ಪತ್ರಿಕಾಭವನದಲ್ಲಿ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಅವರು ಮಾತನಾಡಿದರು.

ರಾಯಚೂರಿನ ಕೃಷಿ ವಿಜ್ಞಾನ ವಿಶ್ವವಿದ್ಯಾಲಯದ ಡಾ.ಬಿ.ಆರ್. ಅಂಬೇಡ್ಕರ್ ಗ್ರಂಥಾಲಯ ಮತ್ತು ಕರ್ನಾಟಕ ಕೇಂದ್ರೀಯ ವಿಶ್ವವಿದ್ಯಾನಿಲಯ ಕಲಬುರಗಿ ಇವರಿಂದ ಕಲ್ಯಾಣ ಕರ್ನಾಟಕ ಪ್ರದೇಶ ವ್ಯಾಪ್ತಿಯಲ್ಲಿ ನಡೆಯುವ ಈ ಅಂತಾರಾಷ್ಟ್ರೀಯ ಸಮ್ಮೇಳನದಿಂದ ಗ್ರಂಥಪಾಲಕರು ಮತ್ತು ಗ್ರಂಥಾಲಯ ವಿಜ್ಞಾನ ಶಿಕ್ಷಕರಿಗೆ ಹಲವಾರು ಪ್ರಯೋಜನಗಳನ್ನು ಒದಗಿಸುವ ನಿರೀಕ್ಷೆಯಿದೆ ಎಂದರು.

ಸಮ್ಮೇಳನವು ಗ್ರಂಥಾಲಯಗಳು ಮತ್ತು ಕೃತಕ ಬುದ್ಧಿಮತ್ತೆಯ ಕುರಿತು ಒತ್ತಿ ಹೇಳಲಿದೆ. ಗ್ರಂಥಾಲಯ ಮತ್ತು ಮಾಹಿತಿ ವಿಜ್ಞಾನವು ಸಮುದಾಯವನ್ನು ಬೆಳೆಸುವ ಪ್ರಾಮುಖ್ಯತೆಯ ಬಗ್ಗೆ ತಿಳಿಯಬಹುದಾಗಿದೆ. ಸಮ್ಮೇಳನದಲ್ಲಿ ನಾನಾ ವಿಷಯಗಳ ಮೇಲೆ ಚರ್ಚೆ ನಡೆದ ನಂತರ ಪ್ರಮುಖ ಶಿಫಾರಸಗಳನ್ನು ಭಾರತ ಸರ್ಕಾರಕ್ಕೆ ಮತ್ತು ಯುಜಿಸಿಗೆ ಸಲ್ಲಿಸಲಾಗುತ್ತದೆ ಎಂದರು.

ಗ್ರಂಥಾಲಯಗಳಲ್ಲಿ ಕೃತಕ ಬುದ್ಧಿಮತ್ತೆ ಬಳಕೆ, ಗ್ರಂಥಾಲಯ ಸಂಪನ್ಮೂಲಗಳು, ಹೊಸ ಹೊಸ ತಂತ್ರಜ್ಞಾನಗಳು, ಸಿಬ್ಬಂದಿ ತರಬೇತಿಯ ಅಗತ್ಯತೆ ಸೇರಿದಂತೆ ನಾನಾ ವಿಷಯಗಳ ಮೇಲೆ ಚರ್ಚೆ ನಡೆಯಲಿದೆ ಎಂದರು.

ಇದೇ ಸಂದರ್ಭದಲ್ಲಿ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಕುಲಸಚಿವರಾದ ಡಾ.ಗುರುರಾಜ ಸುಂಕದ, ಸಮ್ಮೇಳನದ ಸಂಘಟನಾ ಕಾರ್ಯದರ್ಶಿ ಡಾ.ಎಸ್. ಮಚೇಂದ್ರನಾಥ, ಡಾ.ಪ್ರಮೋದ ಕಟ್ಟಿ, ಡಾ.ಪಶುರಾಮ ಎಸ್. ಕಟ್ಟಿಮನಿ ಇದ್ದರು.

# ಸವಿತಾ ಮಹರ್ಷಿಗಳ ಆಚಾರ-ವಿಚಾರಗಳನ್ನು ಮೈಗೂಡಿಸಿಕೊಳ್ಳಿ: ಭೀಮರಾಯ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಫೆ.04:ಅಪಾರ ಜ್ಞಾನಭಂಡಾರ ಹೊಂದಿದ ಸವಿತಾ ಮಹರ್ಷಿಗಳು ಸಮಾಜವು ಖಿಂಯಾಗಿ ದಾರಿದೀಪವಾಗಿದ್ದಾರೆ. ಯುವ ಸಮುದಾಯ ಅವರ ಹಾದಿಯಲ್ಲಿ ಸಾಗಿ ಆಚಾರ–ವಿಚಾರಗಳನ್ನು ಮೈಗೂಡಿಸಿಕೊಳ್ಳಬೇಕು ಎಂದು ರಾಯಚೂರು ತಾಲೂಕು ಗ್ರೇಡ್–2 ತಹಶೀಲ್ದಾರ್ ಭೀಮರಾಯ ಅವರು ಅಭಿಪ್ರಾಯಪಟ್ಟರು.

ಫೆ.04ರ ಮಂಗಳವಾರದಂದು ನಗರದ ಪಂಡಿತ ಸಿದ್ದರಾಮ ಜಂಬಲದಿನ್ನಿ ರಂಗಮಂದಿರದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ರಾಯಚೂರು ಮಹಾನಗರ ಪಾಲಿಕೆ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಆಯೋಜಿಸಿದ್ದ ಶ್ರೀ ಸವಿತಾ ಮಹರ್ಷಿ ಜಯಂತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ವಿವಿಧ ಜಯಂತಿಗಳನ್ನು ಆಚರಿಸುವ ಮೂಲಕ ಸರ್ಕಾರವು ಮಹಾತ್ಮರ ಆದರ್ಶಗಳ ಹಾದಿಯಲ್ಲಿ ನಡೆಯಲು ಪ್ರೇರೇಪಿಸುತ್ತಿದೆ. ಸಮಾಜದ ಯುವಪೀಳಿಗೆ ಮಹರ್ಷಿಗಳ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆಯಬೇಕು ಹಾಗೂ ಆರ್ಥಿಕ, ಸಾಮಾಜಿಕ, ಶೈಕ್ಷಣಿಕವಾಗಿ ಬೆಳೆಯಬೇಕು ಎಂದರು.

ಪಾಲಕರು ತಮ್ಮ ಮಕ್ಕಳಿಗೆ ಉನ್ನತ ಶಿಕ್ಷಣ ಕೊಡಿಸಬೇಕು. ಸರ್ಕಾರದ ವಿವಿಧ ಸೌಲಭ್ಯವನ್ನು ಪಡೆಯಬೇಕು. ಸಂವಿಧಾನದ ಕುರಿತು ತಿಳಿದುಕೊಳ್ಳಬೇಕೆಂದರು.

ಈ ವೇಳೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಮಹಾದೇವಪ್ಪ ಅವರು ಉಪನ್ಯಾಸ ನೀಡಿ, ಸವಿತಾ ಸಮಾಜವು ಸಮಾಜದಲ್ಲಿ ವಿಶಿಷ್ಟ ಇತಿಹಾಸ ಹೊಂದಿದೆ. ಶಿವನ ದಿವ್ಯದೃಷ್ಟಿಯಲ್ಲಿ ಜನ್ಮ ತಾಳಿದ ಸವಿತಾ ಮಹರ್ಷಿಯವರು ಪುರಾಣ ಗ್ರಂಥದಲ್ಲಿ ತಮ್ಮದೇ ಆದ ಸ್ಥಾನ ಹೊಂದಿದ್ದಾರೆ. ಸಮಾಜದ ಶ್ರೇಷ್ಠತೆಗೆ ಶ್ರಮಿಸಿದ ಮಹಾನ್ ಯುಗಪುರುಷರಾಗಿದ್ದಾರೆ. ಸಮಾಜಮುಖಿಯಾಗಿ ಬೆಳೆದು ದಾರಿದೀಪವಾಗಿದ್ದಾರೆ. ಇಂತಹ ಮಹಾತ್ಮರ ಜಯಂತಿಯನ್ನು ಆಚರಿಸುವ ಮೂಲಕ ಸರ್ಕಾರ ಇವರ ಆದರ್ಶಗಳ ಹಾದಿಯಲ್ಲಿ ನಡೆಯಲು ಬೆಳಕು ತೋರಿಸಿದೆ ಎಂದರು. ಸವಿತಾ ಸಮಾಜದವರು ಮಹರ್ಷಿಗಳ ಬದುಕಿನ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆಯಬೇಕೆಂದರು.

ಇದೇ ಸಂದರ್ಭದಲ್ಲಿ ರಾಯಚೂರು ಮಹಾನಗರ ಪಾಲಿಕೆಯ ಅಧ್ಯಕ್ಷರಾದ ನರಸಮ್ಮ ನರಸಿಂಹಲು ಮಾಡಗಿರಿ ಸೇರಿದಂತೆ ಮಹಾನಗರ ಪಾಲಿಕೆಯ ಸದಸ್ಯರು ಹಾಗೂ ಸಮಾಜದ ಮುಖಂಡರು ಮತ್ತು ವಿವಿಧ ಇಲಾಖೆಯ ಅಧಿಕಾರಿ ಸಿಬ್ಬಂದಿ ಇದ್ದರು.

# ದೈವಶಕ್ತಿ ಎಲ್ಲಕ್ಕಿಂತಲೂದೊಡ್ಡದು: ಬಸವಲಿಂಗ ಪಟ್ಟದ್ದೇವರು



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಫೆ.4 ಎಲ್ಲಾ ಶಕ್ತಿಗಳಿಗಿಂತಲೂ ಧೈವಶಕ್ತಿ ಬಹುದೊಡ್ಡದ್ದಾಗಿದೆ ಎಂದು ಹಿರೇಮಠದ ಹಿರಿಯ ಸ್ವಾಮೀಜಿ ನಾಡೋಜ ಡಾ। ಬಸವಲಿಂಗ ಪಟ್ಟದ್ದೇವರು ಹೇಳಿದರು. ಪಟ್ಟಣದ ನುಚ್ಚಾ ನಿವಾಸದಲ್ಲಿ ಸಾವಿತ್ರಿ ಎಸ್ ನುಚ್ಚಾ ರವರ ಸ್ವ ಇಚ್ಛಾ ನಿವೃತ್ತಿಯ ಬೀಳ್ಕೊಡುವ ಆತ್ಮೀಯ ಸ್ನೇಹ ಸಮಾರಂಭದ ಸಾನಿಧ್ಯವಹಿಸಿ ಅವರು ಮಾತನಾಡಿದರು. ದೈವಶಕ್ತಿಯಿಂದ ಎಲ್ಲವನ್ನೂ ಬದಲಾಯಿಸಬಹುದು. ದೈವಶಕ್ತಿಯೊಂದಿಗೆ ಆಶೀರ್ವಾದ ಶಕ್ತಿ ಒಟ್ಟುಗೂಡಿದರೆ ಎಂತಹ ಸಮಸ್ಯಗಳಿಗೂ ಪರಿಹಾರ ಕಾಣಬಹುದು. ನುಚ್ಚಾ ಪರಿವಾರಕ್ಕೆ ದೊಡ್ಡಪ್ಪನವರ ಆಶೀರ್ವಾದ ಶಕ್ತಿ ಇದೆ. ಇದರಿಂದಲೇ ಸಾವಿತ್ರಿ ನುಚ್ಚಾ ರವರು, ಅನಾರೋಗ್ಯದಿಂದ ಪಾರಾಗಿ ಪುನರ್ಜನ್ಮ ಪಡೆದು ನಮ್ಮ ಮುಂದಿದ್ದಾರೆ. ಇವರಿಗೆ ಹಿರೇಮಠ ಸಂಸ್ಥಾನದ ಆಶೀರ್ವಾದ ಶಕ್ತಿ ಸದಾ ದೊರೆಯಲಿ ಎಂದು ಹಾರೈಸಿದರು. ಹಿರೇಮಠದ ಪೀಠಾಧಿಪತಿ ಶ್ರೀ ಗುರುಬಸವ ಪಟ್ಟದ್ದೇವರು ಮಾತನಾಡಿ, ಕಾಯಿಲೆ ಬಂದಾಗ ಆತ್ಮ ವಿಸ್ವಾಸ ದೊಡ್ಡ ಕೆಲಸ ಮಾಡುತ್ತದೆ. ಸಾವಿತ್ರಿ ನುಚ್ಚಾರವರಲ್ಲಿಯ ಆತ್ಮ ಬಲ ಅವರನ್ನು ಎಂದಿಗೂ ಕುಗ್ಗಿಸಲಾರದು. ಅವರು ತಮ್ಮ ಶಾಲಾ ವಿದ್ಯಾರ್ಥಿಗಳ ಮೇಲಿಟ್ಟಿರುವ ಪ್ರೀತಿ ವಿಸ್ವಾಸ ಅವರಲ್ಲಿ ಚೈತನ್ಯ ಮೂಡಿಸಿದೆ ಎಂದು ಹೇಳಿದರು. ಸನ್ಮಾನ ಸ್ವೀಕರಿಸಿ ಮಾತನಾಡಿದ ಸಾವಿತ್ರಿ.ಎಸ್.ನುಚ್ಚಾ, ಶಿಕ್ಷಣ ಇಲಾಖೆಯಲ್ಲಿ ಮುವತ್ತುವರೆ ವರ್ಷಗಳ ಕಾಲ ಸಲ್ಲಿಸಿರುವ ಸೇವೆ ತೃಪ್ತಿ ತಂದುಕೊಟ್ಟಿದೆ ಎಂದು ಹೇಳಿದರು.

ಕ್ಷೇತ್ರಶಿಕ್ಷಣಾಧಿಕಾರಿ ಸಿ.ಜಿ.ಹಳ್ಳದ ಮಾತನಾಡಿ, ಸಾವಿತ್ರಿ ನುಚ್ಚಾ ರವರು ಮಕ್ಕಳ ಮೇಲಿನ ಅಭಿಮಾನದಿಂದ ಸ್ವಯಂ ನಿವೃತ್ತಿ ತೆಗೆದುಕೊಳ್ಳುತ್ತಿರುವುದು ಸ್ವಾಗತಾರ್ಹ ಸಂಗತಿಯಾಗಿದೆ. ತಮಗೆ ಆಗಿರುವ ಅನಾರೋಗ್ಯದಿಂದ ಮಕ್ಕಳಿಗೆ ಅನ್ಯಾಯವಾಗದಿರಲಿ ಎಂದು ಅವರು ಸ್ವಯಂ ನಿವೃತ್ತಿಯಾಗುತ್ತಿದ್ದಾರೆ. ನಾವು ವಿದ್ಯಾರ್ಥಿಗಳ ಬೆಳವಣಿಗೆಗೆ ಅವರ ಮಾರ್ಗದರ್ಶನ ಪಡೆದು ಕಾರ್ಯನಿರ್ವಹಿಸುತ್ತೇವೆ ಎಂದು ಹೇಳಿದರು.

ಸಾವಿತ್ರಿ ನುಚ್ಚಾರವರ ಸಂಬಂಧಿ ಜಯಶ್ರೀ ಸುಕಾಲೆ ಮಾತನಾಡಿ, ಜೀವನದಲ್ಲಿ ಬದುಕು ಸಾಗಿಸಲು ಸಾವತ್ರಿ ನುಚ್ಚಾರವರು ಮಾರ್ಗದರ್ಶಿಯಾಗಿದ್ದಾರೆ ಎಂದು ಹೇಳಿದರು. ವೀರಶೈವ ಮಹಾಸಭಾದ ತಾಲೂಕು ಅಧ್ಯಕ್ಷ ಮಲ್ಲಿಕಾರ್ಜುನ ಹಲಮಂಡಗೆ ಮಾತನಾಡಿ, ನುಚ್ಚಾ ಪರಿವಾರ ಸುಶಿಕ್ಷಿತ ಪರಿವಾರವಾಗಿದೆ ಎಂದು ಹೇಳಿದರು. ಇದೇ ವೇಳೆ ಸಾವಿತ್ರಿ.ಎಸ್.ನುಚ್ಚಾರವರ ಪತಿ ಸಾಹಿತಿ ಡಾ। ಸೋಮನಾಥ ನುಚ್ಚಾ ರವರು ತಮ್ಮ ದಾಂಪತ್ಯ ಜೀವನದಲ್ಲಿಯ ಸ್ವಾರಸ್ಯಗಳ ಘಟನೆಗಳ ಬಗ್ಗೆ ಸ್ವರಚಿತ ಕವನ ವಾಚನ ಮಾಡಿ, ಸಭಿಕರ ಕಣ್ಣಂಚಿನಲ್ಲಿ ನೀರು ತರಿಸಿದರು. ಹಾಗೆಯೇ ಸಾವಿತ್ರಿ ನುಚ್ಚಾ ದಂಪತಿಗಳಿಗೆ ಶ್ರೀಮಠದಿಂದ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಕರ್ನಾಟಕ ಸರ್ಕಾರಿ ನೌಕರರ ಸಂಘದ ತಾಲೂಕು ಕಾರ್ಯದರ್ಶಿ ರಾಜೆಪ್ಪ ಪಾಟೀಲ, ಪ್ರಾಥಮಿಕ ಶಿಕ್ಷಕರ ಸಂಘದ ಅಧ್ಯಕ್ಷ ಸೂರ್ಯಕಾಂತ ಸುಂಟೆ, ಸ್ವೇತಾ ಪಾಟೀಲ, ಮಹೆಶ. ಆರ್.ಪಾಟೀಲ, ಓಂಕಾರ ನುಚ್ಚಾ, ರಾಜಕುಮಾರ ಬಂಡೆಪ್ಪಾ ಪಾಟೀಲ, ಶ್ರೀದೇವಿ ಪಾಟೀಲ, ಮಲ್ಲಿಕಾರ್ಜುನ ನುಚ್ಚಾ, ವಿಜಯಲಕ್ಷ್ಮಿ ?? ಓಂಕಾರ ನುಚ್ಚಾ, ಮಹೇಶ ನುಚ್ಚಾ, ಕಿರಣ ನುಚ್ಚಾ, ವಿಜಯಲಕ್ಷ್ಮಿ ??ಲಿಂಗಾನಂದ ಉಪಸ್ಥಿತರಿದ್ದರು.

ಸೋಮನಾಥ ನುಚ್ಚಾ ಸ್ವಾಗತಿಸಿದರು. ಲಿಂಗಾನಂದ ನಿರೂಪಿಸಿದರು. ಲೋಕೇಶ ಪಾಟೀಲ ವಂದಿಸಿದರು. ಎಲ್ಲಕ್ಕಿಂತಲೂ ದೊಡ್ಡದ್ದು :ಶ್ರೀ ಬಸವಲಿಂಗ ಪಟ್ಟದ್ದೇವರು

# ಕುಲಸಚಿವರಾಗಿ ಡಾ. ಗುರುರಾಜ ಸುಂಕದ ಅಧಿಕಾರ ಸ್ವೀಕಾರ



ರಾಯಚೂರು ಫೆ.04 : ಇಲ್ಲಿನ ರಾಯಚೂರು ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ನೂತನ ಕುಲಸಚಿವರಾಗಿ ಡಾ.ಗುರುರಾಜ ಸುಂಕದ ಅವರು ಫೆ.01ರಂದು ಶನಿವಾರ ಅಧಿಕಾರ ಸ್ವೀಕರಿಸಿದರು.

ಡಾ. ಗುರುರಾಜ ಸುಂಕದ ಅವರು ರಾಯಚೂರು ಕೃಷಿ ಮಹಾವಿದ್ಯಾಲಯದ ಪ್ರಥಮ ಬ್ಯಾಚ್‌ನ ಹಳೆ ವಿದ್ಯಾರ್ಥಿಯಾಗಿದ್ದು, ವಿಶ್ವವಿದ್ಯಾಲಯದಲ್ಲಿ ಸಸ್ಯರೋಗ ಶಾಸ್ತ್ರವಿಭಾಗದ ವಿಶ್ವವಿದ್ಯಾಲಯದ ಪ್ರಾಧ್ಯಾಪಕರಾಗಿ, ಸಸ್ಯರೋಗಶಾಸ್ತ್ರ ವಿಭಾಗದ ಮುಖ್ಯಸ್ಥರಾಗಿ, ಸಹ ಸಂಶೋಧನಾ ನಿರ್ದೇಶಕರಾಗಿ, ಸ್ನಾತಕೋತ್ತರ ವಿಭಾಗದ ಡೀನ್‌ರಾಗಿ ಹೀಗೆ ವಿವಿಧ ಹುದ್ದೆಗಳಲ್ಲಿ ಸುಮಾರು 27 ವರ್ಷ ಸೇವೆ ಸಲ್ಲಿಸಿದ್ದಾರೆ. ಅಲ್ಲದೆ ವಿಶ್ವವಿದ್ಯಾಲಯದ ಹಳೆಯ ವಿದ್ಯಾರ್ಥಿ ಸಂಘದ ಅಧ್ಯಕ್ಷರಾಗಿ ಮತ್ತು ವಿಶ್ವವಿದ್ಯಾಲಯದ ಆಡಳಿತ ಮಂಡಳಿಯ ಗೌರವಾನ್ವಿತ ಸದಸ್ಯರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಇವರ ಆಗಾಧ ಸೇವೆ ಮತ್ತು ಅನುಭವವನ್ನರಿತ ವಿಶ್ವವಿದ್ಯಾಲಯವು ಕುಲಸಚಿವರನ್ನಾಗಿ ಮಾಡಿ ಆದೇಶ ಹೊರಡಿಸಿದೆ.

# ಫೆ.14, 15ರಂದು ಶಿಕ್ಷಣ ಸಮಾವೇಶ

ರಾಯಚೂರು ಫೆ.04 : ಶಾಲಾ ಶಿಕ್ಷಣ ಇಲಾಖೆಯಿಂದ ಗುಣಾತ್ಮಕ ಶಿಕ್ಷಣಕ್ಕಾಗಿ ಮತ್ತು ಶಿಕ್ಷಣ ಕ್ಷೇತ್ರದಲ್ಲಿ ನವೀನ ವಿಧಾನಗಳ ಮೂಲಕ ಪರಿವರ್ತನೆಯನ್ನು ತರುವ ಹಿನ್ನೆಲೆಯಲ್ಲಿ ಫೆ.14 ಮತ್ತು 15ರಂದು ಎರಡು ದಿನಗಳ ಶಿಕ್ಷಣ ಸಮಾವೇಶವನ್ನು ರಾಯಚೂರಿನ ಕೃಷಿ ವಿಜ್ಞಾನಗಳ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಶಿಕ್ಷಣ ತಜ್ಞರು, ಸ್ವಯಂ ಸೇವಾ ಸಂಸ್ಥೆಗಳು ಹಾಗೂ ಶಿಕ್ಷಣ ಭಾಗೀದಾರರನ್ನು ಒಗ್ಗೂಡಿಸುವ ಮೂಲಕ ಕಲ್ಯಾಣ ಕರ್ನಾಟಕದ ವಿಭಾಗದ ಶಿಕ್ಷಣ ಕ್ಷೇತ್ರದಲ್ಲಿ ಗುಣಾತ್ಮಕತೆಯನ್ನು ತರುವ ಉದ್ದೇಶದಿಂದ ಹಮ್ಮಿಕೊಂಡ ಈ ಸಮಾವೇಶದಲ್ಲಿ ಭಾಗವಹಿಸಲಿಚ್ಚಿಸುವ ಶಿಕ್ಷಣ ಭಾಗೀದಾರರು ಫೆ.07ರೊಳಗಾಗಿ ತಮ್ಮ ಹೆಸರುಗಳನ್ನು ನೊಂದಾಯಿಸಿಕೊಳ್ಳಬಹುದಾಗಿದೆ ಎಂದು ಕಲಬುರಗಿ ವಿಭಾಗದ ಅಪರ ಆಯುಕ್ತರಾದ ಡಾ.ಆಕಾಶ್ ಎಸ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಇಪಿಎಫ್‌ಓ: ಫೆ.13 ರಂದು ಪಿಂಚಣಿ ಅದಾಲತ್

ಬಳ್ಳಾರಿ,ಫೆ.04:ಕಾರ್ಮಿಕರ ಭವಿಷ್ಯನಿಧಿ ಸಂಸ್ಥೆಯ ಬಳ್ಳಾರಿ ಪ್ರಾದೇಶಿಕ ಕಚೇರಿ ವತಿಯಿಂದ ಪಿಂಚಣಿದಾರರ ಕುಂದು ಕೊರತೆ ಆಲಿಸಿ, ಪರಿಹರಿಸಲು ಫೆ.13 ರಂದು ಬೆಳಿಗ್ಗೆ 11 ಗಂಟೆಯಿಂದ ಮಧ್ಯಾಹ್ನ 01 ಗಂಟೆಯವರೆಗೆ ನಗರದ ಪ್ರಾದೇಶಿಕ ಕಚೇರಿಯಲ್ಲಿ ಪಿಂಚಣಿ ಅದಾಲತ್ ಕಾರ್ಯಕ್ರಮ ಏರ್ಪಡಿಸಲಾಗಿದೆ ಎಂದು ಜಿಲ್ಲಾ ಪ್ರಾದೇಶಿಕ ಕಚೇ–ರಿಯ ಪ್ರಾದೇಶಿಕ ಭವಿಷ್ಯ ನಿಧಿ ಆಯುಕ್ತ ಕೆ.ವೆಂಕಟ ಸುಬ್ಬಯ್ಯ ಅವರು ತಿಳಿಸಿದ್ದಾರೆ.

ಬಳ್ಳಾರಿ, ವಿಜಯನಗರ, ಕೊಪ್ಪಳ, ಚಿತ್ರದುರ್ಗ ಜಿಲ್ಲೆಗಳ ಪಿಂಚಣಿದಾರರು ತಮ್ಮ ಕುಂದುಕೊರತೆಗಳಿದ್ದಲ್ಲಿ ಬಳ್ಳಾರಿ ಪ್ರಾದೇಶಿಕ ಕಚೇ–ರಿಯ ಸಾರ್ವಜನಿಕ ಸಂಪರ್ಕ ಅಧಿಕಾರಿಗೆ ಪತ್ರ ಅಥವಾ ಇ–ಮೇಲ್ ಮೂಲಕ ಪಿ.ಪಿ.ಓ ಸಂಖ್ಯೆ, ವಿಳಾಸ, ದೂರವಾಣಿ, ಮೊಬೈಲ್ ಸಂಖ್ಯೆ ಮತ್ತು ಕುಂದು ಕೊರತೆಯ ಸ್ವರೂಪವ ಹಾಗೂ ಇತ್ಯಾದಿಗಳನ್ನು ಫೆ.10 ರೊಳಗಾಗಿ ತಿಳಿಸಬಹುದು. ಪತ್ರ ಲಕೋಟೆ ಮೇಲೆ ಪಿಂಚಣಿ ಅದಾಲತ್ ಎಂದು ಬರೆಯಬೇಕು.

ಹೆಚ್ಚಿನ ಮಾಹಿತಿಗಾಗಿ ದೂ.08392–268943 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಬ್ಯಾಂಕಿನ ಅಭಿವೃದ್ಧಿಗೆ ಒಗ್ಗಟ್ಟಿನಿಂದ ಕೆಲಸ ಮಾಡಿ




ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ:ಫೆ.4:ಜಿಲ್ಲೆಯಲ್ಲಿಯೇ ಒಳ್ಳೆಯ ಹೆಸರು ಹೊಂದಿರುವ ಈ ಬ್ಯಾಂಕನ್ನು ಕಟ್ಟಿ ಬೆಳೆಸಲು ಹಿರಿಯರು ಸಾಕಷ್ಟು ತ್ಯಾಗಗಳನ್ನು ಕೊಟ್ಟಿದ್ದಾರೆ ಅವರು ಹಾಕಿ ಕೊಟ್ಟು ಹೋದ ಮಾರ್ಗದಲ್ಲಿಯೇ ನಡೆದು ಬ್ಯಾಂಕಿನ ಅಭಿವೃದ್ಧಿಗೆ ಎಲ್ಲರೂ ಒಂದಾಗಿ ಕೆಲಸ ಮಾಡಿ ಎಂದು ವಿ.ವಿ.ಸಂಘದ ಅಧ್ಯಕ್ಷ ವಿರುಪಾಕ್ಷಯ್ಯ ಹಿರೇಮಠ ಬ್ಯಾಂಕಿನ ನೂತನ ನಿರ್ದೇಶಕರಿಗೆ ಸಲಹೆ ನೀಡಿದರು.

ಮಂಗಳವಾರ ಪಟ್ಟಣದ ವೀರಶೈವ ವಿದ್ಯಾವರ್ಧಕ ಸಂಘದ ವಿರಕ್ತ ಶ್ರೀ ಸಭಾ ಭವನದಲ್ಲಿ ಸಂಘದ ವತಿಯಿಂದ ಹಮ್ಮಿಕೊಂಡ ತಾಳಿಕೋಟಿ ಸಹಕಾರಿ ಬ್ಯಾಂಕ್‌ಗೆ ನೂತನವಾಗಿ ಆಯ್ಕೆಗೊಂಡ ಅಧ್ಯಕ್ಷ ಉಪಾಧ್ಯಕ್ಷ ಹಾಗೂ ನಿರ್ದೇಶಕರ ಸನ್ಮಾನ ಸಮಾರಂಭದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಸನ್ಮಾನ ಸ್ವೀಕರಿಸಿ ಮಾತನಾಡಿದ ಬ್ಯಾಂಕಿನ ನೂತನ ಅಧ್ಯಕ್ಷ ಕಾಶಿನಾಥ ಸಜ್ಜನ ಅವರು ನಿಮ್ಮೆಲ್ಲರ ಪ್ರೀತಿ ವಿಶ್ವಾಸ ಹಾಗೂ ಸಹಕಾರದಿಂದ ನಾವು ಬ್ಯಾಂಕಿನ ಅಧ್ಯಕ್ಷ ಹಾಗೂ ಉಪಾಧ್ಯಕ್ಷರಾಗಿ ಆಯ್ಕೆಯಾಗಿದ್ದೇವೆ, ನಿಮ್ಮ ಋಣ ನಮ್ಮ ಮೇಲಿದೆ ಹಿರಿಯರು ಹಾಕಿ ಕೊಟ್ಟ ಮಾರ್ಗದಲ್ಲಿಯೇ ನಡೆದು ಬ್ಯಾಂಕಿನ ಅಭಿವೃದ್ಧಿಗಾಗಿ ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇವೆ ಎಂದರು. ಇದೇ ಸಂದರ್ಭದಲ್ಲಿ 2024–25 ನೇ ಸಾಲಿನ ಜ್ಯೋತಿಬಾ ಫುಲೆ ಆದರ್ಶ ಪ್ರಾಚಾರ್ಯ ಪ್ರಶಸ್ತಿ ಪಡೆದ ಜ್ಯೋತಿ ಹಿರೇಮಠ, ರಾಜ್ಯಮಟ್ಟದ ಆದರ್ಶ ಶಿಕ್ಷಕಿ ಪ್ರಶಸ್ತಿ ಪಡೆದ ಬಿ.ಟಿ.ಸಜ್ಜನ ಹಾಗೂ ಹಿಂದಿ ಭಾಷಾ ವಿಷಯದ ಮೇಲೆ ಪಿ.ಎಚ್.ಡಿ ಪದವಿ ಪಡೆದ ಡಾ.ಅನೀಲಕುಮಾರ ಇರಾಜ್ ಇವರಿಗೆ ಸಂಸ್ಥೆ ವತಿಯಿಂದ ಸನ್ಮಾನಿಸಿ ಗೌರವಿಸಲಾಯಿತು. ಕಾರ್ಯಕ್ರಮದಲ್ಲಿ ವಿವಿ ಸಂಘದ ಉಪಾಧ್ಯಕ್ಷ ಬಿ.ಎನ್.ಹಿಪ್ಪರಗಿ, ಸಹ ಕಾರ್ಯದರ್ಶಿ ಕಾಶಿನಾಥ ಮುರಾಳ, ಬ್ಯಾಂಕಿನ ನೂತನ ನಿರ್ದೇಶಕರಾದ ಮುರಿಗೆಪ್ಪ ಸರಶೆಟ್ಟಿ, ದತ್ತಾತ್ರೇಯ ಹೆಬಸೂರ, ಈಶ್ವರಪ್ಪ ಬಿಳೇಭಾವಿ, ಚಿಂತಪ್ಪಗೌಡ ಯಾಳಗಿ, ಡಿ.ಕೆ.ಪಾಟೀಲ, ಬಾಬು ಹಜೇರಿ, ಪ್ರಹ್ಲಾದಸಿಂಗ್ ಹಜೇರಿ, ಸುರೇಶ ಪಾಟೀಲ, ಗಿರಿಜಾಬಾಯಿ ಕೊಡಗನೂರ, ಶೈಲಾ ವಿಶ್ವನಾಥ ಬಡದಾಳಿ, ಸಂಜೀವಪ್ಪ ಬರದೇನಾಳ, ರಾಮಣ್ಣ ಕಟ್ಟಿಮನಿ, ಪುರಸಭೆ ಮಾಜಿ ಸದಸ್ಯ ಪ್ರಭುಗೌಡ ಮದರಕಲ್ಲ, ಪ್ರಕಾಶ ಹಜೇರಿ, ನಿವೃತ್ತ ಶಿಕ್ಷಕ ಎಸ್.ಎನ್.ಬಸವಣ್ಣನವರ, ಗುರುನಾಥ ರೆಡ್ಡಿ ಪೊಲೀಸಪಾಟೀಲ ಸಂಘದ ನಿರ್ದೇಶಕರು, ಸದಸ್ಯರು, ಅಂಗ ಸಂಸ್ಥೆಗಳ ಮುಖ್ಯಸ್ಥರು, ಪ್ರಾಚಾರ್ಯರು, ಶಿಕ್ಷಕರು, ಬಿಎಡ್ ಪ್ರಶಿಕ್ಷಾರ್ಥಿಗಳು ಹಾಗೂ ಸಿಬ್ಬಂದಿಗಳು ಇದ್ದರು. ವಿದ್ಯಾರ್ಥಿನಿ ಐಶ್ವರ್ಯ ಚವಾಣ ಪ್ರಾರ್ಥಿಸಿದರು. ಉಪನ್ಯಾಸಕಿ ದೀಪಾ ಮಾಡಗಿ ಸ್ವಾಗತಿಸಿದರು. ಕಾಶಿನಾಥ ದೇಸಾಯಿ ನಿರೂಪಿಸಿ ವಂದಿಸಿದರು.

# ಸಾವಯವ ಕೃಷಿ ಅಳವಡಿಸಿ, ಉತ್ತಮ ಕೃಷಿಕರಾಗಿ:ನಿರ್ಮಲ



ಮಲ್ಲಮ್ಮ ನುಡಿ ವಾರ್ತೆ


ಕಮಲನಗರ:ಫೆ.4:ಕೃಷಿ ಪ್ರಧಾನ ಕುಟುಂಬದವರಾದ ನಾವುಗಳು ಆಧುನಿಕ ಪದ್ಧತಿಯ ಜೊತೆಗೆ ಸಾವಯವ ಕೃಷಿ ಅಳವಡಿಸಿಕೊಂಡು, ಸ್ಪರ್ಧಾತ್ಮಕ ಯುಗದಲ್ಲಿ ಉತ್ತಮ ಕೃಷಿಕರಾಗಿ ಸಮೃದ್ಧ ಬದುಕು ಸಾಗಿಸಬೇಕು ಎಂದು ಪ್ರೌಢಶಾಲೆ ಸಹ ಶಿಕ್ಷಕರು ಶ್ರೀಮತಿ ನಿರ್ಮಲ ಹೇಳಿದರು. ತಾಲೂಕಿನ ದಾಬಾಕ ವಲಯದ ಮುರ್ಕಿ ಕಾರ್ಯಕ್ಷೇತ್ರದಲ್ಲಿ ಎಸ್ ಕೆ ಡಿ ಆರ್ ಡಿ ಪಿ ಯೋಜನೆಯ ವತಿಯಿಂದ ಏರ್ಪಡಿಸಿದ ಒಂದು ದಿನದ ಕೃಷಿ ತರಬೇತಿ ಕಾರ್ಯಗಾರದಲ್ಲಿ ಅವರು ಮುಖ್ಯ ಅತಿಥಿಯಾಗಿ ಮಾತನಾಡಿದರು.

ರೈತರು ಪ್ರತಿ ವರ್ಷ ಒಂದೆ ಬೆಳೆ ತರಹದ ಬೆಳೆಯನ್ನು ಬೆಳೆಯದೆ ಹೊಸದನ್ನು ಪ್ರಯೋಗ ಮಾಡಬೇಕು, ಮಣ್ಣಿ ಸತ್ವ ಪರೀಕ್ಷೆ ಮಾಡಿ ಅದಕ್ಕೆ ಅನಗುಣವಾದ ಬೆಳೆ ಬೆಳೆದು ಹೆಚ್ಚಿನ ಲಾಭ ಪಡೆಯಿರಿ ಎಂದು ಹೇಳಿದರು.

ಕೃಷಿ ಮೇಲ್ವಿಚಾರಕರು ಬಸವರಾಜ ಮಾತಾನಾಡಿ, ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ಏರ್ಪಡಿಸಿದ ಒಂದು ದಿನದ ಕೃಷಿ ತರಬೇತಿ ಕಾರ್ಯಗಾರಕ್ಕೆ ಚಾಲನೆ ನೀಡಿ ಮಾತನಾಡಿದ ಅವರು, ಅತಿವೃಷ್ಟಿ ಅನಾವೃಷ್ಟಿಯಿಂದ ರೈತರು ಸರಿಯಾದ ಸಮಯಕ್ಕೆ ಉತ್ತಮವಾದ ಬೆಳೆಗಳನ್ನು ಬೆಳೆಯಲು ವಿಫಲರಾಗುವುದಕ್ಕಿಂತ ಮುಂಚೆ ಮಳೆ ನೀರನ್ನು ಸಂಗ್ರಹಿಸಿ, ಹನಿ ನೀರಾವರಿ ಬೇಸಾಯ ಪದ್ಧತಿ ಕಡೆಗೆ ಗಮನ ಸೆಳೆಯಬೇಕು ಎಂದು ಹೇಳಿದರು.

ಈ ಸಂದರ್ಭದಲ್ಲಿ ಮುರ್ಕಿ ಪ್ರೌಢಶಾಲೆ ಸಹ ಶಿಕ್ಷಕರು ಶ್ರೀಮತಿ ನಿರ್ಮಲ, ಕೃಷಿ ಮೇಲ್ವಿಚಾರಕ ಬಸವರಾಜ, ಸೇವಾ ಪ್ರತಿನಿಧಿ ಶ್ರೀಮತಿ ಸೀಮಾ ಆಸಕ್ತ ಮಹಿಳಾ ಕೃಷಿಕರರು ಮತ್ತು ಪ್ರಗತಿ ಬಂದು ಸ್ವ ಸಹಾಯ ಸಂಘದ ಸದಸ್ಯರು ಇದ್ದರು.

# ಸವಿತಾ ಮಹರ್ಷಿ ಸಮಾಜದ ಜನ ಕಾಯಕ ಜೀವಿಗಳು



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಫೆ.4:ಯಾವದು ಕೆಲಸ ದೊಡ್ಡದು ಸಣ್ಣದು ಅಂತಾ ಇರುವುದಿಲ್ಲ ಎಂದು ಭಾವಿಸಿ 12ನೇ ಶತಮಾನದದ ಶರಣರಾದ ಹಡಪದ ಅಪ್ಪಣ್ಣ ಬಹಳ ಭಕ್ತಿಯಿಂದ ಕ್ಷೌರಿಕ ಕಾಯಕ ಮಾಡುತ್ತಿದ್ದರು. ಹಾಗೆಯೆ ಇಂದು ಕೂಡ ಸವಿತಾ ಮಹರ್ಷಿ ಸಮಾಜದ ಜನ ಕಾಯಕ ಜೀವಿಗಳಾಗಿ ತಮ್ಮ ಜೀವನವನ್ನು ರೂಪಿಕೊಳ್ಳುತ್ತಿದ್ದಾರೆ. ಪಟ್ಟಣದ ತಹಶೀಲ ಕಛೇರಿ ಕಮಲನಗರದಲ್ಲಿ ಶ್ರೀ ಸವಿತಾ ಮಹರ್ಷಿ ಜಯಂತಿಯನ್ನು ಮಾನ್ಯ ತಹಶೀಲ್ದಾರರು ಶ್ರೀ ಸವಿತಾ ಮಹರ್ಷಿ ರವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಮಾತನಾಡಿದರು, ಸವಿತಾ ಮಹರ್ಷಿ ಕ್ಷೌರಿಕ ಸಮಾಜದ ಮೂಲಪುರುಷರು. ಸವಿತಾ ಮಹರ್ಷಿಗಳು ದೇವಾನುದೇವತೆಗಳಿಗೆ ಕ್ಷೌರ ಮಾಡುತ್ತಿದ್ದರು ಎಂಬ ನಂಬಿಕೆಯಿದೆ. ಅಲ್ಲದೆ, ದೇವತೆಗಳ ಜತೆಗೆ ತಪಸ್ಸು ಮಾಡುತ್ತಿದ್ದರು ಎಂದು ಹೇಳಿದರು. ಸಂದರ್ಭದಲ್ಲಿ ಮುಖ್ಯ ಶಿಕ್ಷಕರಾದ ಮನೋಜಕುಮಾರ ಹಿರೇಮಠ, ಪ್ರಶಾಂತ, ಏಕನಾಥ, ಸೇರಿದಂತೆ ತಹಸೀಲ ಕಛೇರಿಯ ಅಧಿಕಾರಗಳು ಹಾಗೂ ಸಿಬ್ಬಂದಿಯರು ಉಪಸ್ಥಿತರಿದ್ದರು.

# ಸಾರ್ವಜನಿಕರು ದುಶ್ಚಟಗಳಿಂದ ದೂರವಿರಬೇಕು



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.04:ಸಾರ್ವಜನಿಕರು ಬೀಡಿ ಸೇದುವುದು,ತಂಬಾಕು ಗುಟ್ಕಾ ಜಗಿಯುವುದು,ಮದ್ಯ ಸೇವನೆಸೇರಿದಂತೆದುಶ್ಚಟಗಳಿಂದ ದೂರವಿರಬೇಕು ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಯಲ್ಲಾ ರಮೇಶ್ ಬಾಬು ಅವರು ಹೇಳಿದರು.

ಜಿಲ್ಲಾಡಳಿತ,ಜಿಲ್ಲಾಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ 'ವಿಶಿಷ್ಟತೆಯಿಂದ ಏಕತೆ' ಎಂಬ ಘೋಷವಾಕ್ಯದೊಂದಿಗೆ "ವಿಶ್ವ ಕ್ಯಾನ್ಸರ್ ದಿನಾಚರಣೆ" ಅಂಗವಾಗಿ ಜಿಲ್ಲಾ ಆಸ್ಪತ್ರೆ ಆವರಣದಿಂದ ಮಂಗಳವಾರ ಹಮ್ಮಿಕೊಂಡಿದ್ದ ಜನಜಾಗೃತಿ ಜಾಥಾಗೆ ಹಸಿರು ನಿಶಾನೆ ತೋರಿಸುವುದರ ಮೂಲಕ ಚಾಲನೆ ನೀಡಿ ಅವರು ಮಾತನಾಡಿದರು.

ಕ್ಯಾನ್ಸರ್ ನಲ್ಲಿ ಸುಮಾರು ವಿಧಗಳಿವೆ. ಅವುಗಳಲ್ಲಿ ಚರ್ಮದ ಕ್ಯಾನ್ಸರ್, ಸ್ತನ ಕ್ಯಾನ್ಸರ್, ಶ್ವಾಸಕೋಶದ ಕ್ಯಾನ್ಸರ್, ಪ್ರಾಸ್ಟೇಟ್ ಕ್ಯಾನ್ಸರ್, ಕೊಲೊರೆಕ್ಟಲ್ ಕ್ಯಾನ್ಸರ್, ಮೆಲನೋಮ, ಲಿಂಫೋಮ ಕ್ಯಾನ್ಸರ್ ಮತ್ತು ಮೂತ್ರಪಿಂಡದ ಕ್ಯಾನ್ಸರ್ ಗಳಿವೆ. ಆದರೆ ಬಾಯಿ, ಗರ್ಭಾಶಯ ಮತ್ತು ಸ್ತನ ಕ್ಯಾನ್ಸರ್ ಹೆಚ್ಚಾಗಿ ಕಂಡು ಬರುತ್ತವೆ ಎಂದು ಅವರು ತಿಳಿಸಿದರು.

ಕ್ಯಾನ್ಸರ್ ಖಾಯಿಲೆಯ ಬಗ್ಗೆ ಜಾಗೃತಿ ಮತ್ತು ಅರಿವು ಹೊಂದಬೇಕು. ಕ್ಯಾನ್ಸರ್ ಚಿಕಿತ್ಸೆಗೆ ಬಿಮ್ಸ್‌ನಲ್ಲಿ ಚಿಕಿತ್ಸಾ ಸೌಲಭ್ಯವಿದ್ದು, ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದರು.

ಜಿಲ್ಲಾ ಸಾಂಕ್ರಾಮಿಕ ರೋಗಗಳ ನಿಯಂತ್ರಣ ಕಾರ್ಯಕ್ರಮ ಅಧಿಕಾರಿ ಹಾಗೂ ಜಿಲ್ಲಾ ಸರ್ವೇಕ್ಷಣಾಧಿಕಾರಿ ಡಾ.ಮರಿಯಂಬಿ.ವಿ.ಕೆ ಅವರು ಪ್ರಾಸ್ತಾವಿಕವಾಗಿ ಮಾತನಾಡಿ, 2000 ರ ಫೆ.04 ರಂದು ಪ್ಯಾರಿಸ್ ದೇಶದಲ್ಲಿ ಮೊದಲ ಬಾರಿಗೆ ವಿಶ್ವ ಕ್ಯಾನ್ಸರ್ ದಿನ ಆಚರಿಸಲಾಯಿತು. ಕ್ಯಾನ್ಸರ್ ಪೀಡಿತ ರೋಗಿಗಳಿಗೆ ಆತ್ಮಸ್ಥೈರ್ಯ ತುಂಬುವುದು ಇದರ ಉದ್ದೇಶವಾಗಿತ್ತು ಎಂದು ಹೇಳಿದರು.

ಇಂದು ಅಧುನಿಕ ಜೀವನ ಶೈಲಿಗಳಿಂದ ತಂಬಾಕು ಬಳಕೆಯಿಂದ ಅನೇಕ ರೀತಿಯ ಆರೋಗ್ಯ ಸಮಸ್ಯೆಗಳಿಗೆ ತುತ್ತಾಗುತ್ತಿದ್ದಾರೆ. ಪ್ರಸುತ್ತ ಆಧುನಿಕ ತಂತ್ರಜ್ಞಾನದಿಂದ ಕ್ಯಾನ್ಸರ್ ರೋಗವನ್ನು ಆರಂಭಿಕ ಹಂತಗಳಲ್ಲಿ ಪತ್ತೆಮಾಡಬೇಕು. ಖಚಿತಪಟ್ಟಲ್ಲಿ ಸಂಪೂರ್ಣವಾಗಿ ಚಿಕಿತ್ಸೆ ನೀಡಿ ಗುಣಮುಖಗೊಳಿಸಬಹುದು ಎಂದರು.

ಮುಂದಿನ ದಿನಗಳಲ್ಲಿ ಜಿಲ್ಲಾ ಆಸ್ಪತ್ರೆಯಲ್ಲಿಯೇ ಕೀಮೋಥೆರಫಿ ಸೌಲಭ್ಯ ಆರಂಭವಾಗಲಿದೆ. ಮಾರ್ಚ್ ತಿಂಗಳಲ್ಲಿ ಗೃಹ ಆರೋಗ್ಯ ಕರ್ನಾಟಕ ಕಾರ್ಯಕ್ರಮದಡಿ ಮನೆ–ಮನೆ ಭೇಟಿ ನೀಡಿ ಸಾಂಕ್ರಮಿಕ ರೋಗಗಳ ತಪಾಸಣೆ ಕೈಗೊಳ್ಳಲಾಗುವುದು. ಸಾರ್ವಜನಿಕರು ಜಾಗೃಕರಾಗಿ ಕ್ಯಾನ್ಸರ್ ಲಕ್ಷಣಗಳನುಸಾರವಾಗಿ ತಪಾಸಣೆಗೆ ಒಳಪಟ್ಟು ಕ್ಯಾನ್ಸರ್ ಮುಕ್ತ ಸಮಾಜ ನಿರ್ಮಿಸಲು ಕೈಜೋಡಿಸಬೇಕು ಎಂದು ತಿಳಿಸಿದರು.

ಅರಿವು ಮೂಡಿಸಿದ ಜಾಥಾ:

ಜನ ಜಾಗೃತಿ ಜಾಥಾವು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯಿಂದ ಆರಂಭಗೊಂಡು ಸಂಗಂ ವೃತ್ತ, ರಾಘವೇಂದ್ರ ಚಿತ್ರಮಂದಿರ ವೃತ್ತ, ಮೀನಾಕ್ಷಿ ವೃತ್ತ, ಜಿಲ್ಲಾಧಿಕಾರಿಗಳ ಕಚೇರಿ ಮಾರ್ಗವಾಗಿ ಮರಳಿ ಗಡಿಗಿ ಚೆನ್ನಪ್ಪ ವೃತ್ತ ಮೂಲಕ ಪುನಃ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿ ಆವರಣದವರೆಗೆ ಮರಳಿತು. ದಾರಿಯುದ್ದಕ್ಕೂ ಘೋಷಣೆ ಹಾಕುತ್ತಾ ಕ್ಯಾನ್ಸರ್ ರೋಗದ ಕುರಿತು ಅರಿವು ಮೂಡಿಸಲಾಯಿತು.

ಇದೇ ವೇಳೆ ಕ್ಯಾನ್ಸರ್ ಕುರಿತ ಜಾಗೃತಿ ಭಿತ್ತಿಪತ್ರಗಳನ್ನು ಗಣ್ಯರು ಬಿಡುಗಡೆಗೊಳಿಸಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಶಸ್ತ್ರಚಿಕಿತ್ಸಕ ಡಾ.ಎನ್.ಬಸರೆಡ್ಡಿ, ಕ್ಯಾನ್ಸರ್ ತಜ್ಞರಾದ ಡಾ.ವಿಘ್ನೇಶ್.ಎಸ್., ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಹನುಮಂತಪ್ಪ, ಜಿಲ್ಲಾ ಕ್ಷಯರೋಗ ನಿರ್ಮೂಲನಾಧಿಕಾರಿ ಡಾ.ಇಂದ್ರಾಣಿ, ಜಿಲ್ಲಾ ಕುಟುಂಬ ಕಲ್ಯಾಣ ಅನುಷ್ಠಾನಾಧಿಕಾರಿ ಡಾ.ಪೂರ್ಣಿಮಾ ಕಟ್ಟಿಮನಿ, ಜಿಲ್ಲಾ ಕುಷ್ಟರೋಗ ನಿಯಂತ್ರಣಾಧಿಕಾರಿ ಡಾ.ವೀರೇಂದ್ರ ಕುಮಾರ್, ಜಿಲ್ಲಾ ರೋಗವಾಹಕ ಆಶ್ರೀತ ರೋಗಗಳ ನಿಯಂತ್ರಣಾಧಿಕಾರಿ ಡಾ.ಆರ್.ಅಬ್ದುಲ್ಲಾ, ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಈಶ್ವರ್ ದಾಸಪ್ಪನವರ ಸೇರಿದಂತೆ ಜಾಥಾದಲ್ಲಿ ವಿಮ್ಸ್ ನರ್ಸಿಂಗ್ ವಿದ್ಯಾರ್ಥಿಗಳು, ಜಿಲ್ಲಾ ಸರ್ವೇಕ್ಷಣಾಧಿಕಾರಿಗಳ ಕಚೇರಿಯ ಅಧಿಕಾರಿಗಳು ಮತ್ತು ಸಮುದಾಯ ಆರೋಗ್ಯ ಅಧಿಕಾರಿಗಳು ಆಶಾ ಕಾರ್ಯಕರ್ತೆಯರು, ನಗರ ಪ್ರಾಥಮಿಕ ಆರೋಗ್ಯ ಸಿಬ್ಬಂದಿಗಳು ಭಾಗವಹಿಸಿದ್ದರು.

# ಸವಿತಾ ಮಹರ್ಷಿಗಳ ಆಚಾರ-ವಿಚಾರ ಮೈಗೂಡಿಸಿಕೊಳ್ಳಬೇಕು: ಎಸಿ ಪ್ರಮೋದ್



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಫೆ.04:ಸವಿತಾ ಮಹರ್ಷಿಗಳು ಇಂದಿನ ಸಮಾಜಕ್ಕೆ ದಾರಿದೀಪವಾಗಿದ್ದಾರೆ. ಅವರ ಆಚಾರ–ವಿಚಾರಗಳನ್ನು ಮೈಗೂಡಿಸಿಕೊಂಡರೆ ಸಮಾಜದಲ್ಲಿ ಸತ್ಪ್ರಜೆಗಳಾಗಬಹುದು ಎಂದು ಸಹಾಯಕ ಆಯುಕ್ತ ಪಿ.ಪ್ರಮೋದ್ ಅವರು ಹೇಳಿದರು.

ಜಿಲ್ಲಾಡಳಿತ,ಜಿಲ್ಲಾಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ಮಹಾನಗರ ಪಾಲಿಕೆ ಇವರ ಸಂಯುಕ್ತಾಶ್ರಯದಲ್ಲಿ ನಗರದ ಡಾ.ಜೋಳದರಾಶಿ ದೊಡ್ಡನಗೌಡ ರಂಗಮದಿರದ ವೇದಿಕೆ ಸಭಾಂಗಣದಲ್ಲಿ ಮಂಗಳವಾರ ಆಯೋಜಿಸಲಾಗಿದ್ದ ಸವಿತಾ ಮಹರ್ಷಿ ಜಯಂತಿ ಕಾರ್ಯಕ್ರಮವನ್ನು ಸವಿತಾ ಮಹರ್ಷಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡುವ ಮೂಲಕ ಉದ್ಘಾಟಿಸಿ ಅವರು ಮಾತನಾಡಿದರು.

ಸವಿತಾ ಸಮಾಜವು ಎಲ್ಲ ವರ್ಗದ ಜನರಿಗೂ ತಾರತಮ್ಯವಿಲ್ಲದೆ ಸೇವೆ ನೀಡುತ್ತಿದೆ. ಸಾಮಾಜಿಕ, ಶೈಕ್ಷಣಿಕ ಹಾಗೂ ಆರ್ಥಿಕವಾಗಿ ಈ ಸಮುದಾಯ ಮತ್ತಷ್ಟು ಸದೃಢವಾಗಬೇಕಿದೆ. ಪ್ರತಿಯೊಬ್ಬರೂ ತಾನು ಮಾಡುವ ವಚನ ವೃತ್ತಿಯ ಮೇಲೆ ಗೌರವ, ನಿಷ್ಠೆ ಇಟ್ಟುಕೊಂಡಾಗ ಬದುಕಿನಲ್ಲಿ ಉತ್ತುಂಗಕ್ಕೇರಲು ಸಾಧ್ಯವಿದೆ ಎಂದು ತಿಳಿಸಿದರು.

ಸವಿತಾ ಸಮಾಜದ ಬಂಧುಗಳು ಮಹರ್ಷಿಗಳ ಆದರ್ಶಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಮುನ್ನಡೆಯಬೇಕು ಎಂದು ಹೇಳಿದರು.

ಬಾಲಕಿಯರ ಸರ್ಕಾರಿ ಪದವಿ ಪೂರ್ವಕಾಲೇಜಿನ ಉಪನ್ಯಾಸಕರಾದ ಶ್ರೀನಿವಾಸಮೂರ್ತಿ.ಯು ಅವರು ವಿಶೇಷ ಉಪನ್ಯಾಸದಲ್ಲಿ ಮಾತನಾಡಿ, ಪುರಾಣ ಗ್ರಂಥಗಳ ಪ್ರಕಾರ ಸವಿತಾ ಮಹರ್ಷಿ ಎಲ್ಲಾ ದೇವತೆಗಳ ಆಯುಷ್ಕರ್ಮ ಸೇವೆಯನ್ನು ಮಾಡುತ್ತಿದ್ದಾರೆಂದು ಕಾಶಿಕ್ಷೇತ್ರದಲ್ಲಿ ದೊರೆತ ಮಹಾಗ್ರಂಥದಲ್ಲಿ ಉಲ್ಲೇಖಿಸಲಾಗಿದೆ ಎಂದು ತಿಳಿಸಿದರು.

ಶಿವನ ದಿವ್ಯದೃಷ್ಠಿಯಲ್ಲಿ ಜನ್ಮ ತಾಳಿದ ಸವಿತಾ ಮಹರ್ಷಿ ಬ್ರಹ್ಮಜ್ಞಾನ ಹೊಂದಿರುವುದರಿಂದಲೇ ಚತುರ್ವೇದಗಳಲ್ಲಿ ಒಂದಾದ ಸಾಮವೇದವನ್ನು ಬರೆದ್ದಾರೆ. ಪೌರಾಣಿಕ ವ್ಯಕ್ತಿಯಾದ ಸವಿತಾ ಮಹರ್ಷಿಯು ರಥಸಪ್ತಿಯ ದಿನ ಮಾಘ ಮಾಸದ ಶುಕ್ಲ ಪಕ್ಷದಲ್ಲಿ ಜನಿಸಿದವರು. ಧಾರ್ಮಿಕವಾಗಿ ಶಿವನ ಎಡಗಣ್ಣನ್ನು ಚಂದ್ರನಿಗೆ ಬಲಗಣ್ಣನ್ನು ಸೂರ್ಯನಿಗೆ ಹೋಲಿಸಲಾಗುತ್ತದೆ. ಶಿವನ ಬಲಗಣ್ಣಿನಿಂದ ಜನಿಸಿದವರೇ ಸವಿತಾ ಮಹರ್ಷಿ ಎಂಬ ಪ್ರತೀತಿ ಇದೆ. ಇವರ ಮಗಳಾದ ಗಾಯತ್ರಿದೇವಿಯು ಶ್ರೇಷ್ಠ ಮಂತ್ರವಾದ ಗಾಯತ್ರಿಮಂತ್ರವನ್ನು ರಚಿಸಿದ್ದಾರೆ ಎಂಬುದನ್ನು ಕೂಡ ಉಲ್ಲೇಖಿಸಲಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಕಂಪ್ಲಿಯ ಜಿ.ಕೆ.ಸಿಂಧು ತಂಡದವರು ಭಕ್ತಿ ಗಾಯನ ಪ್ರಸ್ತುತ ಪಡಿಸಿದರು ಹಾಗೂ ಸಮುದಾಯದ ಎಸ್‌ಎಸ್‌ಎಲ್‌ಸಿ,ಪಿಯುಸಿ ಹಾಗೂ ಪದವಿ ಮಟ್ಟದಲ್ಲಿ ಅತ್ಯುತ್ತಮ ಶ್ರೇಣಿ ಪಡೆದ ವಿದ್ಯಾರ್ಥಿಗಳನ್ನು ಸನ್ಮಾನಿಸಲಾಯಿತು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ್, ಜಿಲ್ಲಾ ಸವಿತಾ ಸಮಾಜ ಸಂಘದ ಅಧ್ಯಕ್ಷ ಸಣ್ಣಗೊಂಡ್ಲ ರಾಕೇಶ್ ಸೇರಿದಂತೆ ಸಮಾಜದ ಮುಖಂಡರು, ಜನಪ್ರತಿನಿಧಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

ಸಂಭ್ರಮದ ಮೆರವಣಿಗೆ:

ಸವಿತಾ ಮಹರ್ಷಿ ಜಯಂತಿಯ ಅಂಗವಾಗಿ ಏರ್ಪಡಿಸಿದ್ದ ಮೆರವಣಿಗೆಯು ಸಂಭ್ರಮದಿಂದ ನಡೆಯಿತು. ಮೆರವಣಿಗೆಗೆ ಬಳ್ಳಾರಿ ಮಹಾನಗರ ಪಾಲಿಕೆಯ ಮೇಯರ್ ಮುಲ್ಲಂಗಿ ನಂದೀಶ್ ಅವರು ಚಾಲನೆ ನೀಡಿದರು.

ಮೆರವಣಿಗೆಯಲ್ಲಿ ಪೂರ್ಣ ಕುಂಭ ಹೊತ್ತ ಮಹಿಳೆಯರು ಹಾಗೂ ವಿವಿಧ ಸಾಂಸ್ಕೃತಿಕ ಕಲಾತಂಡಗಳು ಗಮನ ಸೆಳೆದವು. ಮೆರವಣಿಗೆಯು ನಗರದ ಡಾ.ರಾಜ್ ಕುಮಾರ್ ರಸ್ತೆಯ ಮುನಿಸಿಪಲ್ ಕಾಲೇಜ್ ಮೈದಾನದಿಂದ ಆರಂಭವಾಗಿ ಗಡಿಗಿ ಚೆನ್ನಪ್ಪ ವೃತ್ತ, ಬೆಂಗಳೂರು ರಸ್ತೆ, ತೇರು ಬೀದಿ, ಹೆಚ್.ಆರ್.ಗವಿಯಪ್ಪ ವೃತ್ತದ ಮೂಲಕ ಡಾ.ಜೋಳದರಾಶಿ ದೊಡ್ಡನಗೌಡ ರಂಗಮದಿರದ ವೇದಿಕೆ ಸಭಾಂಗಣಕ್ಕೆ ತಲುಪಿ ಸಂಪನ್ನಗೊಂಡಿತು.

# ಸವಿತಾ ಮಹರ್ಷಿ ಜಯಂತಿ

## ಕಾಯಕಕ್ಕೆ ಮೇಲು,ಕೀಳು ಎಂಬುದಿಲ್ಲ : ಶಾಸಕ ಮೇಟಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.4–ಪ್ರತಿಯೊಬ್ಬರು ಕಾಯಕನಿಷ್ಠರಾಗಬೇಕು. ಮಾಡುವ ಕಾಯಕದಲ್ಲಿ ಮೇಲು ಕೀಳೆನ್ನದೇ ಅದರಲ್ಲಿ ಕೈಲಾಸ ಕಾಣುವಂತಾಗಬೇಕು ಎಂದು ಶಾಸಕ ಹಾಗೂ ಬಾಗಲಕೋಟೆ ಪಟ್ಟಣ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಚ್.ವಾಯ್.ಮೇಟಿ ಹೇಳಿದರು.

ನವನಗರದ ಡಾ.ಬಿ.ಆರ್. ಅಂಬೇಡ್ಕರ ಭವನದಲ್ಲಿ ಮಂಗಳವಾರ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಯೋಗದಲ್ಲಿ ಹಮ್ಮಿಕೊಂಡ ಸವಿತಾ ಮಹರ್ಷಿ ಜಯಂತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಸವಿತಾ ಮಹರ್ಷಿ ಮೂಲದೇವಾನುದೇವತೆಗಳಿಗೆ ಕ್ಷೌರಿಕನಾಗಿದ್ದರಿಂದ ಕ್ಷೌರಿಕರ ಮೂಲ ಪುರುಷನಾಗಿದ್ದಾರೆ. ಇಂತಹ ಮಹಾತ್ಮರ ಸಮುದಾಯದವರು ಶಿಕ್ಷಣ ಪಡೆಯುವದರ ಜೊತೆಗೆ ವೃತ್ತಿಯಲ್ಲಿ ಆಧುನಿಕತೆಗೆ ತಕ್ಕಂತೆ ತಂತ್ರಜ್ಞಾನ ಬಳಕೆ ಮಾಡಿ ಕಾಯಕ ಮಾಡುವುದು ಮುಖ್ಯವಾಗಿದೆ ಎಂದರು.

ಮುಖ್ಯ ಅತಿಥಿ ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ ಮಾತನಾಡಿ, ಸೂರ್ವಿತ ಎಂಬುದು ಸೂರ್ಯನಿಗೆ ಕರೆಯುವ ಹೆಸರಾಗಿದ್ದು, ಸೂರ್ಯನು ತನ್ನ ಪಥ ಬದಲಿಸಿ ಬರುವ ಈ ದಿನ ರಥಸಪ್ತಮಿಯಾಗಿದ್ದು, ಅಂದೇ ಸವಿತಾ ಮಹರ್ಷಿ ಅವತರಿಸಿದ್ದಾರೆ. ಬ್ರಹ್ಮನ ನಾಭಿಯಿಂದ ಹುಟ್ಟಿದ ಋಷಿಯಾಗಿದ್ದರಿಂದ ಈ ಸಮಾಜದವರಿಗೆ ನಾವಿಕರು ಎಂದು ಕರೆಯುವರು. ಅಲ್ಲದೇ ಶಿವನ ಕ್ಷೌರ ಮಾಡಿ ಶಿವನಿಗೆ ತುಂಬಾ ಹತ್ತಿರವಾದವರಾದವರು ಸವಿತಾ ಮಹರ್ಷಿ. ಮನುಷ್ಯ ಪಾಪ ಕರ್ಮಗಳ ಪ್ರತೀಕವಾಗಿ ಕೂದಲುಗಳು ಬೆಳೆಯುತ್ತಿದ್ದರಿಂದ ದೇವಸ್ಥಾನಗಳಿಗೆ ಮುಡಿಕೊಡುವ ಪದ್ದತಿ ಇದ್ದು, ಇಂದಿಗೂ ಪ್ರಸ್ತುತಿ ಇದೆ ಎಂದರು.

ಅಪರ ಜಿಲ್ಲಾಧಿಕಾರಿ ಪರಶುರಾಮ ಶಿನ್ನಾಳಕರ ಮಾತನಾಡಿ, ಇತಿಹಾಸ ಅರಿಯದವರು ಇತಿಹಾಸ ಸೃಷ್ಠಿಮಾಡಲಾರರು ಎಂಬ ನಾಣ್ಣುಡಿಯನ್ನು ಪ್ರತಿಯೊಬ್ಬರೂ ಗಮನಿಸಿ ಇತಿಹಾಸ ಅರಿಯುವ ಕಾರ್ಯವಾಗಬೇಕು. ಸವಿತಾ ಮಹರ್ಷಿಯಂತಹ ಸಮುದಾಯದವರು ಅವರ ಆಚರಣೆ, ಉದ್ದೇಶ ಹಾಗೂ ಮೌಲ್ಯವನ್ನು ಅರಿತಾಗ ಮಾತ್ರ ಜಯಂತಿ ಆಚರಿಸಿದಕ್ಕೂ ಸ್ವಾರ್ಥಕತೆ ಬರುತ್ತದೆ. ಆಯುರ್ವೇದದಲ್ಲಿ ಪರಿಣಿತಿ ಹೊಂದಿದ ಹಾಗೂ ಸಂಗೀತದಲ್ಲಿ ಒಲವನ್ನು ಹೊಂದಿದವರು ಸವಿತಾ ಮಹರ್ಷಿಗಳು ಎಂದರು.

ಉಪನ್ಯಾಸ ನೀಡಿದ ರಾಮಣ್ಣ ಗೋಗಿ, ಕಶ್ಯಪ ಮುನಿಗೆ ಅದಿತಿಯಲ್ಲಿ ಜನಿಸಿದ ಸವಿತಾ ಮಹರ್ಷಿ ಪುರಾಣದ ಪ್ರಕಾರ ಶಿವನು ಅತಿಯಾಗಿ ಬೆಳೆದ ಕೂದಲುಗಳಿಂದ ತೆ–ೂಂದರೆ ಅನುಭವಿಸುತ್ತಿದ್ದಾಗ ಪಾರ್ವತಿದೇವಿಯ ಸಲಹೆಯಂತೆ ತನ್ನ ಎಡಗಣ್ಣಿನಿಂದ ಕ್ಷೌರಿಕರ ಮೂಲ ಪುರುಷರಾದದವರು. ಆಯುರ್ವೇದ ಈ ಜನಾಂಗದ ಉಪಕಸಬಾಗಿ ಬಂದಿದೆ. ಈ ಸಮುದಾಯದವರು ಒಗ್ಗಟ್ಟಾದಾಗ ಮಾತ್ರ ಮುಖ್ಯವಾಹಿನಿಗೆ ಬರಲು ಸಾಧ್ಯವಾಗುತ್ತದೆ. ಕ್ಷೌರಿಕ, ಆಯುರ್ವೇಧ ಹಾಗೂ ಸಂಗೀತದಲ್ಲಿ ಪರಿಣಿತಿಯನ್ನು ಹೊಂದಿದವರು ಸವಿತಾ ಮಹರ್ಷಿ ಎಂದರು.

ಕಾರ್ಯಕ್ರಮದಲ್ಲಿ ಜಿಪಂ ಮಾಜಿ ಅಧ್ಯಕ್ಷೆ ಬಾಯಕ್ಕ ಮೇಟಿ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕರ್ಣಕುಮಾರ, ಸಮುದಾಯದ ಮುಖಂಡರಾದ ಶರಣಬಸಪ್ಪ ಶಹಾಪೂರ, ಗಣೇಶ ಶಹಾಪೂರ, ರೇಖಾ ಉಪಸ್ಥಿತರಿದ್ದರು.

ಅದ್ದೂರಿ ಮೆರವಣಿಗೆ:

ಕಾರ್ಯಕ್ರಮದ ಪೂರ್ವದಲ್ಲಿ ಜಿಲ್ಲಾಡಳಿತ ಭವನದ ಆವರಣದಲ್ಲಿ ಸವಿತಾ ಮಹರ್ಷಿ ಭಾವಚಿತ್ರಕ್ಕೆ ಉಪವಿಭಾಗಾಧಿಕಾರಿ ಸಂತೋಷ ಜಗಲಾಸರ ಪೂಜೆ ಸಲ್ಲಿಸುವ ಮೂಲಕ ಮೆರವಣಿಗೆಗೆ ಚಾಲನೆ ನೀಡಿದರು. ಮೆರವಣಿಗೆ ಜಿಲ್ಲಾಡಳಿತ ಭವನದಿಂದ ಪ್ರಾರಂಭವಾಗಿ ನಗರದ ನಾನಾ ಕಡೆ ಸಂಚರಿಸಿ ಡಾ.ಬಿ.ಆರ್. ಅಂಬೇಡ್ಕರ ಭವನಕ್ಕೆ ತಲುಪಿತು. ಮೆರವಣಿಗೆಯಲ್ಲಿ ವಿವಿಧ ಜನಪದ ಕಲಾತಂಡಗಳು ಪಾಲ್ಗೊಂಡಿದ್ದು, ಪೂರ್ಣಕುಂಭ ಹೊತ್ತ ಮಹಿಳೆಯರು ಮೆರವಣಿಗೆಗೆ ಕಳೆ ತಂದರು.

# ಕ್ಯಾನ್ಸರ್ ಬಗ್ಗೆ ನಿರ್ಲಕ್ಷ್ಯ ಸಲ್ಲದು :ಡಾ.ಕುಸುಮಾ ಮಾಗಿ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಫೆ.4–ಮನುಷ್ಯನಿಗೆ ಶತ್ರುವಿನ ರೀತಿ ಕಾಡುವ ಕ್ಯಾನ್ಸರ್ ರೋಗದ ಬಗ್ಗೆ ಜನರಲ್ಲಿ ಸರಿಯಾಗಿ ಜಾಗೃತಿ ಮೂಡಿಸಲು ಪ್ರತಿ ವರ್ಷ ಫೆಬ್ರುವರಿ 4 ರಂದು ವಿಶ್ವ ಕ್ಯಾನ್ಸರ್ ದಿನವನ್ನಾಗಿ ಆಚರಿಸಲಾಗುತ್ತದೆ. ಜೊತೆಗೆ ಸರ್ಕಾರ ಮತ್ತು ಇತರೆ ಸಂಘ ಸಂಸ್ಥೆಗಳು ಅನೇಕ ಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಂಡು ಕ್ಯಾನ್ಸರ್ ಬಗ್ಗೆ ಮುನ್ನೆಚ್ಚರಿಕೆ ನೀಡುವ ಕೆಲಸವನ್ನು ಮಾಡುತ್ತಿವೆ ಎಂದು ಜಿಲ್ಲಾ ಮಲೇರಿಯಾ ನಿಯಂತ್ರಣಾಧಿಕಾರಿ ಡಾ.ಕುಸುಮಾ ಮಾಗಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾಪಂಚಾಯಿತಿ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಎನ್‌ಸಿಡಿ, ಸಮೀಕ್ಷಣಾ ಘಟಕ, ತಾಲೂಕು ಆರೋಗ್ಯಾಧಿಕಾರಿಗಳ ಕಚೇರಿ, ಬವಿವ ಸಂಘದ ಹಾನಗಲ್ ಕುಮಾರೇಶ್ವರ ಔಷಧ ವಿಜ್ಞಾನ ಮಹಾವಿದ್ಯಾಲಯದ ಸಂಯುಕ್ತಾಶ್ರಯದಲ್ಲಿ ಮಂಗಳವಾರ ನಡೆದ ವಿಶ್ವ ಕ್ಯಾನ್ಸರ್ ದಿನಾಚರಣೆಯ ಜಾಗೃತಿ ಜಾಥಾಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

2025ರ ವಿಶ್ವ ಕ್ಯಾನ್ಸರ್ ದಿನದ ಘೋಷವಾಕ್ಯ 'ಯುನೈಟೆಡ್ ಬೈ ಯುನಿಕ್'. ವಿಶಿಷ್ಠತೆಯಿಂದ ಏಕತೆಯ ಮಹತ್ವವನ್ನು ತಿಳಿಸುವುದಾಗಿದೆ. ಕ್ಯಾನ್ಸರ್‌ನ್ನು ಪರಿಣಾಮಕಾರಿಯಾಗಿ ಎದುರಿಸಲು ಆರಂಭಿಕ ಹಂತದಲ್ಲಿ ಪತ್ತೆಹಚ್ಚುವುದು ಮುಖ್ಯ. ಕ್ಯಾನ್ಸರ್ ನಲ್ಲಿ ಸುಮಾರು ನೂರಕ್ಕಿಂತ ಹೆಚ್ಚು ವಿಧಗಳಿದ್ದು ಅವುಗಳಲ್ಲಿ ಚರ್ಮದ ಕ್ಯಾನ್ಸರ್, ಸ್ತನ ಕ್ಯಾನ್ಸರ್, ಶ್ವಾಸಕೋಶದ ಕ್ಯಾನ್ಸರ್, ಪ್ರಾಸ್ಟೇಟ್ ಕ್ಯಾನ್ಸರ್, ಮೆಲನೋಮ, ಕೊಲೊರೆಕ್ಟಲ್ ಕ್ಯಾನ್ಸರ್, ಲಿಂಫೋಮ ಕ್ಯಾನ್ಸರ್, ಮೂತ್ರಪಿಂಡದ ಕ್ಯಾನ್ಸರ್ ಸಾಮಾನ್ಯವಾದವು ಎಂದು ವರದಿಗಳಿಂದ ತಿಳಿದು ಬಂದಿದೆ. ಆದರೆ ಭಾರತದಲ್ಲಿ ಬಾಯಿ, ಗರ್ಭಾಶಯ ಮತ್ತು ಸ್ತನ ಕ್ಯಾನ್ಸರ್ ಹೆಚ್ಚಾಗಿ ಕಂಡು ಬರುತ್ತವೆ ಎಂದು ತಿಳಿದು ಬಂದಿದೆ ಎಂದು ಮಾಗಿ ಹೇಳಿದರು.

ಕ್ಯಾನ್ಸರ್‌ಗೆ ಪ್ರಮುಖ ಕಾರಣಗಳಲ್ಲಿ ತಂಬಾಕು ಸೇವನೆಯೂ ಒಂದು. ತಂಬಾಕು ಸೇವನೆ ಬಿಟ್ಟು ಹಣ್ಣುಗಳು, ತರಕಾರಿಗಳು, ಧಾನ್ಯಗಳು ಮತ್ತು ಕಡಿಮೆ ಕೊಬ್ಬಿನ ಪ್ರೋಟೀನ್ಗಳು ಸಮೃದ್ಧವಾಗಿರುವ ಆಹಾರವನ್ನು ಸೇವಿಸುವತ್ತ ಗಮನಹರಿಸಬೇಕು. ಗರ್ಭಕಂಠ ಮತ್ತು ಇತರ ಕ್ಯಾನ್ಸರ್ಗಳ ಅಪಾಯವನ್ನು ಕಡಿಮೆ ಮಾಡುವ ಎಚ್ ಪಿವಿ ಲಸಿಕೆ ಮತ್ತು ಯಕೃತ್ತಿನ ಕ್ಯಾನ್ಸರ್ನಿಂದ ರಕ್ಷಿಸುವ ಹೆಪಟೈಟಿಸ್ ಬಿ ಲಸಿಕೆಯಂತಹ ಕೆಲವು ರೀತಿಯ ಕ್ಯಾನ್ಸರ್ಗಳನ್ನು ತಡೆಗಟ್ಟಲು ಲಸಿಕೆಗಳು ಸಹಾಯ ಮಾಡುತ್ತವೆ ಎಂದು ಅವರು ಹೇಳಿದರು.

ನಂತರ ಜಾಗೃತಿ ಜಾಥಾ ಬಾಗಲಕೋಟೆ ಬವಿವ ಸಂಘದ ಹಾನಗಲ್ ಕುಮಾರೇಶ್ವರ ಔಷಧ ವಿಜ್ಞಾನ ಮಹಾವಿದ್ಯಾಲಯದಿಂದ ಆರಂಭಗೊಂಡು ನಗರದ ತಾಲೂಕಾ ಆರೋಗ್ಯಾಧಿಕಾರಿಗಳ ಕಾರ್ಯಾಲಯದವರೆಗೆ ನಡೆಯಿತು. ವಿದ್ಯಾರ್ಥಿಗಳು ತಂಬಾಕು, ಮಾವಾ, ಗಾಂಜಾ ಸೇವನೆಯಿಂದಾಗುವ ಕ್ಯಾನ್ಸರ್ ಬಗ್ಗೆ ಬೀದಿನಾಟಕ ಮೂಲಕ ಜಾಗೃತಿ ಮೂಡಿಸಿದರು.

ಜಾಗೃತಿ ಜಾಥಾದಲ್ಲಿ ಹಾನಗಲ್ ಕುಮಾರೇಶ್ವರ ಔಷಧ ವಿಜ್ಞಾನ ಮಹಾವಿದ್ಯಾಲಯದ ಪ್ರಾಚಾರ್ಯ ಶ್ರೀನಿವಾಸ್, ಜಿಲ್ಲಾ ಸಂಯೋಜಕ ಡಾ.ಅಂದಾನಗೌಡ ಪಾಟೀಲ, ಎಂ.ಬಿ.ಪಾಟೀಲ, ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಎಚ್.ಪಿ.ನಾಯ್ಕರ, ಜಿಲ್ಲಾ ತಂಬಾಕು ಸಲಹೆಗಾರ ಶಶಿಕಾಂತ ಕುಮಟಳ್ಳಿ, ಜಿಲ್ಲಾ ಸಾಮಾಜಿಕ ಕಾರ್ಯಕರ್ತ ಶಿವಲಿಂಗ ಕರಗಣ್ಣಿ ಮತ್ತು ವಿದ್ಯಾರ್ಥಿಗಳು ಇದ್ದರು.

# ಲೈಂಗಿಕ ದೌರ್ಜನ್ಯ:

## ಬಾಲಕನಿಗೆ 10 ವರ್ಷ ಕಠಿಣಶಿಕ್ಷೆ

ಯಾದಗಿರಿ,ಫೆ.4 : ಸೈದಾಪುರ ಪೊಲೀಸ್ ಠಾಣೆ ವ್ಯಾಪ್ತಿಯ ಗ್ರಾಮವೊಂದರಲ್ಲಿ ಬಾಲಕಿ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ ಆರೋಪ ಸಾಬೀತಾಗಿದ್ದರಿಂದ ಕಾನೂನು ಸಂಘರ್ಷಕ್ಕೊಳಗಾದ ಬಾಲಕನಿಗೆ 10 ವರ್ಷ ಕಠಿಣ ಜೀವಾವಧಿ ಶಿಕ್ಷೆ ಹಾಗೂ 20 ಸಾವಿರ ದಂಡ ವಿಧಿಸಿ ಪ್ರಧಾನ ಮತ್ತು ಸೆಷನ್ಸ್ ನ್ಯಾಯಾಲಯದ ನ್ಯಾಯಾಧೀಶರಾದ ಬಿ.ಎಸ್ ರೇಖಾ ಅವರು ತೀರ್ಪು ನೀಡಿ ಆದೇಶ ಹೊರಡಿಸಿದ್ದಾರೆ.

ಬಾಲಕನ ವಿರುದ್ಧ 376 (2), (ಐ), (ಎನ್) ಕಲಂ 6 ಪೋಕ್ಸೋ ಕಾಯ್ದೆ 2012ರ ಅಡಿಯಲ್ಲಿ ಆರೋಪ ಸಾಬೀತಾಗಿದ್ದರಿಂದ ನ್ಯಾಯಾಧೀಶರು ಶಿಕ್ಷೆ ವಿಧಿಸಿ ಆದೇಶಿಸಿದ್ದಾರೆ.

ಘಟನೆ ವಿವರ :

ಕಾನೂನು ಸಂಘರ್ಷಕ್ಕೊಳಗಾದ ಬಾಲಕ ತನ್ನ ಗ್ರಾಮದ ಬಾಲಕಿಯ ಜತೆ ಪ್ರೀತಿ, ಪ್ರೇಮ ಎಂದು ಸಲುಗೆಯಿಂದ ಇದ್ದು, ಲೈಂಗಿಕ ದೌರ್ಜನ್ಯ ಮಾಡಿದ್ದಾನೆ. 2017 ನವೆಂಬರ್ 19 ರಂದು ಬಾಲಕಿ ಮನೆಯಲ್ಲಿ ಒಬ್ಬಳೇ ಇದ್ದಾಗ ಬಾಲಕ ಲೈಂಗಿಕ ದೌರ್ಜನ್ಯ ಎಸಗಿದ್ದ. ಇದಾದ ಪ್ರತಿ 10 ರಿಂದ 15 ದಿನಗಳಿಗೊಮ್ಮೆ ಬಾಲಕಿಯ ಮನೆಯಲ್ಲಿ ಯಾರು ಇಲ್ಲದ ಸಮಯದಲ್ಲಿ ಬಾಲಕಿ ಮಧ್ಯಾಹ್ನ ಶಾಲೆಯಿಂದ ಬರುವುದನ್ನು ಖಾತ್ರಿಪಡಿಸಿಕೊಂಡು ಲೈಂಗಿಕ ದೌರ್ಜನ್ಯ ಮಾಡಿದ್ದಾನೆ. 2018 ಅಕ್ಟೋಬರ್ 1 ರಂದು ತನ್ನನ್ನು ಮದುವೆಯಾಗಿ ಎಂದು ಕಾನೂನು ಸಂಘರ್ಷಕ್ಕೊಳಗಾದ ಬಾಲಕನನ್ನು ಬಾಲಕಿ ಕೇಳಿದರೂ ಒಪ್ಪಿಕೊಂಡಿಲ್ಲ.

ತನಿಖಾಧಿಕಾರಿಯಾಗಿದ್ದ ಗುರುಮಠಕಲ್ ಸಿಪಿಐ ಶ್ರೀನಿವಾಸ ಅಲ್ಲಾಪೂರ ಅವರು ಆರೋಪಿ ವಿರುದ್ಧ ದೋಷಾರೋಪಣ ಪತ್ರವನ್ನು ನ್ಯಾಯಾಲಯಕ್ಕೆ ಸಲ್ಲಿಸಿದ್ದರು. ಈ ಪ್ರಕರಣದಲ್ಲಿ ಸರ್ಕಾರದ ಪರವಾಗಿ ಯಾದಗಿರಿ ಸರ್ಕಾರಿ ಅಭಿಯೋಜಕ ವಿಶ್ವನಾಥ ಉಭಾಳೆ ವಾದ ಮಂಡಿಸಿದ್ದರು.

# ಕರ್ನಾಟಕ ದರ್ಶನ ಪ್ರವಾಸಕ್ಕೆ ಶಾಸಕ ಅಲ್ಲಮಪ್ರಭು ಪಾಟೀಲ ಚಾಲನೆ




ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.4: ಕರ್ನಾಟಕ ಪ್ರವಾಸೋದ್ಯಮ ಅಭಿವೃದ್ಧಿ ನಿಗಮ ನಿಯಮಿತ ಮತ್ತು ಶಾಲಾ ಶಿಕ್ಷಣ ಇಲಾಖೆಯ ಸಹಯೋಗದೊಂದಿಗೆ ಪ್ರಸಕ್ತ 2024-25ನೇ ಸಾಲಿನ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ ಪ್ರೌಢ ಶಾಲೆಯ ಎಸ್.ಸಿ-ಎಸ್.ಟಿ ವಿದ್ಯಾರ್ಥಿಗಳಿಗೆ ಆಯೋಜಿಸಿದ ಕರ್ನಾಟಕ ದರ್ಶನ ಪ್ರವಾಸಕ್ಕೆ ಮಂಗಳವಾರ ಶಾಸಕ ಅಲ್ಲಮಪ್ರಭು ಪಾಟೀಲ ಅವರು ಚಾಲನೆ ನೀಡಿದರು.

ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿ ಅವರಣದಲ್ಲಿ ಮಹರು ದಿನಗಳ ಪ್ರವಾಸಕ್ಕೆ ಹೊರಟ 98 ವಿದ್ಯಾರ್ಥಿಗಳ ಕಲಬುರಗಿ ದಕ್ಷಿಣ ವಲಯ ತಂಡಕ್ಕೆ ಹಸಿರು ನಿಶಾನೆ ತೋರಿ ಪ್ರವಾಸಕ್ಕೆ ಶುಭ ಕೋರಿದರು.

78 ಎಸ್.ಸಿ. ಮತ್ತು 20 ಎಸ್.ಟಿ ಸೇರಿ ಒಟ್ಟು 98 ವಿದ್ಯಾರ್ಥಿಗಳ ಪ್ರವಾಸಿ ತಂಡವು ಮಂಗಳವಾರ ವಿಜಯಪುರ ಐತಿಹಾಸಿಕ ಸ್ಥಳಗಳನ್ನು ವೀಕ್ಷಿಸಿ ಐಹೊಳೆಯಲ್ಲಿ ವಾಸ್ತವ್ಯ ಮಾಡಲಿದೆ. ಎರಡನೇ ದಿನ ಐಹೊಳೆ, ಬದಾಮಿ, ಯುನೆಸ್ಕೋ ಪಟ್ಟಿಯಲ್ಲಿರುವ ಪಟ್ಟದಕಲ್ಲು ವೀಕ್ಷಿಸಿ ಗೋಕರ್ಣದಲ್ಲಿ ತಂಗಲಿದ್ದಾರೆ. ಮೂರನೇ ದಿನ ಗುರುವಾರ ಗೋಕರ್ಣ, ಮುರುಡೇಶ್ವರ, ವಿಶ್ವವಿಖ್ಯಾತ ಜೋಗ ಜಲಪಾತ ವೀಕ್ಷಿಸಿ ಕೋಟೆನಾಡು ಚಿತ್ರದುರ್ಗದಲ್ಲಿ ವಾಸ್ತವ್ಯ ಹೂಡಲಿದ್ದಾರೆ. ಶುಕ್ರವಾರ ಚಿತ್ರದುರ್ಗ ಕೋಟೆ, ವಿಶ್ವವಿಖ್ಯಾತ ಹಂಪಿ, ತುಂಗಭದ್ರಾ ಜಲಾಶಯ ವೀಕ್ಷಿಸಿ ಮರಳಿ ಕಲಬುರಗಿಯತ್ತ ಪ್ರಯಾಣ ಬೆಳೆಸಲಿದ್ದಾರೆ. ಎರಡು ಬಸ್ ನಲ್ಲಿ ಸಂಚರಿಸಲಾಗಿತ್ತಿದ್ದು, ಪ್ರತಿ ಬಸ್ ಗೆ ಇಬ್ಬರು ಶಿಕ್ಷಕರನ್ನು ನಿಯೋಜಿಸಲಾಗಿದೆ.

923 ಮಕ್ಕಳಿಗೆ ಕರ್ನಾಟಕ ದರ್ಶನ ಭಾಗ್ಯ: ಪ್ರವಾಸೋದ್ಯಮ ಇಲಾಖೆಯ ಉಪನಿರ್ದೇಶಕಿ ಅನುಸೂಯಾ ಹೂಗಾರ ಮಾತನಾಡಿ, ಪ್ರಸಕ್ತ 2024-25ನೇ ಸಾಲಿನ ವಿಶೇಷ ಘಟಕ ಯೋಜನೆ ಮತ್ತು ಗಿರಿಜನ ಉಪಯೋಜನೆಯಡಿ ಜಿಲ್ಲೆಯ ಸರ್ಕಾರಿ, ಮೊರಾರ್ಜಿ ದೇಸಾಯಿ ಹಾಗ್ಯೆ ಕ್ರಯಸ್ ವಸತಿ ಪ್ರೌಢ ಶಾಲೆಯ 8ನೇ, 9ನೇ ಹಾಗೂ 10ನೇ ತರಗತಿಯ 600 ಎಸ್.ಸಿ. ಮತ್ತು 323 ಎಸ್.ಟಿ ಸೇರಿ ಒಟ್ಟು 923 ವಿದ್ಯಾರ್ಥಿಗಳನ್ನು ಫೆಬ್ರವರಿ 4 ರಿಂದ 11ರ ವರೆಗೆ 8 ತಾಲೂಕಾ ತಂಡಗಳು ಆಯಾ ತಾಲೂಕಾ ಕೇಂದ್ರಸ್ಥಾನದಿಂದ ಪ್ರವಾಸ ಕೈಗೊಳ್ಳಲಿದ್ದು, ಮಕ್ಕಳ ಊಟೋಪಚಾರ, ತಂಗುವಿಕೆ ಸೇರಿದಂತೆ ಸಕಲ ವ್ಯವಸ್ಥೆ ಮಾಡಿಕೊಳ್ಳಲಾಗಿದೆ ಎಂದು ತಿಳಿಸಿದರು.

ಡಿ.ಡಿ.ಪಿ.ಐ ಸೂರ್ಯಕಾಂತ ಮದಾನೆ, ಪ್ರವಾಸೋದ್ಯಮ ನಿಗಮ ನಿಯಮಿತದ ಸಹಾಯಕ ವ್ಯವಸ್ಥಾಪಕ ಮತ್ತು ಪ್ರವಾಸದ ನೋಡಲ್ ಅದಿಕಾರಿ ಯಶವಂತರಾಯ ಸೇರಿದಂತೆ ಶಿಕ್ಷಕರು, ಶಾಲಾ ಮಕ್ಕಳು ಇದ್ದರು.

# ಪ್ರತ್ಯೇಕ ಘಟನೆ:ಬೀಗ ಮುರಿದು 10.55 ಲಕ್ಷ ರೂ ನಗ-ನಾಣ್ಯ ಕಳವು

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಫೆ.4:ಪ್ರತ್ಯೇಕ ಘಟನೆಗಳಲ್ಲಿ ಕಳ್ಳರು ಮನೆ ಬೀಗ ಮುರಿದು 10.55 ಲಕ್ಷ ರೂ ಮೌಲ್ಯದ ನಗ-ನಾಣ್ಯ ದೋಚಿಕೊಂಡು ಹೋದ ಘಟನೆ ನಡೆದಿದೆ.

ಮನೆ ಬೀಗ ಮುರಿದು 7.40 ಲಕ್ಷ ರೂ.ಮೌಲ್ಯದ 25 ಗ್ರಾಂ.ಚಿನ್ನಾಭರಣ ದೋಚಿಕೊಂಡು ಹೋಗಿರುವ ಘಟನೆ ನಗರದ ನ್ಯೂ ಮಾಕಾ ಲೇಔಟ್‌ನ ಶ್ರೀಶೈಲ ನಗರದಲ್ಲಿ ನಡೆದಿದೆ.ಚಂದ್ರಶೇಖರಯ್ಯ ಹಿರೇಮಠ ಎಂಬುವವರ ಮನೆ ಬೀಗ ಮುರಿದು ಕಳ್ಳರು 80 ಸಾವಿರ ರೂ.ಮೌಲ್ಯದ 10 ಗ್ರಾಂ.ಬಂಗಾರದ ಎರಡು ಚೈನ್‌ಗಳು, 5.60 ಲಕ್ಷ ರೂ.ಮೌಲ್ಯದ 14 ಬಂಗಾರದ ಸುತ್ತುಂಗುರಗಳು, 1 ಲಕ್ಷ ರೂ. ಮೌಲ್ಯದ 5 ಬಂಗಾರದ ಸುತ್ತುಂಗುರಗಳು ಸೇರಿ ಒಟ್ಟು 7.40 ಲಕ್ಷ ರೂ. ಮೌಲ್ಯದ 185 ಗ್ರಾಂ. ಚಿನ್ನಾಭರಣ ದೋಚಿಕೊಂಡು ಹೋಗಿದ್ದಾರೆ.

ಚಂದ್ರಶೇಖರಯ್ಯ ಅವರು ತಮ್ಮ ಸಹೋದರನ ಮಗನ ಮದುವೆಗೆ ಮನೆಗೆ ಬೀಗ ಹಾಕಿಕೊಂಡು ಹಟ್ಟಿಗೆ ಹೋಗಿದ್ದ ವೇಳೆ ಮನೆ ಕಳ್ಳತನವಾಗಿದೆ .ಈ ಸಂಬಂಧ ಅಶೋಕನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ. 3.15 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು : ಗೋದುತಾಯಿ ನಗರದ ಸಂಜಯ್ ರಮೇಶ್ ರಾವ್ ಪಠವಾರಿ ಎಂಬುವವರ ಮನೆ ಬೀಗ ಮುರಿದು ಕಳ್ಳರು 20 ಸಾವಿರ ರೂ.ಮೌಲ್ಯದ 5 ಗ್ರಾಂ.ಬಂಗಾರದ ಚೈನ್, 20 ಸಾವಿರ ರೂ.ಮೌಲ್ಯದ ಇನ್ನೊಂದು ಬಂಗಾರದ ಚೈನ್, 45 ಸಾವಿರ ರೂ.ಮೌಲ್ಯದ 12 ಗ್ರಾಂ.ಬಂಗಾರದ ಸುತ್ತುಂಗುರ, 40 ಸಾವಿರ ರೂ.ಮೌಲ್ಯದ 10 ಗ್ರಾಂ.ಬಂಗಾರದ ಸುತ್ತುಂಗುರ, 40 ಸಾವಿರ ರೂ.ಮೌಲ್ಯದ 10 ಗ್ರಾಂ.ಬಂಗಾರದ ಚೈನ್, 75 ಸಾವಿರ ರೂ.ಮೌಲ್ಯದ 1.5 ಕೆಜಿ ಬೆಳ್ಳಿ ಸಾಮಾನು, 73 ಸಾವಿರ ರೂ.ನಗದು 2 ಸಾವಿರ ರೂ.ಮೌಲ್ಯದ ಮ್ಯೂಸಿಕ್ ಸಿಸ್ಟಮ್ ಸೇರಿ 3.15 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು ಮಾಡಿದ್ದಾರೆ.

ಸಂಜಯ್ ಅವರು ಮನೆಗೆ ಬೀಗ ಹಾಕಿಕೊಂಡು ಕುಟುಂಬ ಸಮೇತ ಬೆಂಗಳೂರಿನಲ್ಲಿರುವ ಸಂಬಂಧಿಕರ ಮದುವೆಗೆ ಹೋದ ವೇಳೆ ಕಳ್ಳರು ಮನೆ ಬೀಗ ಮುರಿದು ನಗನಾಣ್ಯ ದೋಚಿಕೊಂಡು ಹೋಗಿದ್ದಾರೆ. ಕಳ್ಳತನಕ್ಕೂ ಮೊದಲು ಕಳ್ಳರು ಇವರ ಮನೆಯ ಮೇಲೆ ಬಾಡಿಗೆಗಿದ್ದವರ ಮನೆಯ ಕೊಂಡಿ ಹಾಕಿ ಕೆಳಗಡೆ ಇರುವ ಮನೆ ಬೀಗ ಮುರಿದು ನಗನಾಣ್ಯ ದೋಚಿಕೊಂಡು ಹೋಗಿದ್ದಾರೆ ಎನ್ನಲಾಗಿದೆ. ಈ ಸಂಬಂಧ ಅಶೋಕನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

# ಹತ್ತನೇ ತರಗತಿ ವಿದ್ಯಾರ್ಥಿಗಳಿಗೆ ಗಣಿತ ಪಾಠ

## ಮಾಡಿದ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಮಲ್ಲಮ್ಮ ನುಡಿ ವಾರ್ತೆ

ಬೀದರ:ಫೆ.4: ಮಾರ್ಚ.21 ರಿಂದ ಜರುಗಲಿರುವ ಎಸ್.ಎಸ್.ಎಲ್.ಸಿ. ಪರೀಕ್ಷೆ ಹಿನ್ನಲೆಯಲ್ಲಿ ವಿದ್ಯಾರ್ಥಿಗಳ ಸದ್ಯದ ಶೈಕ್ಷಣಿಕ ಚಟುವಟಿಕೆಯನ್ನು ವೀಕ್ಷಿಸಲು ಬೀದರ ಜಿಲ್ಲಾಧಿಕಾರಿಗಳಾದ ಶಿಲ್ಪಾ ಶರ್ಮಾ ಅವರು ಇಂದು ನಗರದ ನೌಬಾದ ಸರ್ಕಾರಿ ಪ್ರೌಢ ಶಾಲೆಗೆ ಭೇಟಿ ನೀಡಿ ಮಕ್ಕಳ ಅಭ್ಯಾಸ ಕ್ರಮವನ್ನು ಪರಿಶೀಲಿಸಿದರು.

ಇದೇ ಸಂದರ್ಭದಲ್ಲಿ ವಿದ್ಯಾರ್ಥಿಗಳೊಂದಿಗೆ ಗಣಿತ ವಿಷಯ ಕುರಿತು ಸಂವಾದ ನಡೆಸಿ ಈವರೆಗೆ ಕಲಿತಾ ಗಣಿತ ಪ್ರಶ್ನೆಗಳನ್ನು ಬಿಡಿಸುವಂತೆ ಹೇಳಿದಾಗ ವಿದ್ಯಾರ್ಥಿಗಳು ಒಂದೆರಡು ಪ್ರಶ್ನೆಗಳನ್ನು ಸರಾಗವಾಗಿ ಬಿಡಿಸಿದರು. ನಂತರ ಗಣಿತ ಪಠ್ಯ ಕ್ರಮದ ಒಂದೆರಡು ಪಾಠಗಳನ್ನು ವಿದ್ಯಾರ್ಥಿಗಳಿಗೆ ಜಿಲ್ಲಾಧಿಕಾರಿಗಳು ಬೋಧಿಸಿದರು. ವಿದ್ಯಾರ್ಥಿಗಳಿಗೆ ಇನ್ನು ಹೆಚ್ಚಿನ ತರಬೇತಿಯನ್ನು ಹಾಗೂ ನಿರಂತರ ಪರೀಕ್ಷೆಯನ್ನು ವಾರಕ್ಕೊಮ್ಮೆ ಕೈಗೊಳ್ಳುವಂತೆ ಬೀದರ ತಾಲ್ಲೂಕಾ ಬಿಇಓ ಡಾ.ಬಿ.ಆರ್.ದೊಡ್ಡೆ ಇವರಿಗೆ ಸೂಚಿಸಿದರು.

ಈಗಾಗಲೇ ಡಿಸೆಂಬರ ತಿಂಗಳಲ್ಲಿ ಹತ್ತನೇ ತರಗತಿ ವಿದ್ಯಾರ್ಥಿಗಳ ಪಠ್ಯಕ್ರಮ ಪೂರ್ಣಗೊಂಡಿದ್ದು, ಉಳಿದ ಮೂರು ತಿಂಗಳಲ್ಲಿ ಪಠ್ಯಕ್ರಮ ಪುನರಾವರ್ತನೆ ಹಾಗೂ ಪಾಸಿಂಗ್ ಪ್ಯಾಕೇಜ್ ನಿಟ್ಟಿನಲ್ಲಿ ವಿಶೇಷ ತರಗತಿಗಳನ್ನು ನಿರಂತರವಾಗಿ ಬೋಧಿಸಲಾಗುತ್ತಿದೆ. ಸಧ್ಯ ಬೀದರನಲ್ಲಿ ಸುಮಾರು 8 ಸಾವಿರ ವಿದ್ಯಾರ್ಥಿಳು ಎಸ್.ಎಸ್.ಎಲ್.ಸಿ.ಪರೀಕ್ಷೆ ಬರೆಯಲಿದ್ದಾರೆ ಎಂದು ಬೀದರ ತಾಲ್ಲೂಕಾ ಬಿಇಓ ಡಾ.ಬಿ.ಆರ್.ದೊಡ್ಡೆ ಅವರು ಜಿಲ್ಲಾಧಿಕಾರಿಗಳಿಗೆ ತಿಳಿಸಿದರು.

# ದೆಹಲಿ ವಿಧಾನಸಭಾ ಚುನಾವಣೆ : ನಾಳೆ ಮತದಾನ, ಭಾರೀ ಭದ್ರತೆ

ನವದೆಹಲಿ,ಜ.4-ಹಿಂದೆ-ಂದೂ ಕಾಣದ ಜಿದ್ದಾ ಜಿದ್ದಿನ ಕುರುಕ್ಷೇತ್ರವಾಗಿರುವ ರಾಷ್ಟ್ರ ರಾಜಧಾನಿ ನವದೆಹಲಿಯ ವಿಧಾನಸಭೆಗೆ ನಾಳೆ ಮತದಾನ ನಡೆಯಲಿದ್ದು ಎಎಪಿ, ಬಿಜೆಪಿ ಹಾಗೂ ಕಾಂಗ್ರೆಸ್ ಸೇರಿದಂತೆ ಪಕ್ಷೇತರ ಅಭ್ಯರ್ಥಿಗಳ ರಾಜಕೀಯ ಭವಿಷ್ಯವನ್ನು ಮತದಾರ ಬರೆಯಲಿದ್ದಾನೆ.



ಸಾಮಾನ್ಯ ಆಡಳಿತ ಇಲಾಖೆ ಹೊರಡಿಸಿರುವ ಅಧಿಸೂಚನೆಯಲ್ಲಿ ಮತದಾನದ ದಿನವಾದ ನಾಳೆ ದೆಹಲಿ ಸರ್ಕಾರ ಸಾರ್ವಜನಿಕರಜಾದಿನವೆಂದು ಘೆಣಟಿಜಜಜಿಟಿಜಜ?ಷಿಸಿದೆ. ನಗರದಾದ್ಯಂತ ಎಲ್ಲಾ ಸರ್ಕಾರಿ ಮತ್ತು ಖಾಸಗಿ ವಲಯದ ಕಚೇರಿಗಳಿಗೆ ರಜೆ ಅನ್ವಯಿಸಲಿದೆ ಎಂದು ಲೆಫ್ಟಿನೆಂಟ್ ಗವರ್ನರ್ ವಿ.ಕೆ. ಸಕ್ಸೆ?ನಾ ತಿಳಿಸಿದ್ದಾರೆ.

70 ಸದಸ್ಯ ಬಲದ ದೆಹಲಿ ವಿಧಾನಸಭೆಗೆ ಫೆಬ್ರವರಿ 5 ರಂದು ಚುನಾವಣೆ ನಡೆಯಲಿದ್ದು, ಫೆಬ್ರವರಿ 8 ರಂದು ಮತ ಎಣಿಕೆ ನಡೆದು ಅಂದೇ ಫಲಿತಾಂಶ ಹೊರಬೀಳಲಿದೆ.ದೆಹಲಿಯ 70 ವಿಧಾನಸಭಾ ಸ್ಥಾನಗಳಿಗೆ ಒಟ್ಟು 1.56 ಕೋಟಿ ಮತದಾರರು ಮತ ಚಲಾಯಿಸಲಿದ್ದಾರೆ. ಕಣದಲ್ಲಿ 699 ಅಭ್ಯರ್ಥಿಗಳು ಸ್ಪರ್ಧಿಸುತ್ತಿದ್ದಾರೆ.

ಈಗಾಗಲೇ ಬಹಿರಂಗ ಚುನಾವಣಾ ಪ್ರಚಾರ ಅಂತ್ಯಗೊಂಡಿದ್ದು, ಚುನಾವಣಾ ಅಧಿಕಾರಿ/ ಸಿಬ್ಬಂದಿಗಳು ಇಂದು ಸಂಜೆ ಮತಗಟ್ಟೆಗಳಿಗೆ ತಲುಪಿದ್ದಾರೆ, ದೆಹಲಿಯಲ್ಲಿ ಸರ್ಕಾರ ರಚನೆ ಮಾಡಲು ಬೇಕಾದ ಮ್ಯಾಜಿಕ್ ನಂಬರ್ 36. ರಾಜ್ಯದ ಆಡಳಿತ ಪಕ್ಷ ಎಎಪಿ. ಈ ಬಾರಿ ಚುನಾವಣೆಯಲ್ಲಿ ಎಎಪಿ, ಕಾಂಗ್ರೆಸ್ ಮತ್ತು ಬಿಜೆಪಿ ತ್ರಿಕೋಣ ಸ್ಪರ್ಧೆ ಇದೆ.

ಚುನಾವಣೆಯನ್ನು ನ್ಯಾಯಸಮತವಾಗಿ ನಡೆಸಲು ಚುನಾವಣಾ ಆಯೋಗ ಸಕಲ ರೀತಿಯಲ್ಲಿ ತಯಾರಿ ನಡೆಸಿದೆ. 3 ಸಾವಿರ ಮತಗಟ್ಟೆಗಳನ್ನು ಸ್ಥಾಪಿಸಲಾಗಿದ್ದು ಎಲ್ಲವೂ ಸೂಕ್ಷ್ಮ ಎಂದು ಗುರುತಿಸಲಾಗಿದೆ. ಆದ್ದರಿಂದ ಚುನಾವಣಾ ಭದ್ರತೆಗೆ ಹೆಚ್ಚಿನ ಗಮನ ನೀಡಲಾಗಿದೆ. 150 ಪ್ಯಾರಾ ಮಿಲಿಟರಿ ಪಡೆಗಳನ್ನು ಭದ್ರತೆಗಾಗಿ ನಿಯೋಜನೆ ಮಾಡಲಾಗಿದೆ. ಅಲ್ಲದೇ ದೆಹಲಿಯ ತುಂಬಾ 30,000 ಪೊಲೀಸ್ ಸಿಬ್ಬಂದಿ ನಿಯೋಜನೆ ಮಾಡಲಾಗಿದೆ.

ಅರವಿಂದ ಕೇಜ್ರಿವಾಲ್ ಆಕ್ಷೇಪ: ಎಎಪಿ ಮುಖ್ಯಸ್ಥ ಅರವಿಂದ ಕೇಜ್ರಿವಾಲ್ ಅವರು ,ಚುನಾವಣಾ ಭದ್ರತೆಗೆ ಗುಜರಾತ್ ಪೊಲೀಸ್ ತುಕಡಿ ನಿಯೋಜನೆ ಮಾಡಿರುವುದಕ್ಕೆ ಆಕ್ಷೇಪವನ್ನು ವ್ಯಕ್ತಪಡಿಸಿದ್ದರು. ಆದರೆ ಚುನಾವಣಾ ಆಯೋಗ ಈ ಕುರಿತು ಸ್ಪಷ್ಟನೆ ನೀಡಿತ್ತು. ಉತ್ತರ ಪ್ರದೇಶದಲ್ಲಿ ಮಹಾಕುಂಭ ಮೇಳ ನಡೆಯುತ್ತಿರುವ ಕಾರಣ ಅಕ್ಕಪಕ್ಕದ ರಾಜ್ಯಗಳ ಪೊಲೀಸರು ಅಲ್ಲಿಗೆ ಭದ್ರತೆಗೆ ನಿಯೋಜನೆಗೊಂಡಿದ್ದಾರೆ. ಆದ್ದರಿಂದ ಗುಜರಾತ್, ಕರ್ನಾಟಕದ ಪೊಲೀಸ್ ತುಕಡಿಗಳನ್ನು ನಿಯೋಜನೆ ಮಾಡಲಾಗಿದೆ ಎಂದು ಹೇಳಿತ್ತು.

ಆಯೋಗದ ದೆಹಲಿ ಚುನಾವಣೆ ಉಸ್ತುವಾರಿ ದೇವೇಶ್ ಚಂದ್ರ ಶ್ರೀ?ವಾಸ್ತವ್ ಮಾತನಾಡಿ, ದೆಹಲಿ ಚುನಾವಣೆಗೆ ಅಗತ್ಯ ಭದ್ರತೆಯನ್ನು ನಿಯೋಜನೆ ಮಾಡಲಾಗಿದೆ. ಶಾಂತಿ ಮತ್ತು ಸುವ್ಯವಸ್ಥೆಯಿಂದ ಚುನಾವಣೆ ನಡೆಸಲಾಗುತ್ತದೆ ಎಂದು ಹೇಳಿದ್ದಾರೆ. ಜನವರಿ ಅಂತ್ಯದಲ್ಲಿ ದೆಹಲಿ ಪೊಲೀಸರು ಅಂತರರಾಜ್ಯ ಪೊಲೀಸ್ ಅಧಿಕಾರಿಗಳ ಸಭೆಯನ್ನು ನಡೆಸಿದ್ದರು. ಚುನಾವಣೆ ಹಿನ್ನಲೆಯಲ್ಲಿ ಮದ್ಯ, ಹಣ, ಡ್ರಗ್ಸ್ ಸಾಗಣೆ ಕುರಿತು ಹೆಚ್ಚಿನ ನಿಗಾ ವಹಿಸಬೇಕು ಎಂದು ವಿವಿಧ ರಾಜ್ಯಗಳ ಪೊಲೀಸರಿಗೆ ಮನವಿ ಮಾಡಿದ್ದರು.

ಎಎಪಿ 2015, 2020ರ ಚುನಾವಣೆಯಲ್ಲಿ ಗೆದ್ದು ಸರ್ಕಾರ ರಚನೆ ಮಾಡಿದೆ. ಈ ಬಾರಿಯೂ ಗೆದ್ದು ಹ್ಯಾಟ್ರಿಕ್ ಗೆಲುವು ದಾಖಲಿಸುವ ಉತ್ಸಾಹದಲ್ಲಿದೆ. ಆದರೆ ಎಎಪಿ ಆಡಳಿತ ವಿರೋಧಿ ಅಲೆ ಎದುರಿಸುತ್ತಿದೆ ಎಂದು ಬಿಜೆಪಿ, ಕಾಂಗ್ರೆಸ್ ಹೇಳುತ್ತಿದ್ದು, ಜನರು ತಮಗೆ ಬೆಂಬಲ ನೀಡಲಿದ್ದಾರೆ ಎಂಬ ನಿರೀಕ್ಷೆಯಲ್ಲಿದ್ದಾರೆ. ಅಂತಿಮವಾಗಿ ಮತದಾರರ ನಾಡಿಮಿಡಿತ ಏನೆಂಬುದು ಶನಿವಾರ ಗೊತ್ತಾಗಲಿದೆ

# ಫೆ.07ರಂದು ವಿವಿಧ

## ಜಯಂತಿಗಳ ಪೂರ್ವಭಾವಿ ಸಭೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಫೆ.04: ಇಲ್ಲಿನ ಜಿಲ್ಲಾಧಿಕಾರಿಗಳ ಕಚೇರಿಯ ಸಭಾಂಗಣದಲ್ಲಿ ಫೆ.07ರಂದು ಸಂತ ಸೇವಾಲಾಲ್, ಛತ್ರಪತಿ ಶಿವಾಜಿ, ಸಂತ ಕವಿ ಸರ್ವಜ್ಞ ಜಯಂತಿಯ ಪೂರ್ವಭಾವಿ ಸಭೆಗಳು ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ ಅವರ ಅಧ್ಯಕ್ಷತೆಯಲ್ಲಿ ನಡೆಯಲಿವೆ.

ಅಂದು ಬೆಳಿಗ್ಗೆ 11 ಗಂಟೆಗೆ ಸಂತ ಸೇವಾಲಾಲ್ ಜಯಂತಿ, 11.30ಕ್ಕೆ ಛತ್ರಪತಿ ಶಿವಾಜಿ ಹಾಗೂ 12 ಗಂಟೆಗೆ ಸಂತ ಕವಿ ಸರ್ವಜ್ಞ ಜಯಂತಿಯ ಪೂರ್ವಭಾವಿ ಸಭೆಗಳು ಹಮ್ಮಿಕೊಳ್ಳಲಾಗಿದೆ. ಸಂಬಂಧಿಸಿದ ಅಧಿಕಾರಿಗಳು ಹಾಗೂ ಸಮಾಜದ ಮುಖಂಡರು ಭಾಗವಹಿಸಿ ಸಲಹೆ ಸೂಚನೆಗಳನ್ನು ನೀಡಬೇಕೆಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮಹಾಕುಂಭದಲ್ಲಿ ಇಂದು ಮೋದಿ ಪವಿತ್ರ ಸ್ನಾನ

ಮಲ್ಲಮ್ಮ ನುಡಿ ವಾರ್ತೆ

ಲಕ್ನೊ, ಫೆ.4- ಉತ್ತರ ಪ್ರದೇಶದ ಪ್ರಯಾಗ್‌ರಾಜ್ ನಲ್ಲಿ ನಡೆಯುತ್ತಿರುವ ಮಹಾ ಕುಂಭ ಮೇಳಕ್ಕೆ ಪ್ರಧಾನಿ ನರೇಂದ್ರ ಮೋದಿ ನಾಳೆ ಭೇಟಿ ನೀಡಿ ಪವಿತ್ರ ಸ್ನಾನ ಮಾಡಲಿದ್ದಾರೆ.ಪ್ರಧಾನಿ ನಾಳೆ ಬೆಳಗ್ಗೆ 10 ಗಂ-ಟೆಗೆ ಮಹಾಕುಂಭವನ್ನು ತಲುಪಲಿದ್ದಾರೆ. ಮಾಘ ಮಾಸದ ಅಷ್ಟಮಿಯಂದು ಅವರು ಪವಿತ್ರ ತ್ರಿವೇಣಿ ಸಂಗಮದಲ್ಲಿ ಸ್ನಾನ ಮಾಡಲಿದ್ದಾರೆ. ಸ್ನಾನದ ನಂತರ ಸಂಗಮದಲ್ಲಿ ಗಂಗೆಯನ್ನು ಪೂಜಿಸಲಿದ್ದಾರೆ.

ನಂತರ ಅವರು ಅರ್ರೈಲ್ ಘಾಟ್ ನಿಂದ ದೋಣಿ ಮೂಲಕ ಸಂಗಮ್ ಗೆ ಹೋಗಲಿದ್ದಾರೆ. ಒಟ್ಟಾರೆ-ಯಾಗಿ, ಪ್ರಧಾನಿ ಮೋದಿ ಸುಮಾರು ಒಂದು ಗಂಟೆ ಪ್ರಯಾಗ್‌ರಾಜ್‌ನಲ್ಲಿ ಇರಲಿದ್ದಾರೆ. ಮಹಾಕುಂಭಮೇಳಕ್ಕೂ ಮುನ್ನ, 2024 ರ ಡಿಸೆಂಬರ್ 13 ರಂದು ಮೋದಿ ಸಂಗಮದ ದಡದಲ್ಲಿ ಗಂಗಾ ನದಿಗೆ ಆರತಿ ಮತ್ತು ಪೂಜೆ ಸಲ್ಲಿಸಿದ್ದರು ಮತ್ತು ಈ ಬಹತ್ ಕಾರ್ಯಕ್ರಮ ಯಶಸ್ವಿಯಾಗಿ ಪೂರ್ಣಗೊಳ್ಳಲಿ ಎಂದು ಪ್ರಾರ್ಥಿಸಿದ್ದರು. ಅವರು 2019 ರ ಕುಂಭ ಮೇಳದ ಆರಂಭದಲ್ಲಿ ಮತ್ತು ನಂತರವೂ ಬಂದಿದ್ದರು.

ಮೂರುಸೇನಾಹೆಲಿಕಾಪ್ಟರ್‌ಗಳು ಅರ್ರೈಲ್‌ನಲ್ಲಿರುವ ಡಿಪಿಎಸ್ ಮೈದಾನದ ಹೆಲಿಪ್ಯಾಡ್‌ನಲ್ಲಿ ಇಳಿಯಲಿದ್ದು, ಅಲ್ಲಿಂದ ಕಾರಿನಲ್ಲಿ ತೆರಳಲಿದ್ದಾರೆ. ಇಲ್ಲಿಂದ ಅವರು ಡಿಪಿಎಸ್ ಹೆಲಿಪ್ಯಾಡ್ ಮೂಲಕ ಪ್ರಯಾಗ್‌ರಾಜ್ ವಿಮಾನ ನಿಲ್ದಾಣವನ್ನು ತಲುಪಲಿದ್ದಾರೆ. ಪ್ರಧಾನಿ ಮೋದಿ ಅವರು ಮಧ್ಯಾಹ್ನ 12.30 ಕ್ಕೆ ವಾಯುಪಡೆಯ ವಿಮಾನದ ಮೂಲಕ ಪ್ರಯಾಗ್‌ರಾಜ್‌ನಿಂದ ಹಿಂತಿರುಗಲಿದ್ದಾರೆ.


**ಪುರಸಭೆ ಕಾರ್ಯಾಲಯ ಚಿಟಗುಪ್ಪಾ**

ಸಂಖ್ಯೆ:ಪು.ಸ.ಚಿ/SWMಕಾಮಗಾರಿ/ಸಿಆರ್- /2024-25 ದಿನಾಂಕ: 03.02.2025

**:: ಅಲ್ಪಾವಧಿ ಟೆಂಡರ್ ಪ್ರಕಟಣೆ ::**

1) ಕಾಮಗಾರಿ / ಸರಕು / ಸೇವೆಯ ವಿವರ: DMA/2024-25/IND3626 Call-2, 2) ಕಾಮಗಾರಿ / ಸರಕು / ಸೇವೆಯಅಂದಾಜು ಮೊತ್ತ: KPPP portal ನಲ್ಲಿ ನಮೂದಿಸಿದಂತೆ, 3) ಗುತ್ತಿಗೆದಾರರ ಅರ್ಹತೆ ವಿವರ: KPPP portal ನಲ್ಲಿ ನಮೂದಿಸಿದಂತೆ, 4) ಟೆಂಡರ ಅರ್ಜಿಯ ಬೆಲೆ ಮತ್ತು ಇ.ಎಂ.ಡಿ. ಮೊತ್ತದ ವಿವರ: KPPP portal ನಲ್ಲಿ ನಮೂದಿಸಿದಂತೆ, 5) ಟೆಂಡರ ಫಾರಂ ಪಡೆಯಲು ಅಂತಿಮ ದಿನಾಂಕ & ಭರ್ತಿ ಮಾಡಿ ಸಲ್ಲಿಸಲು: 10.02.2025 4:30 PM, 6) ಟೆಂಡರ ತೆರೆಯುವ ದಿನಾಂಕ: 11.02.2025 4:31 PM, 7) ಹೆಚ್ಚಿನ ವಿವರಗಳಿಗೆ ಸಂಪರ್ಕಿಸಬೇಕಾದ ವಿಳಾಸ ಕಛೇರಿ ವಿಳಾಸ, ದೂರವಾಣಿ ಸಂಖ್ಯೆ: ಮುಖ್ಯಾಧಿಕಾರಿಗಳು, ಪುರಸಭೆ ಚಿಟಗುಪ್ಪ 08483-277536, Email : itstaff_ulb_chittguppa@yahoo.com, 8) ಅಂತರಜಾಲ ತಾಣದ ವಿಳಾಸ: www.kppp.karnataka.gov.in

ಸಹಿ/- ಮುಖ್ಯಾಧಿಕಾರಿ
ಪುರಸಭೆ ಚಿಟಗುಪ್ಪಾ

ವಾ.ಸಾ.ಸಂ.ಇ/ಬೀದರ/381/ಕೆ.ಎಸ್.ಎಂ.ಸಿ.&ಎ/2024-25


Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.